ಸಂಪುಟ: 13 Volume | ಸಂಚಿಕೆ: 324 Issue | ಪುಟಗಳು 08 Pages | ಶನಿವಾರ 14 ಫೆಬ್ರವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕ್ರೀಡೆಯಲ್ಲಿ ಕೆಲವೊಮ್ಮೆ ನೀವು ಅಪಾಯಗಳನ್ನು ಆಹ್ವಾನಿಸಲೇಬೇಕು. ಆದರೆ ವಾಸ್ತವದ ಅಪಾಯಗಳನ್ನು ಎದುರಿಸಿ, ಹುಚ್ಚು ಅಪಾಯಗಳನ್ನಲ್ಲ.

–ಸರ್ಗಿ ಬುಬ್ಕಾ

# ಅಣೆಕಟ್ಟೆ ಸುರಕ್ಷತೆಗೆ ಅಸ್ತು

## ಅಂತಾರಾಷ್ಟ್ರೀಯ ಅಣೆಕಟ್ಟು ಸುರಕ್ಷತಾ ಸಮ್ಮೇಳನದಲ್ಲಿ ಮುಖ್ಯಮಂತ್ರಿ ಅಭಿಮತ


• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಣೆಕಟ್ಟುಗಳು ಕೇವಲ ಕಾಂಕ್ರಿಟ್ ಮತ್ತು ಉಕ್ಕಿನ ರಚನೆಗಳಲ್ಲಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಪ್ರತಿಷ್ಠಿತ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿರುವ ಅಂತಾರಾಷ್ಟ್ರೀಯ ಅಣೆಕಟ್ಟು ಸುರಕ್ಷತಾ ಸಮ್ಮೇಳನ 2026 ಅನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಮೊದಲ ದೂರದರ್ಶಿ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರೂ ಅವರು ಅಣೆಕಟ್ಟುಗಳನ್ನು ಆಧುನಿಕ ಭಾರತದ ದೇವಾಲಯಗಳು ಎಂದು ಕರೆದಿದ್ದರು. ಇವು ನಮ್ಮ ಸಾಮೂಹಿಕ ಆಕಾಂಕ್ಷೆಗಳ ಸಂಕೇತಗಳು. ಕೃಷಿ ಸಮೃದ್ಧಿ ಮತ್ತು ಕೈಗಾರಿಕಾ ಪ್ರಗತಿಯ ಜೀವಾಳವೂ ಆಗಿವೆ ಎಂದು ನುಡಿದಿದ್ದಾರೆ.

ಬೆಂಗಳೂರು ನಗರವು ನಾವೀನ್ಯತೆ, ತಂತ್ರಜ್ಞಾನ ಮತ್ತು ಸಂಶೋಧನೆಯ ತವರೂರು. ಅಣೆಕಟ್ಟು ಸುರಕ್ಷತೆ ಮತ್ತು ಸ್ಥಿರತೆ ಕುರಿತ ಚರ್ಚೆಗೆ ಇದು ಅತ್ಯಂತ ಸೂಕ್ತವಾದ ಸ್ಥಳ ಎಂದು ನಾನು ಭಾವಿಸಿದ್ದೇನೆ ಎಂದಿದ್ದಾರೆ.

**ಅಣೆಕಟ್ಟೆ ಸುರಕ್ಷತೆ:** ಭಾರತದಲ್ಲಿಯೇ ಅತಿ ಹೆಚ್ಚು ಅಣೆಕಟ್ಟುಗಳನ್ನು ಹೊಂದಿರುವ ರಾಜ್ಯಗಳಲ್ಲಿ ಕರ್ನಾಟಕವೂ ಒಂದಾಗಿದೆ. ಅಣೆಕಟ್ಟು ಸುರಕ್ಷತೆ ಕುರಿತು ನಡೆಯುವ ಚರ್ಚೆಗಳಲ್ಲಿ ಅನುಭವ ಮತ್ತು ಜವಾಬ್ದಾರಿ ಎರಡನ್ನೂ ಹೊಂದಿದ್ದೇವೆ ಎಂದು ತಿಳಿಸಿದ್ದಾರೆ.



### ಅಣೆಕಟ್ಟು ಸುರಕ್ಷತೆ ಎಲ್ಲರ ಜವಾಬ್ದಾರಿ

- ಸುರಕ್ಷತೆ ಎನ್ನುವುದು ಒಂದೇ ಇಲಾಖೆಯ ಜವಾಬ್ದಾರಿಯಲ್ಲ. ಇದು ರಾಷ್ಟ್ರೀಯ ಕರ್ತವ್ಯ. ಇದಕ್ಕೆ ಎಲ್ಲಾ ಸಂಸ್ಥೆಗಳ ಸಂಘಟಿತ ಕ್ರಮಗಳ ಅಗತ್ಯವಿದೆ.
- ಹೂಳು ಶೇಖರಣೆ, ಪರಿಸರದ ಅವನತಿ, ಜಲಾಶಯಗಳಿಂದ ಉಂಟಾಗುವ ಪರಿಸರ ಬದಲಾವಣೆಯು, ನೀರು ಸಂಗ್ರಹ, ನದಿಗಳ ಆರೋಗ್ಯಕ್ಕೆ ಅಪಾಯ
- ಅಣೆಕಟ್ಟುಗಳು ಈಗ ಡಿಜಿಟಲ್ ವ್ಯವಸ್ಥೆಯಿಂದ ಕಾರ್ಯನಿರ್ವಹಿಸುತ್ತಿವೆ. ಸೈಬರ್ ಸುರಕ್ಷತೆ, ತಾಂತ್ರಿಕ ವಿಧ್ವಂಸಕತೆಯಿಂದ ರಕ್ಷಣೆ ನಮ್ಮೆಲ್ಲರ ಹೊಣೆ

### ರಾಷ್ಟ್ರೀಯ ಭದ್ರತೆ ಅನಿವಾರ್ಯ

ಭೂಕಂಪನದ ಅಪಾಯಗಳು, ಜಲಾಶಯಗಳಲ್ಲಿ ಹೂಳು ಶೇಖರಣೆ, ಹಳೆಯ ಕಟ್ಟಡಗಳ ಮೇಲಿನ ಒತ್ತಡ ಇವೆಲ್ಲಾ ಸಂಕೀರ್ಣ ಮತ್ತು ಪರಸ್ಪರ ಸಂಬಂಧಿತ ಅಪಾಯಗಳನ್ನು ಸೃಷ್ಟಿಸಿವೆ. ಅಣೆಕಟ್ಟು ಸುರಕ್ಷತೆ ಕೇವಲ ತಾಂತ್ರಿಕ ವಿಚಾರವಾಗಿ ನಂತ್ರ ನೆನಪಿಸಿಕೊಳ್ಳುವ ವಿಷಯವಲ್ಲ, ಅದು ರಾಷ್ಟ್ರೀಯ ಭದ್ರತೆಯ ಅನಿವಾರ್ಯ ಅಂಶವಾಗಿದೆ.

### ನಾಡಲ್ಲಿ 231 ಅಣೆಕಟ್ಟು

ಈ ಸಮ್ಮೇಳನದಲ್ಲಿ ಒಟ್ಟುಗೂಡಿ ಅಣೆಕಟ್ಟು ಸುರಕ್ಷತೆ ಮತ್ತು ಸುಸ್ಥಿರ ಜಲ ಸಂಪನ್ಮೂಲ ನಿರ್ವಹಣೆಯ ಜವಾಬ್ದಾರಿ ಕುರಿತು ಚರ್ಚಿಸಲಾಗಿದೆ. ಭಾರತದಲ್ಲಿ ಇಂದು 6,628 ನಿರ್ದಿಷ್ಟ ಅಣೆಕಟ್ಟುಗಳಿವೆ. ಕರ್ನಾಟಕದಲ್ಲಿ 231 ನಿರ್ದಿಷ್ಟ ಅಣೆಕಟ್ಟುಗಳಿದ್ದು, ಈ ಹಿನ್ನೆಲೆಯಲ್ಲಿ ನಮ್ಮ ನಾಡು ದೇಶದಲ್ಲಿ ಆರನೇ ಸ್ಥಾನದಲ್ಲಿದೆ ಎಂದು ಸಿಎಂ ವಿವರ ನೀಡಿದ್ದಾರೆ.

### ಅಣೆಕಟ್ಟೆಗೆ ಕಾಯಕಲ್ಪ

ಶೇ.70ರಷ್ಟು ಅಣೆಕಟ್ಟುಗಳು 25 ವರ್ಷಗಳಿಗೂ ಮೇಲ್ಪಟ್ಟು ಹಳೆಯದಾಗಿದ್ದು, ಇವುಗಳ ವ್ಯವಸ್ಥಿತ ಸುರಕ್ಷತಾ ಮೌಲ್ಯಮಾಪನ ಆಧುನೀಕರಣ ಮತ್ತು ಅಪಾಯ ಮುನ್ಸೂಚನೆಗಳನ್ನು ಒಳಗೊಂಡ ಕಾರ್ಯಾಚರಣೆಯನ್ನು ಕೈಗೊಳ್ಳುವ ತುರ್ತು ಇದೆ ಎಂದು ಸಾರುತ್ತಿವೆ. ಪ್ರಸ್ತುತ ಹವಾಮಾನ ಬದಲಾವಣೆಯಿಂದ ಉಂಟಾಗುವ ನೀರಿನ ವೈಪರೀತ್ಯವಿದ್ದು ಕಾಯಕಲ್ಪ ಅಗತ್ಯವಿದೆ.

### ಜಲಾಶಯಗಳಿಂದ ಹೆಚ್ಚು ಶಕ್ತಿ

ಅಣೆಕಟ್ಟುಗಳು ಕರ್ನಾಟಕವನ್ನು ಸಾಮಾಜಿಕ, ಆರ್ಥಿಕ ಸ್ಥಿತಿಯನ್ನಲ್ಲದೆ ಪರಿಸರವನ್ನೂ ಮಾರ್ಪಡಿಸಿವೆ. ಜಲವಿದ್ಯುತ್ ಮತ್ತು ಬಹುಪಯೋಗಿ ಜಲಾಶಯಗಳು ನೀರಿನ ಭದ್ರತೆಯನ್ನು ಒದಗಿಸುತ್ತಿವೆ. ಜಲವಿದ್ಯುತ್ ಸಾಮರ್ಥ್ಯ 4,800 ಮೆಗಾವ್ಯಾಟ್. ಜಲಾಶಯಗಳಲ್ಲಿ ನೂರಾರು ಟಿಎಂಸಿ ಅಡಿ ನೀರನ್ನು ಸಂಗ್ರಹಿಸಬಹುದು ಎಂದಿದ್ದಾರೆ.

## ಇಂದು ಭೀಮಣ್ಣ ಖಂಡ್ರೆ ನುಡಿನಮನ

**ಬೆಂಗಳೂರು:** ಇತ್ತೀಚೆಗೆ ನಿಧನರಾದ ಮಾಜಿ ಸಚಿವ, ಶತಾಯುಷಿ ಲೋಕನಾಯಕ ಡಾ. ಭೀಮಣ್ಣ ಖಂಡ್ರೆ ಅವರ ಸ್ಮರಣಾರ್ಥ ವೀರಶೈವ ಲಿಂಗಾಯತ ಮಹಾಸಭಾ ಮತ್ತು ಭಾಲ್ಕಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ವತಿಯಿಂದ ಫೆ.14ರ ಶನಿವಾರ ಸಂಜೆ ಬೆಂಗಳೂರಿನಲ್ಲಿ ನುಡಿನಮನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.



ಬೆಂಗಳೂರು ಅರಮನೆ ಆವರಣದ ಗೇಟ್ 4ರಲ್ಲಿರುವ ಗಾಯತ್ರಿ ವಿಹಾರದಲ್ಲಿ ಶನಿವಾರ ಸಂಜೆ 5.30ಕ್ಕೆ ನಡೆಯುವ ಕಾರ್ಯಕ್ರಮದಲ್ಲಿ, ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ, ತರಳಬಾಳು ಬೃಹನ್ಮಠದ ಡಾ. ಶಿವಮೂರ್ತಿ ಶಿವಾಚಾರ್ಯರು, ಸಿದ್ದಗಂಗಾಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ, ಭಾಲ್ಕಿ ಹಿರೇಮಠದ ಡಾ. ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ರಾಜ್ಯಸಭೆಯ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಸಭಾಪತಿ ಬಸವರಾಜ ಹೊರಟ್ಟಿ, ಸಭಾಧ್ಯಕ್ಷ ಯು.ಟಿ. ಖಾದರ್, ಕೇಂದ್ರ ಸಚಿವ ವಿ.ಸೋಮಣ್ಣ, ಮಾಜಿ ಸಿಎಂ ಎಂ. ವೀರಪ್ಪಮೊಯ್ಲಿ, ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯಾ, ಸಚಿವರಾದ ಎಚ್.ಕೆ. ಪಾಟೀಲ್, ಎಂ.ಬಿ.ಪಾಟೀಲ್ ಮತ್ತಿತರರು ನುಡಿನಮನ ಸಲ್ಲಿಸಲಿದ್ದಾರೆ. 4 ಬಾರಿ ಶಾಸಕರಾಗಿ, 2 ಅವಧಿಗೆ ವಿಧಾನಪರಿಷತ್ ಸದಸ್ಯರಾಗಿ, ವೀರಪ್ಪ ಮೊಯ್ಲಿ ಅವರ ಸಚಿವ ಸಂಪುಟದಲ್ಲಿ ಸಾರಿಗೆ ಸಚಿವರಾಗಿ ಸೇವೆ ಸಲ್ಲಿಸಿದ್ದ ಡಾ. ಭೀಮಣ್ಣ ಖಂಡ್ರೆ ಅವರು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಡಾ.ಭೀಮಣ್ಣ ಖಂಡ್ರೆ ಅವರು ಸಭಾಕ್ಕೆ ಸ್ವಂತ ನಿವೇಶನ ಖರೀದಿಸಿ, ಭವ್ಯ ಕಟ್ಟಡ ನಿರ್ಮಿಸಿ ಸಭಾ ಸ್ವಾವಲಂಬಿಯಾಗುವಂತೆ ಮಾಡಿದ್ದರು.



ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾಗಿರುವ ನಟಿ ಜಯಮಾಲಾ ಅವರು ಇಂದು ಮುಖ್ಯಮಂತ್ರಿಗಳ ಗೃಹಕಚೇರಿ ಕೃಷ್ಣಾದಲ್ಲಿ ಭೇಟಿಯಾಗಿ, ತಮ್ಮ ಬೇಡಿಕೆಗಳ ಬಗ್ಗೆ ಚರ್ಚಿಸಿದರು. ಈ ಸಂದರ್ಭದಲ್ಲಿ ಮಂಡಳಿಯ ಉಪಾಧ್ಯಕ್ಷರಾದ ಎಂ.ಕೆ. ಸುಂದರ್ ರಾಜನ್, ಎಂ.ಮಂಜು ಮತ್ತಿತರರು ಉಪಸ್ಥಿತರಿದ್ದರು.



ಹಂಪಿ ಉತ್ಸವ –2026 ಅಂಗವಾಗಿ ಹಂಪಿ ಗ್ರಾಮದ ಮಾತಂಗ ಪರ್ವತ ಮೈದಾನದಲ್ಲಿ ಆಯೋಜಿಸಲಾಗಿರುವ ತೋಟಗಾರಿಕೆ ಮತ್ತು ಫಲಪುಷ್ಪ, ಕೃಷಿ, ಅರಣ್ಯ, ಮತ್ಸ್ಯ ಹಾಗೂ ವ್ಯಾಪಾರ ಮಳಿಗೆಗಳಿಗೆ ಶುಕ್ರವಾರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಉದ್ಘಾಟಿಸಿ, ವಸ್ತು ಪ್ರದರ್ಶನಗಳಿಗೆ ಚಾಲನೆ ನೀಡಿದ್ದಾರೆ.




ಹುಮನಾಬಾದ್: ಸಾರಿಗೆ ಹಾಗೂ ಮುಜರಾಯಿ ಸಚಿವರು ಆದ ರಾಮಲಿಂಗಾರೆಡ್ಡಿ ರವರಿಗೆ ಶುಕ್ರವಾರ ಭೇಟಿ ಮಾಡಿ ಸನ್ಮಾನಿಸಿ, ಸುಕ್ಷೇತ್ರ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿಗೆ ರು. 30 ಲಕ್ಷ ಮಂಜೂರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಅಧ್ಯಕ್ಷ ರಮೇಶರೆಡ್ಡಿ, ಕಾರ್ಯದರ್ಶಿ ಬ್ಯಾಂಕ್ ರೆಡ್ಡಿ, ಸದಸ್ಯರು ಆದ ಶಿವಾರೆಡ್ಡಿ, ಖಜಾಂಚಿ ರಾಮರಡ್ಡಿ, ಮಹೂನರಡ್ಡಿ, ಸಿದ್ದಾರೆಡ್ಡಿ, ಜೈಕಾಂತ–ರೆಡ್ಡಿ, ಸೇರಿದಂತೆ ಇತರರಿದ್ದರು.

## ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಕಲಾತಂಡಗಳ ಒದಗಿಸಲು ಮನವಿ



**ಬೀದರ್:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಈ ಬಾರಿ ಬೀದರದಲ್ಲಿ ಆಯೋಜಿಸಲಾಗುತ್ತಿರುವ 40ನೇ ಪತ್ರಕರ್ತರ ರಾಜ್ಯ ಸಮ್ಮೇಳನದ ಮೆರವಣಿಗೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಂಡಗಳನ್ನು ಕಳುಹಿಸಿಕೊಡುವಂತೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಗಾಯತ್ರಿ ಅವರಿಗೆ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ನೇತೃತ್ವದ ತಂಡ ಮನವಿ ಮಾಡಿದೆ. ಸಂಘದ ಮನವಿ ಸ್ವೀಕರಿಸಿ ಮಾತನಾಡಿದ ನಿರ್ದೇಶಕಿ ಗಾಯತ್ರಿ ಅವರು, ಕಲಾ ತಂಡಗಳನ್ನು ನೀಡುವುದಾಗಿ ಭರವಸೆ ನೀಡಿದ್ದಾರೆ.

## ಏಳು ಮಂದಿ ಸ್ಥಳದಲ್ಲೇ ಸಾವು



**ದೇವನಹಳ್ಳಿ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಎಂ ಸತ್ಯವರ ಗ್ರಾಮದ ಬಳಿ ಇಂದು ಶುಕ್ರವಾರ ಬೆಳಗ್ಗೆ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಏಳು ಮಂದಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಹೊಸಕೋಟೆ?ದಾಬಸ್ಪೇಟೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಕ್ಯಾಂಟರ್ ವಾಹನ, ಬೈಕ್ ಹಾಗೂ ಎಕ್ಸ್ ಯುವಿ ಕಾರಿನ (XUV Car) ನಡುವೆ ಸರಣಿ ಡಿಕ್ಕಿ ಸಂಭವಿಸಿ ಈ ದುರ್ಘಟನೆ ನಡೆದಿದೆ. ಘಟನೆ ಸ್ಥಳದಲ್ಲೇ ಕಾರಿನಲ್ಲಿದ್ದ ಆರು ಮಂದಿ ಮತ್ತು ಬೈಕ್ ಸವಾರ ಮೃತಪಟ್ಟಿದ್ದಾರೆ.







**ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನ ತೊರೆಯುವ ಪ್ರಶ್ನೆಯೇ ಇಲ್ಲ. ನಾಯಕತ್ವದ ವಿಚಾರದಲ್ಲಿ ಈ ಕ್ಷಣ ಯಾವುದೇ ಚರ್ಚೆಗೆ ಅವಕಾಶವಿಲ್ಲ: ಸಚಿವ ಎಚ್.ಸಿ. ಮಹಾದೇವಪ್ಪ**

# ಆಂತರಿಕ ಶಾಂತಿಯೇ ನಿಜವಾದ ಸಂತೋಷದ ಮೂಲ: ಪಿಯೂಷ್

ಮಲ್ಲಮ್ಮ ನುಡಿ ವಾರ್ತೆ

ಬೀದರ್: ನಗರದ ಜನವಾಡಾ ರಸ್ತೆಯಲ್ಲಿರುವ ಬ್ರಹ್ಮಾಕುಮಾರಿಸ್ ಪಾವನಧಾಮ ಕೇಂದ್ರದಲ್ಲಿ 90ನೇ ಮಹಾ ಶಿವರಾತ್ರಿ ಅಂಗವಾಗಿ ಶಿವಧ್ವಜಾರೋಹಣ ಭಕ್ತಿ ಭಾವಪೂರ್ಣದಿಂದ ನೆರವೇರಿತು. ಕಾರ್ಯಕ್ರಮದಲ್ಲಿ ದೆಹಲಿಯ ಖ್ಯಾತ ಪ್ರೇರಣಾದಾಯಕ ಪ್ರವಚನಕಾರರಾದ ರಾಜಯೋಗಿ ಭಾಯಿಜಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಶಿವರಾತ್ರಿಯ ಆಧ್ಯಾತ್ಮಿಕ ಮಹತ್ವವನ್ನು ವಿವರಿಸಿದರು.



ಶಿವಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, “ಮನಸ್ಸು ಸಾಗರದಂತೆ ಶಾಂತವಾಗಿದ್ದರೆ ಮಾತ್ರ ನಿಜವಾದ ಸುಖ ಅನುಭವಿಸಲು ಸಾಧ್ಯ. ಹೊರಗಿನ ಪರಿಸ್ಥಿತಿಗಳಿಗಿಂತ ಒಳಗಿನ ಶಾಂತಿ ಮುಖ್ಯ” ಎಂದು ತಿಳಿಸಿದರು. ‘ಶಿವರಾತ್ರಿ’ ಎಂಬ ಪದದಲ್ಲಿ ‘ರಾತ್ರಿ’ ಅಂದರೆ ಅಜ್ಞಾನ ಮತ್ತು ಅಂಧಕಾರ. ಇಂದಿನ ಸಮಾಜದಲ್ಲಿ ನೈತಿಕ, ಮಾನವೀಯ ಹಾಗೂ ಆಧ್ಯಾತ್ಮಿಕ ಮೌಲ್ಯಗಳ ಕುಸಿತವೇ ಧರ್ಮಗ್ಲಾನಿ ಎಂದು ಶಾಸ್ತ್ರಗಳಲ್ಲಿ ಹೇಳಲಾಗಿದೆ ಎಂದು ಅವರು ವಿವರಿಸಿದರು.

ಪರಮಜ್ಯೋತಿ ಸ್ವರೂಪನಾದ ಪರಮಾತ್ಮ ಶಿವ ತಂದೆಯು ಮಾನವಕುಲವನ್ನು ದುಃಖ ಮತ್ತು ಅಶಾಂತಿಯಿಂದ ಮುಕ್ತಗೊಳಿಸಲು ಈ ಅಂಧಕಾರಮಯ ಯುಗದಲ್ಲಿ ಅವತರಿಸಿದ್ದಾರೆ. ಆತ್ಮಗಳು ಪ್ರೀತಿಯಿಂದ ಶಿವನನ್ನು ಸ್ಮರಿಸಿದಾಗ ಸುಖ-ಶಾಂತಿ ಮತ್ತು ಪವಿತ್ರತೆಯನ್ನು ಪಡೆಯಲು ಸಾಧ್ಯ. ಇದೇ ಸಹಜ ರಾಜಯೋಗ ಮಾರ್ಗ ಎಂದು ತಿಳಿಸಿದರು.

ಉಪವಾಸದ ಅರ್ಥವನ್ನು ವಿವರಿಸಿದ ಅವರು, “ಉಪ ಎಂದರೆ ಹತ್ತಿರ, ವಾಸ ಎಂದರೆ ನೆಲೆಸು. ಮನಸ್ಸು ಮತ್ತು ಬುದ್ಧಿಯಿಂದ ಪರಮಾತ್ಮನ ಸಮೀಪದಲ್ಲಿರುವುದೇ ನಿಜವಾದ ಉಪವಾಸ” ಎಂದು ಹೇಳಿದರು. ಶಿವನಿಗೆ ಅರ್ಪಿಸುವ ಮೂರು ದಳದ ಬಿಲ್ವಪತ್ರೆ ಮನ-ವಚನ-ಕರ್ಮಗಳ ಸಮರ್ಪಣೆಯ ಸಂಕೇತವಾಗಿದೆ ಎಂದರು.

ನಿಜವಾದ ಜಾಗರಣೆ ಎಂದರೆ ಇಡೀ ರಾತ್ರಿ ಜಾಗೃತಿಯಾಗಿರುವುದಲ್ಲ; ಮನಸ್ಸಿನಲ್ಲಿ ಆಸುರಿ ಪ್ರವೃತ್ತಿಗಳು ಮತ್ತು ಅಜ್ಞಾನ ಪ್ರವೇಶಿಸದಂತೆ ಎಚ್ಚರಿಕೆಯಿಂದಿರುವುದು. ಪಾಪಕರ್ಮಗಳಿಂದ ದೂರವಿದ್ದು, ಅಪಶಬ್ದಗಳನ್ನು ಬಳಸದಂತೆ, ಪ್ರತಿಯೊಂದು ಚಲನವಲನಗಳ ಮೇಲೂ ಗಮನವಿಟ್ಟು ಬದುಕಬೇಕು ಎಂದು ಕರೆ ನೀಡಿದರು. ಈ ವರ್ಷದ ಶಿವರಾತ್ರಿಯನ್ನು ಅರ್ಥಪೂರ್ಣವಾಗಿ ಆಚರಿಸಿ ಶಿವನಿಂದ ಸುಖ, ಶಾಂತಿ, ಪವಿತ್ರತೆ ಹಾಗೂ ಸಮೃದ್ಧಿಯನ್ನು ಪಡೆಯೋಣ ಎಂದು ಸಂದೇಶ ನೀಡಿದರು.

ಕಾರ್ಯಕ್ರಮದಲ್ಲಿ ಪಾವನಧಾಮ ಕೇಂದ್ರದ ಸಂಚಾಲಕಿ ಬಿ.ಕೆ. ಪ್ರತಿಮಾ ಬಹೆನ್‌ಜಿ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿ, “ಮಹಾ ಶಿವರಾತ್ರಿ ಪವಿತ್ರ ಸಂದರ್ಭದಲ್ಲಿ ವ್ಯಸನಮುಕ್ತ ಜೀವನ ನಡೆಸುವ ಸಂಕಲ್ಪ ಮಾಡೋಣ. ನಮ್ಮ ಕುಟುಂಬ, ಸಮಾಜ ಹಾಗೂ ದೇಶವನ್ನು ನಶಾಮುಕ್ತಗೊಳಿಸುವ ನಿಟ್ಟಿನಲ್ಲಿ ಶ್ರಮಿಸೋಣ” ಎಂದು ಕರೆ ನೀಡಿದರು. ಈಶ್ವರೀಯ ವಿಶ್ವವಿದ್ಯಾಲಯದ ಸ್ವಾಸ್ಥ್ಯ ವಿಭಾಗದಿಂದ ವಿಶೇಷ ಜಾಗೃತಿ ಕಾರ್ಯಕ್ರಮವೂ ಹಮ್ಮಿಕೊಳ್ಳಲಾಗಿತ್ತು.

ಇದೇ ಸಂದರ್ಭದಲ್ಲಿ 90ನೇ ಶಿವ ಜಯಂತಿ ನಿಮಿತ್ತ ಕೇಕ್ ಕತ್ತರಿಸಿ ಶಿವನ ಹುಟ್ಟುಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಹಿರಿಯ ರಾಜಯೋಗ ಶಿಕ್ಷಕಿ ಬಿ.ಕೆ. ಗುರುದೇವಿ ಅಕ್ಕ ಕಾರ್ಯಕ್ರಮವನ್ನು ನಿರೂಪಿಸಿದರು.

ವೇದಿಕೆ ಮೇಲೆ ಬಿ.ಕೆ. ವಿಜಯಲಕ್ಷ್ಮೀ ಬಹೆನ್‌ಜಿ, ಬಿ.ಕೆ. ಜ್ಯೋತಿ ಬಹೆನ್‌ಜಿ, ಬಿ.ಕೆ. ಮಂಗಲಾ ಬಹೆನ್‌ಜಿ, ಶಿವಶರಣಪ್ಪ ವಾಲಿ ಸೇರಿದಂತೆ ಜಿಲ್ಲೆಯ ವಿವಿಧ ಸೇವಾ ಕೇಂದ್ರಗಳ ಬ್ರಹ್ಮಾಕುಮಾರಿ ಸಹೋದರಿಯರು ಉಪಸ್ಥಿತರಿದ್ದರು.

# ಧಾರ್ಮಿಕ ಶ್ರದ್ಧಾಭಕ್ತಿಯಿಂದ ನಡೆದ ಸಾಮೂಹಿಕ ಶ್ರೀ ಲಕ್ಷ್ಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ) ವತಿಯಿಂದ ತಾಲೂಕಿನ ಠಾಣಾ ಕುಶನೂರ ಗ್ರಾಮದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಸಾಮೂಹಿಕ ಶ್ರೀ ಲಕ್ಷ್ಮಿ ಪೂಜೆಯು ಅತ್ಯಂತ ವೈಭವದಿಂದ ನೆರವೇರಿತು. ಸಾವಿರಾರು ಮಹಿಳಾ ಭಕ್ತರು ಏಕಕಾಲದಲ್ಲಿ ಕುಳಿತು ಮಹಾಲಕ್ಷ್ಮಿಯ ಆರಾಧನೆ ಮಾಡಿದ್ದು ಈ ಕಾರ್ಯಕ್ರಮದ ವಿಶೇಷವಾಗಿತ್ತು.

ಸಮೂಹಿಕ ಶ್ರೀ ಲಕ್ಷ್ಮಿ ಪೂಜಾ ಸಮಿತಿಯ ಅಧ್ಯಕ್ಷೆ ಶ್ರೀಮತಿ ಲಲಿತಾ ಚೆನ್ನಪ್ಪ, ಉಪಾಧ್ಯಕ್ಷೆ ಶ್ರೀಮತಿ ಸರಸ್ವತಿ ಕೃಷ್ಣಾ, ಕಾರ್ಯದರ್ಶಿ ಶ್ರೀ ವಿಲಾಸ ಜೋಹಾರೆ (ಮೇಲ್ವಿಚಾರಕರು, ಠಾಣಾಕುಶನೂರ ವಲಯ), ಸಹಕಾರ್ಯದರ್ಶಿ ಶ್ರೀಮತಿ ಕೊಂಡಾಬಾಯಿ ಬಾಬುರಾವ,

ಕೋಶಾಧಿಕಾರಿಗಳು ಶ್ರೀಮತಿ ಈಶ್ವರಿ ವಿಠ್ಠಲ, ಕಾರ್ಯಕಾರಿ ಸಮಿತಿ ಸದಸ್ಯರು: ಸುನಿತಾ ರಮೇಶ, ಸುನಿತಾ ರಾಜಕುಮಾರ, ಮಂಗಳ ಜ್ಯೋತಿ, ಮಹಾನಂದ ರಾಮಶೆಟ್ಟಿ, ಸಂಗೀತ ನೀಲಕಂಠ ರಂಡ್ಯಾಳೆ, ಸರಸ್ವತಿ ಬಸವರಾಜ, ಶಕುಂತಲಾ ಧೂಳಪ್ಪ, ಜಯಶ್ರೀ ಶರಣಬೆಗಂ ಸೇರಿದಂತೆ ಇನ್ನಿತರ ಸೇರಿದರು.

# ಕಲಿಕಾ ಹಬ್ಬದಿಂದ ಗುಣಮಟ್ಟದ ಶಿಕ್ಷಣ ಹೆಚ್ಚಳ

ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

ಕಲಿಕಾ ಹಬ್ಬದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ಶಿಕ್ಷಣದ ಗುಣಮಟ್ಟ ಹೆಚ್ಚಳವಾಗಲಿದೆ ಎಂದು ಕಮಲನಗರದ ಪಿಎಸ್‌ಐ ಆಶಾ ರಾಠೋಡ ಹೇಳಿದರು. ಗತಾಲೂಕಿನ ಚ್ಯಾಂಡೇಶ್ವರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ನಡೆದ ಸಮೂಹ ಮಟ್ಟದ ಮಕ್ಕಳ ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಕ್ಕಳಲ್ಲಿ ಅಡಗಿರುವ ಜ್ಞಾನವನ್ನು ಇಂತಹ ವೇದಿಕೆ ಮೂಲಕ ಹೆರತಂದು ಅವರ ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಅನುಕೂಲವಾಗಲಿದೆ ಎಂದರು.



ಗೋಲ್ಡನ್ ವ್ಯಾಲಿ ಶಿಕ್ಷಣ ಸಂಸ್ಥೆ ಅಧ್ಯಕ್ಷೆ ಜಯಶ್ರೀ ಪ್ರವೀಣ ಬಿರಾದಾರ ಮಾತನಾಡಿ, ಮಕ್ಕಳಲ್ಲಿ ಅಡಗಿರುವ ಜ್ಞಾನವನ್ನು ಇಂತಹ ವೇದಿಕೆ ಮೂಲಕ ಹೆರತಂದು ಅವರ ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಅನುಕೂಲವಾಗಲಿದೆ ಎಂದರು. ಎಸ್‌ಡಿಎಂಸಿ ಅಧ್ಯಕ್ಷ ರಾಜಕುಮಾರ ಧಬಾಲೆ ಮಾತನಾಡಿ, ಪುಸ್ತಕವನ್ನು ಓದುವುದು, ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾ ಜ್ಞಾನದ ಚಟುವಟಿಕೆಗಳನ್ನು ಬಲಪಡಿಸುವ ಮೂಲಕ ಮಕ್ಕಳ ಜ್ಞಾನವನ್ನು ಹೆಚ್ಚಿಸುವ ಕಲಿಕಾ ಹಬ್ಬವನ್ನು ಅತ್ಯಂತ ಮಹತ್ವದ ಘಟ್ಟವಾಗಿದೆ ಎಂದರು. ಬಿ.ಆರ್. ಸಿ. ಶಶಿಕಾಂತ ಬಿಡವೆ ಮಾತನಾಡಿದರು.

ಸಿ.ಆರ್.ಸಿ ಶಿವಕುಮಾರ ಹೊನ್ನಾಳೆ, ಸಿಆರ್. ಸಿ. ರಮಾಕಾಂತ ಕಾಳೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಪಾಟೀಲ, ರಾಜ್ಯ ಸರಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಲಿಂಗಾನಂದ ಮಹಾಜನ, ಗುರುಬಸಯ್ಯ ಸ್ವಾಮಿ, ಶಿವಾಜಿ ಬಿರಾದರ, ರೋಹಿತ, ಕಾಶಿಬಾಯಿ ಗುಡ್ಡಾ, ಮಹಾದೇವ ಮಡಿವಾಳಪ್ಪ, ಶಿವರಾಜ ಜಲಸಿಂಗೆ, ರಮೇಶ ಬಿರಾದಾರ, ಮೆಹಮೂದ್, ಲಲಿತಾ ಸ್ವಾಮಿ, ಗಿರಿ ಸರ್ ಇದ್ದರು.

# ಕಟ್ಟಡ ಕಾಮಗಾರಿಗೆ ಶಂಕುಸ್ಥಾಪನೆ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:

ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಸುಮಾರು ರೂ5 ಕೋಟಿ ಅನುದಾನದಡಿ, ಮೆಟ್ರಿಕ್ ನಂತರ ವೃತ್ತಿಪರ ಕೋರ್ಸ್‌ಗಳನ್ನು ಅಭ್ಯಾಸ ಮಾಡುವ ಬಾಲಕರಿಗಾಗಿ ನಿರ್ಮಿಸಲಿರುವ ವಸತಿ ನಿಲಯ ಕಟ್ಟಡ ಕಾಮಗಾರಿಗೆ ನಗರದಲ್ಲಿ ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ವಿದ್ಯಾರ್ಥಿಗಳು ಉತ್ತಮ ವಸತಿ ಸೌಲಭ್ಯಗಳೊಂದಿಗೆ ವಿದ್ಯಾಭ್ಯಾಸ ಮಾಡಲು ಈ ವಸತಿ ನಿಲಯವು ಬಹು ಉಪಯುಕ್ತವಾಗಲಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಶಿಕ್ಷಣದಲ್ಲಿ ಮುಂದುವರೆಯಲು ಮೂಲಭೂತ ಸೌಲಭ್ಯ ಒದಗಿಸುವುದು ಸರ್ಕಾರದ ಆದ್ಯತೆಯಾಗಿದ್ದು, ಈ ಯೋಜನೆ ತಾಲುಕಿನ ಹಾಗೂ ಸುತ್ತಮುತ್ತಲಿನ ಪ್ರದೇಶದ ನೂರಾರು ವಿದ್ಯಾರ್ಥಿಗಳಿಗೆ ನೆರವಾಗಲಿದೆ ಎಂದು ಹೇಳಿದರು.

ಈ ವಸತಿ ನಿಲಯ ನಿರ್ಮಾಣದಿಂದ ವಿದ್ಯಾರ್ಥಿಗಳಿಗೆ ಸುರಕ್ಷಿತ ವಸತಿ, ಅನುಕೂಲಕರ ಅಧ್ಯಯನ ವಾತಾವರಣ ಹಾಗೂ ಶಿಕ್ಷಣದ ನಿರಂತರತೆಗೆ ಅಗತ್ಯವಾದ ಬೆಂಬಲ ದೊರೆಯಲಿದೆ ಎಂದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಶ್ರೀರಾಮ, ಶ್ರೀಕೃಷ್ಣರ ಬಗ್ಗೆ ಅವಹೇಳನ ಆರೋಪ ಮೆಹಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು

## ಧಾರ್ಮಿಕ ಭಾವನೆಗೆ ಧಕ್ಕೆ: ಎಸ್‌ಪಿ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ ಬೀದರ್,

ಸಾಮಾಜಿಕ ಜಾಲತಾಣಗಳಲ್ಲಿ ಜಾತಿ ಮತ್ತು ಧರ್ಮದ ಹೆಸರಿನಲ್ಲಿ ಸಾರ್ವಜನಿಕರ ಭಾವನೆಗಳಿಗೆ ಧಕ್ಕೆ ತರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ಮಹಾಧಿಕಾರಿ (ಎಸ್‌ಪಿ) ಪ್ರದೀಪ್ ಗುಂಟಿ ಎಚ್ಚರಿಸಿದ್ದಾರೆ. ಈ ಕುರಿತು ಗುರುವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಯಾವುದೇ ಜಾತಿ, ಧರ್ಮದ ಭಾವನೆಗಳಿಗೆ ಧಕ್ಕೆ ತರುವ ಅಥವಾ ಅಪಮಾನ 'ವಾಗುವ ರೀತಿಯ ಹೇಳಿಕೆಗಳಿಂದ ದೂರವಿರಬೇಕು. ಇಂತಹ ಹೇಳಿಕೆಗಳು ಅಥವಾ ವಿಡಿಯೋ ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವುದು ಅಪರಾಧವಾಗಿದೆ. ಈ ಬಂದಲ್ಲಿ ತಕ್ಷಣವೇ ಪೊಲೀಸರ ಗಮನಕ್ಕೆ ತರಬೇಕೆಂದು ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ. ರೀತಿಯ ವಿಷಯಗಳು ಕಂಡು

ಕೆಲವರು ಉದ್ದೇಶಪೂರ್ವಕವಾಗಿ ಧಾರ್ಮಿಕ ಜಗಳ, ತಕರಾರು ಉಂಟುಮಾಡುವ ರೀತಿಯಲ್ಲಿ ಹೇಳಿಕೆಗಳು ಮತ್ತು ವಿಡಿಯೋಗಳನ್ನು ಹುಬಿಡುತ್ತಿದ್ದಾರೆ ಇಂತಹ ಪೋಸ್ಟ್‌ಗಳನ್ನು ತಮ್ಮ ಜಾಲತಾಣದ ಮೂಲಕ ಹಂಚಿಕೊಂಡರೂ ಕಾನೂನು ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ತಿಳಿಸಿದ್ದಾರೆ. ಅಟ್ಟರ್ಗಾ ಗ್ರಾಮದ ವ್ಯಕ್ತಿಯೊಬ್ಬರು ಮತ್ತೊಬ್ಬರೊಂದಿಗೆ ಸೇರಿ ಮರಾಠಿ ಹಾಗೂ ಹಿಂದಿ ಭಾಷೆಯಲ್ಲಿ ವಿಡಿಯೋ ಮೂಲಕ ಶ್ರೀರಾಮ ಮತ್ತು ಶ್ರೀಕೃಷ್ಣರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿ, ಅವಾಚ್ಯ ಶಬ್ದಗಳಿಂದ ನಿಂದಿಸಿರುವುದು ಹಾಗೂ ಮಹಾತ್ಮ ಗಾಂಧಿಜಿಯವರ ಬಗ್ಗೆ ಅವಮಾನಕಾರಿ ಹೇಳಿಕೆ ನೀಡಿರುವದಾಗಿ ಆರೋಪಿಸಲಾಗಿದೆ. ಸಂಬಂಧಿತ ವಿಡಿಯೋವನ್ನು ಫೇಸ್‌ಬುಕ್‌ನಲ್ಲಿ ಹಂಚಲಾಗಿದ್ದು, ಈ ಕುರಿತು ಮೆಹಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ ಎಂದು ಎಸ್‌ಪಿ ಮಾಹಿತಿ ನೀಡಿದ್ದಾರೆ.



**ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಇಂತಹ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿದವರ ಕಮ್ಯೂನಲ್ ರೌಡಿ ಶೀಟ್ ವಿರುದ್ಧ ಪ್ರಕರಣ ದಾಖಲಿಸಿ, ತೆರೆಯಲಾಗುವುದು ಹಾಗೂ ಅಗತ್ಯವಿದ್ದರೆ ಗಡಿಪಾರು ಕ್ರಮ ಕೈಗೊಳ್ಳಲಾಗುವುದು**

**ಪ್ರದೀಪ್ ಗುಂಟಿ**
**ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬೀದರ್**



ಭಾಲ್ಕಿ. ಪಟ್ಟಣದಲ್ಲಿ ಫೆ.16ರಂದು ಸೋಮವಾರ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ 24ನೇ ರಾಷ್ಟ್ರೀಯ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ . ಅಭಿನಂದನಾ ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾದ ಹಿರಿಯ ನ್ಯಾಯವಾದಿ ರಾಜಶೇಖರ ಅಷ್ಟೂರೆ ಅವರನ್ನು ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಪೂಜ್ಯಶ್ರೀ ಗುರುಬಸವ ಪಟ್ಟದ್ದೇವರು ಗೌರವಿಸಿದರು. ಈ ಸಂದರ್ಭದಲ್ಲಿ ಚಂದ್ರಕಾಂತ್ ಪಾಟೀಲ್, ಶಂಭುಲಿಂಗ ಕಾಮಣ್ಣ, ಬಸವರಾಜ ಮರೆ, ನಾಗಭೂಷಣ ಮಾಮಡಿ, ಸಂತೋಷ್ ಬಿಜಿ ಪಾಟೀಲ್ ಇನ್ನಿತರರು ಉಪಸ್ಥಿತರಿದ್ದರು.

# ಆಕ್ರಮ ಕೆಂಪುಕಲ್ಲು ಗಣಿಗಾರಿಕೆ ಮೇಲೆ ಅಧಿಕಾರಿಗಳ ದಾಳಿ ವಾಹನ, ಯಂತ್ರೋಪಕರಣಗಳ ಜಪ್ತಿ

- ಮಲ್ಲಮ್ಮ ನುಡಿ ವಾರ್ತೆ ಬೀದರ್:

ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ದೀರ್ಘಕಾಲದಿಂದ ನಡೆಯುತ್ತಿದ್ದ ಅಕ್ರಮ ಲ್ಯಾಟ್‌ರೈಟ್ (ಕೆಂಪುಕಲ್ಲು) ಗಣಿಗಾರಿಕೆ ದಂದೆಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಬ್ರೇಕ್ ಹಾಕಿದ್ದಾರೆ. ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಗುರುವಾರ ನಡೆದ ದಿಢೀರ್ ದಾಳಿಯಲ್ಲಿ ಲಕ್ಷಾಂತರ ರೂಪಾಯಿ ಮೌಲ್ಯದ ವಾಹನ ಹಾಗೂ ಯಂತ್ರೋಪಕರಣಗಳನ್ನು ವಶಪಡಿಸಿಕೊಳ್ಳಲಾಗಿದೆ.

ಬೀದರ್ ಜಿಲ್ಲೆಯ ಮನ್ನಳ್ಳಿ, ಮಲಚಾಪುರ ಮತ್ತು ಕಾಡವಾದ ಆಣದೂದ ಗ್ರಾಮಗಳ ಪಟ್ಟಾ ಭೂಮಿಯಲ್ಲಿ ಇಲಾಖೆಯ ಯಾವುದೇ ಅನುಮತಿ ಪಡೆಯದೆ, ನಿಯಮಗಳನ್ನು ಗಾಳಿಗೆ ತೂರಿ ಅವ್ಯಾಹತವಾಗಿ ಗಣಿಗಾರಿಕೆ ನಡೆಸಲಾಗುತ್ತಿತ್ತು. ಈ ಬಗ್ಗೆ ಖಚಿತ ಮಾಹಿತಿ ಸಂಗ್ರಹಿಸಿದ್ದ ಅಧಿಕಾರಿಗಳ ತಂಡವು ದಾಳಿ ಸಂಘಟಿಸಿ ಅಕ್ರಮದಂಧೆಕೋರರಿಗೆ ಬಿಸಿ ಮುಟ್ಟಿಸಿದೆ.



ಹಿರಿಯ ಭೂ ವಿಜ್ಞಾನಿಗಳಾದ ವಿಶ್ವನಾಥ್, ಧನರಾಜ್ ಹಾಗೂ ಲೋಕೇಶ್ ಅವರ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದೆ ದಾಳಿಯ ವೇಳೆ ಅಕ್ರಮವಾಗಿ ಕೆಂಪುಕಲ್ಲು ಸಾಗಾಟ ಮಾಡುತ್ತಿದ್ದ ಹಾಗೂ ಗಣಿಗಾರಿಕೆಯಲ್ಲಿ ತೊಡಗಿದ್ದ ಎರಡು ಲಾರಿಗಳು, ಒಂದು ಟ್ಯಾಕ್ಟರ್ ಹಾಗೂ ನಾಲ್ಕು ಕಲ್ಲು ಕತ್ತರಿಸುವ ಯಂತ್ರಗಳನ್ನು ಜಪ್ತಿ ಮಾಡಿದ್ದಾರೆ.

ಇನ್ನು ವಶಪಡಿಸಿಕೊಳ್ಳಲಾದ ಎಲ್ಲಾ ವಾಹನ ಮತ್ತು ಯಂತ್ರೋಪಕರಣಗಳನ್ನು ಗಣಿ ಇಲಾಖೆಯ ಅಧಿಕಾರಿಗಳು ಮುಂದಿನ ಕಾನೂನು ಪ್ರಕ್ರಿಯೆಗಾಗಿ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಗಳಿಗೆ ಹಸ್ತಾಂತರಿಸಿದ್ದಾರೆ. ಈ ದಾಳಿಯಿಂದಾಗಿ ಜಿಲ್ಲೆಯಾದ್ಯಂತ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿರುವವರಲ್ಲಿ ಭೀತಿ ಶುರುವಾಗಿದೆ.

# ಸಂಪಾದಕೀಯ


ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349




## ಪ್ರತಿಯೊಬ್ಬರೂ ಗಿಡಮರಗಳನ್ನು ಬೆಳೆಸಿ ಪೋಷಿಸಬೇಕಾದ ಅಗತ್ಯವಿದೆ

ಇಂದಿನ ವೇಗದ ನಗರೀಕರಣ, ಕೈಗಾರೀಕರಣ ಮತ್ತು ಅರಣ್ಯ ನಾಶದ ನಡುವೆ ಪ್ರಕೃತಿ ದಿನದಿಂದ ದಿನಕ್ಕೆ ತನ್ನ ಉಸಿರಾಟಕ್ಕೆ ಹೋರಾಡುತ್ತಿದೆ. ಮಳೆ ಕೊರತೆ, ಉಷ್ಣತೆಯ ಹೆಚ್ಚಳ, ನೀರಿನ ಅಭಾವ ಮತ್ತು ವಾಯುಮಾಲಿನ್ಯ ಇವೆಲ್ಲವೂ ಮಾನವನ ನಿರ್ಲಕ್ಷ್ಯದ ಪರಿಣಾಮಗಳೇ ಆಗಿವೆ. ಈ ಸಮಸ್ಯೆಗಳಿಗೆ ಸರಳವಾದರೂ ಪರಿಣಾಮಕಾರಿ ಪರಿಹಾರ ಒಂದೇ - ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡವನ್ನಾದರೂ ನೆಟ್ಟು ಅದನ್ನು ಪೋಷಿಸುವ ಸಂಕಲ್ಪ ಮಾಡುವುದು.

ಗಿಡಮರಗಳು ನಮ್ಮ ಜೀವಾಳ. ಅವು ನಮಗೆ ಆಮ್ಲಜನಕ ನೀಡುತ್ತವೆ, ಮಣ್ಣಿನ ಉರ್ವರತೆಯನ್ನು ಕಾಪಾಡುತ್ತವೆ, ಮಳೆಯನ್ನು ಆಕರ್ಷಿಸುತ್ತವೆ ಹಾಗೂ ಪರಿಸರದ ಸಮತೋಲನವನ್ನು ಉಳಿಸುತ್ತವೆ. ಒಂದು ಗಿಡ ಬೆಳೆದಂತೆ ಕೇವಲ ನೆರಳಷ್ಟೇ ಅಲ್ಲ, ಭವಿಷ್ಯದ ಜೀವನಕ್ಕೂ ಆಶಾವಾದ ಬೆಳೆದು ಬರುತ್ತದೆ.

ಇಂದು ಬಹುತೇಕ ಜನರಿಗೆ “ಸರ್ಕಾರ ಮಾಡಲಿ”, “ಸಂಸ್ಥೆಗಳು ಮಾಡಲಿ” ಎಂಬ ಮನೋಭಾವ ಹೆಚ್ಚಾಗಿದೆ. ಆದರೆ ಪರಿಸರ ರಕ್ಷಣೆ ಸರ್ಕಾರದ ಕೆಲಸ ಮಾತ್ರವಲ್ಲ - ಪ್ರತಿ ನಾಗರಿಕನ ಜವಾಬ್ದಾರಿಯೂ ಹೌದು. ಮನೆ ಮುಂದೆ, ಹೊಲದ ಅಂಚಿನಲ್ಲಿ, ಶಾಲಾ ಆವರಣದಲ್ಲಿ, ರಸ್ತೆ ಬದಿಯಲ್ಲಿ ಎಲ್ಲೆಲ್ಲೂ ಗಿಡ ನೆಡುವ ಅವಕಾಶಗಳಿವೆ.


ಮಕ್ಕಳಿಗೆ ಬಾಲ್ಯದಲ್ಲೇ ಪ್ರಕೃತಿಯೊಂದಿಗೆ ಸ್ನೇಹ ಬೆಳೆಸಿದರೆ ಅವರು ಹೊಣೆಗಾರ ನಾಗರಿಕರಾಗುತ್ತಾರೆ. ಒಂದು ಗಿಡ ನೆಟ್ಟು ಅದಕ್ಕೆ ನೀರು ಹಾಕುವುದು ಕೇವಲ ಕೆಲಸವಲ್ಲ; ಅದು ಜೀವನದ ಪಾಠ. ಸಹನೆ, ಕಾಳಜಿ ಮತ್ತು ಜವಾಬ್ದಾರಿಯ ಅರಿವು ಅದರಿಂದ ಬರುತ್ತದೆ.

ಇಂದು ನಾವು ಗಿಡ ನೆಟ್ಟರೆ ನಾಳೆ ನಮ್ಮ ಮಕ್ಕಳಿಗೆ ಶುದ್ಧ ಗಾಳಿ, ಸಾಕಷ್ಟು ನೀರು ಮತ್ತು ಆರೋಗ್ಯಕರ ಪರಿಸರ ಸಿಗುತ್ತದೆ. ಇಲ್ಲದಿದ್ದರೆ ಅವರು ಬರ, ಬಿಸಿಲು ಮತ್ತು ಪ್ರಕೃತಿ ವಿಪತ್ತಿನ ನಡುವೆ ಬದುಕಬೇಕಾಗುತ್ತದೆ.

“ಒಬ್ಬ ವ್ಯಕ್ತಿ ಒಂದು ಗಿಡ” ಎಂಬ ಸಂಕಲ್ಪವೇ ನಾಳೆಯ ಹಸಿರು ಭಾರತಕ್ಕೆ ದಾರಿ.

ಮಾತಿನಲ್ಲಿ ಮಾತ್ರವಲ್ಲ, ಕಾರ್ಯರೂಪದಲ್ಲೂ ಪರಿಸರ ಪ್ರೇಮ ತೋರಿಸೋಣ. ಗಿಡ ನೆಡೋಣ, ಬೆಳೆಸೋಣ, ಪೋಷಿಸೋಣ ಪ್ರಕೃತಿಯನ್ನು ಉಳಿಸಿ, ಜೀವನವನ್ನು ಉಳಿಸೋಣ.

# ಆಮ್ ಆದ್ಮಿ ಪಕ್ಷ ಬೀದರ್ ಜಿಲ್ಲೆಯಲ್ಲಿ ಹೊಸ ಪದಾಧಿಕಾರಿಗಳ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ ಬೀದರ್,

ಆಮ್ ಆದ್ಮಿ ಪಕ್ಷ ಕರ್ನಾಟಕ ಘಟಕದ ವತಿಯಿಂದ ಬೀದರ್ ಜಿಲ್ಲೆಯಲ್ಲಿ ಹೊಸ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ಜಿಲ್ಲಾ ಯುವ ಘಟಕ ಅಧ್ಯಕ್ಷರಾಗಿ ಜಗನ್ನಾಥ ಹೂಗಾರ ಅವರನ್ನು ಹಾಗೂ ಜಿಲ್ಲಾ ಉಪಾಧ್ಯಕ್ಷರಾಗಿ ರಾಜಕುಮಾರ ಪಾಟೀಲ್ ಬಾವಗಿ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಪಕ್ಷದ ಬೆಳವಣಿಗೆ ಹಾಗೂ ಸಂಘಟನಾತ್ಮಕ ಬಲವರ್ಧನೆಗಾಗಿ ಇವರನ್ನು ಆಯ್ಕೆ ಮಾಡಲಾಗಿದೆ. ಹೊಸದಾಗಿ ಆಯ್ಕೆಯಾದ ಪದಾಧಿಕಾರಿಗಳು ತಕ್ಷಣದಿಂದಲೇ ತಮ್ಮ ಕಾರ್ಯಭಾರವನ್ನು ಸ್ವೀಕರಿಸಿ ಪಕ್ಷದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸೇವಾಭಾವದಿಂದ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಲಾಗಿದೆ.

ಈ ಕುರಿತು ಪ್ರಕಟಣೆ ನೀಡಿರುವ ಪ್ರಧಾನ ಕಾರ್ಯದರ್ಶಿ ಎಂ.ಡಿ.ಜಾವಿದ ಹಾಗೂ ಜಿಲ್ಲಾ ಘಟಕ ಅಧ್ಯಕ್ಷ ಸಿದ್ದಪ್ಪ ಫೂಲಾರಿ ಅವರು, ಪಕ್ಷದ ಉನ್ನತ ಮಟ್ಟದ ಕಾರ್ಯಚಟುವಟಿಕೆಗಳಿಗೆ ಹೊಸ ಪದಾಧಿಕಾರಿಗಳಿಂದ ಹೆಚ್ಚಿನ ಸಹಕಾರ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ


## ಶ್ರೀ ಮಲ್ಲಿಕಾರ್ಜುನ ಸೌಹಾರ್ದ ಸಹಕಾರಿ ನಿ.

ಕೆಂಭಾವಿ 585216 ತಾ: ಸುರಪುರ ಜಿ: ಯಾದಗಿರಿ

### ಆಡಳಿತ ಮಂಡಳಿ ನಿರ್ದೇಶಕರ ಚುನಾವಣಾ ವೇಳಾಪಟ್ಟಿ

ಶ್ರೀ ಮಲ್ಲಿಕಾರ್ಜುನ ಸೌಹಾರ್ದ ಸಹಕಾರಿ ನಿ. ಕೆಂಭಾವಿ ತಾ: ಸುರಪುರ ಜಿ: ಯಾದಗಿರಿ ಇದರ ಸನ್ 2026 ರಿಂದ ಮುಂದಿನ ಐದು ವರ್ಷಗಳ ಅವಧಿಗೆ ಆಡಳಿತ ಮಂಡಳಿ ಚುನಾವಣೆ ದಿನಾಂಕ:28/02/2026 ರಂದು ಜರುಗಿಸಲು ನಿರ್ಧರಿಸಲಾಗಿದೆ. ಮಾಹಿತಿ ಈ ಕೆಳಗಿನಂತಿದೆ.

| | |
|---|---|
| ನಾಮಪತ್ರ ಸಲ್ಲಿಕೆ ಆರಂಭ. | ದಿ. 14/02/2026 |
| ನಾಮಪತ್ರ ಸಲ್ಲಿಕೆ ಕೊನೆ ದಿನ. | ದಿ. 21/02/2026 |
| ನಾಮಪತ್ರ ಪರಿಶೀಲನೆ ದಿನ. | ದಿ. 22/02/2026 |
| ಚುನಾವಣೆ ನಡೆಯುವ ದಿನ | ದಿ.28/02/2026 |

ಹೆಚಿನ ಮಾಹಿತಿಗಾಗಿ ಸಹಕಾರಿಯ ಕಾರ್ಯದರ್ಶಿಗಳನ್ನು ಸಂಪರ್ಕಿಸಲು ರಿಟರ್ನಿಂಗ್ ಅಧಿಕಾರಿಗಳು ಈ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿರುತ್ತಾರೆ. ಚುನಾವಣಾ ನೋಟಿಸು ತಲುಪದಿದ್ದಲ್ಲಿ ಇದನ್ನೇ ನೋಟಿಸು ಎಂದು ಪರಿಗಣಿಸಲು ಸೂಚಿಸಲಾಗಿದೆ.

ಸಹಿ/-
ರಿಟರ್ನಿಂಗ್ ಅಧಿಕಾರಿಗಳು
ಶ್ರೀ ಮಲ್ಲಿಕಾರ್ಜುನ ಸೌಹಾರ್ದ ಸಹಕಾರಿ ನಿ ಕೆಂಭಾವಿ
ತಾ:ಸುರಪುರ ಜಿ: ಯಾದಗಿರಿ

# ಹೆಣ್ಣು ಭ್ರೂಣ ಉಳಿಸಿ: ಹಂಪಿ ಉತ್ಸವದ ರಂಗೋಲಿ ಸ್ಪರ್ಧೆಯಲ್ಲಿ ಕಂಡುಬಂದ ಸಾಮಾಜಿಕ ಜಾಗೃತಿ




• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ):**


ಹಂಪಿ ಉತ್ಸವದ ಪ್ರಯುಕ್ತ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಕೃತಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಶ್ರೀ ವಿರೂಪಾಕ್ಷ ದೇವಸ್ಥಾನದ ಮುಂಭಾಗದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ರಂಗೋಲಿ ಸ್ಪರ್ಧೆಯಲ್ಲಿ "ಹೆಣ್ಣು ಭ್ರೂಣ ಉಳಿಸಿ" ಎಂಬ ಚಿತ್ರದ ಮೂಲಕ ಸಾಮಾಜಿಕ ಜಾಗೃತಿ ಕಂಡುಬಂದಿತು.

ಈ ಸ್ಪರ್ಧೆಯಲ್ಲಿ ಐತಿಹಾಸಿಕ ವಿಜಯನಗರ ಸಾಮ್ರಾಜ್ಯದ ವರಾಹ ಲಾಂಛನದ ಚಿತ್ರ, ಶ್ರೀ ಕೃಷ್ಣದೇವರಾಯನ ಚಿತ್ರ, ಶಿವಲಿಂಗ ಚಿತ್ರ, ಸಿಂಹದ ಚಿತ್ರ ಸೇರಿದಂತೆ

ಶ್ರೀ ವಿರೂಪಾಕ್ಷ ದೇವಸ್ಥಾನದ ಮುಂಭಾಗದಲ್ಲಿ ಮೂಡಿ ಬಂದ ರಂಗೋಲಿ ಚಿತ್ರಗಳು ಆಕರ್ಷಣೀಯುವಾಗಿದ್ದು, ನೋಡುಗರಗಮನ ಸೆಳೆಯುತ್ತಿವೆ. ಈ ಎಲ್ಲಾ ಬಣ್ಣ-ಬಣ್ಣದ ರಂಗೋಲಿ ಚಿತ್ತಾರಗಳು ಹಂಪಿಯ ಉತ್ಸವದ ಮೆರಗನ್ನು ಹೆಚ್ಚಿಸಿದವು.

ರಂಗೋಲಿ ಸ್ಪರ್ಧೆಯಲ್ಲಿ ಒಟ್ಟು 41 ಮಹಿಳಾ ಸ್ಪರ್ದಿಗಳು ಭಾಗವಹಿಸಿದ್ದರು. ಬಗೆ-ಬಗೆಯ ರಂಗೋಲಿ ಚಿತ್ತಾರಗಳು ಹಬ್ಬದ ವಾತಾವರಣವನ್ನು ಸೃಷ್ಟಿಸಿದ್ದು ವಿಶೇಷವಾಗಿತ್ತು.

# ವಿಮಾನ ನಿಲ್ದಾಣ ಕಾಮಗಾರಿ ಪರಿಶೀಲನೆ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಸ್.ಜಿ.ನಂಜಯ್ಯನಮಠ ಅವರು ಫೆ.13ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಯರಮರಸ್ ಬಳಿಯ ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಒಟ್ಟಾರೆ 322 ಎಕರೆ ವಿಸ್ತೀರ್ಣ ಪ್ರದೇಶದಲ್ಲಿ ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ನಡೆ-ಯುತ್ತಿದೆ. ಕಾಮಗಾರಿಯು ಈಗಾಗಲೇ ಶೇ.31ರಷ್ಟು ಪೂರ್ಣವಾಗಿದೆ. ಬರುವ ಎರಡೂವರೆ ತಿಂಗಳಲ್ಲಿ ರನ್ ವೇ ಕಾಮಗಾರಿಯು ಪೂರ್ಣವಾಗಲಿದೆ. ಈ ವರ್ಷದಲ್ಲಿ ಮಳೆ ನಿರಂತರವಾಗಿ ಸುರಿದ ಕಾರಣ ರನ್ ವೇ ಕಾಮಗಾರಿಯು ಮಂದಗತಿಯಲ್ಲಿ ಸಾಗಿತ್ತು ಎಂದು ತಿಳಿಸಿದರು.

ಒಟ್ಟಾರೆ ಮುಂದಿನ ಒಂದೂವರೆ ವರ್ಷದ ಕಾಲಾವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಿದ್ದೇವೆ. ಮುಂದಿನ 3 ತಿಂಗಳಲ್ಲಿ ಮತ್ತೆ ರಾಯಚೂರು ಪ್ರವಾಸ ಕೈಗೊಂಡು ಪುನಃ ಅಭಿವೃದ್ಧಿ ಕಾರ್ಯ ಪರಿಶೀಲಿಸುವೆ ಎಂದು ಅವರು ತಿಳಿಸಿದರು.

ಏಗನೂರು ಗ್ರಾಮದಲ್ಲಿ 30 ಮನೆಗಳು ಬೇರೆಡೆಗೆ ಸ್ಥಳಾಂತರ ಮಾಡಲು ಮೂರು ಎಕರೆ ಜಮೀನು ಹಾಗೂ ದಂಡ ಗ್ರಾಮದಲ್ಲಿನ 108 ಮನೆಗಳನ್ನು ಬೇರೆಡೆ ಸ್ಥಳಾಂತರ ಮಾಡಲು ಆರು ಎಕರೆ ಜಮೀನಿನಲ್ಲಿ ಲೇಔಟ್ ಕಾರ್ಯ ನಡೆಯುತ್ತಿದೆ ಎಂದು ಅವರು ತಿಳಿಸಿದರು.

ವಿಮಾನ ನಿಲ್ದಾಣ ಕಾಮಗಾರಿಯ ಸಂಬಂಧ ಬೇರೇಡೆಗೆ ಸ್ಥಳಾಂತರ ವಾಗುವ ಎರಡು ಗ್ರಾಮಗಳಲ್ಲಿನ ಗ್ರಾಮಸ್ಥರಿಗೆ ಅವರ ಮನೆಯ ಕಿಮ್ಮತ್ತಿನ ಪರಿಹಾರವನ್ನು ನೀಡಲಾಗಿದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ರಾಜು ಬಂಡಿಕೇರಿ, ರಾಜು ಹರಿಳಯ್ಯಮಠ, ಲೋಕೋಪಯೋಗಿ ಇಲಾಖೆ ಅಭಿಯಂತರಾದ ಮಹೇಶ್ ಸೇರಿದಂತೆ ಇತರರು ಇದ್ದರು.

# ಅನ್ನದಾಸೋಹ ಭವನಕ್ಕೆ ಅಡಿಗಲ್ಲು: ದೇವಲ ಗಾಣಗಾಪೂರ ಅಭಿವೃದ್ಧಿಗೆ ಬದ್ಧ: ರಾಮಲಿಂಗಾರೆಡ್ಡಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಶ್ರೀ ದತ್ತಾತ್ರೇಯನ ಸುಕ್ಷೇತ್ರವಾದ ದೇವಲ ಗಾಣಗಾಪೂರ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದ್ದು, ತಮ್ಮ ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡುವುದಾಗಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಶುಕ್ರವಾರ ಅಫಜಲಪೂರ ತಾಲೂಕಿನ ದೇವಲ ಗಾಣಗಾಪೂರದ ಶ್ರೀ ದೇವಸ್ಥಾನ ಅಡಿಯಲ್ಲಿ ಬರುವ ಶ್ರೀ ತಂತುಕೇಶ್ವರ ದೇವಸ್ಥಾನದ ಅನ್ನದಾಸೋಹ ಭವನಕ್ಕೆ ಅಡಿಗಲ್ಲು ನೆರವೇರಿಸಿ ಮಾತನಾಡಿದ ಅವರು, ದೇವಸ್ಥಾನದ ಭಕ್ತರುಗಳಾದ ವಿಜಯವಾಡ ಮೂಲದ ಶ್ರೀನಿವಾಸ ಮತ್ತು ಸುಕುಮಾರಿ ಕೊನೇರು ದಂಪತಿಗಳು ಅಂದಾಜು 2 ಕೋಟಿ ರೂ. ವೆಚ್ಚದಲ್ಲಿ ಅನ್ನದಾಸೋಹ ಭವನಕ್ಕೆ ನಿರ್ಮಿಸಲು ಮುಂದೆ ಬಂದಿರುವುದು ಸಂತೋಷದ ವಿಷಯ. ಹಣ ಎಲ್ಲರ ಬಳಿ ಇದೆ ಆದರೆ ದಾನ ಮಾಡುವ ಮನಸ್ಸು ಬೇಕಲ್ಲವೆ. ಇದಕ್ಕಾಗಿ ದಂಪತಿಗೆ ವಿಶೇಷ ಅಭಿನಂದನೆ ಸಲ್ಲಿಸುವೆ ಎಂದರು.

ಗಾಣಗಾಪೂರ ದೇವಸ್ಥಾನ ಕ್ಷೇತ್ರದ ಅಭಿವೃದ್ಧಿಗೆ ಈಗಾಗಲೆ ಕೇಂದ್ರ ಸರ್ಕಾರಕ್ಕೆ ಪ್ರಸಾದ ಯೋಜನೆಯಡಿ 83.52 ಕೋಟಿ ರೂ. ಮೊತ್ತದ ಕ್ರಿಯಾ ಯೋಜನೆಯ ಪ್ರಸ್ತಾವನೆ ಸಲ್ಲಿಸಲಾಗಿತ್ತಾದರು, ಕೇಂದ್ರ ಸರ್ಕಾರ ಅದನ್ನು ಪರಿಗಣಿಸಿಲ್ಲ. ಹೀಗಾಗಿ ಇಲ್ಲಿನ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲೆಯ ಶಾಸಕರೊಂದಿಗೆ ಚರ್ಚಿಸಿ ಲಕ್ಷಾಂತರ ಭಕ್ತರನ್ನು ಹೊಂದಿರುವ ಈ ದೇವಸ್ಥಾನದ ಅಭಿವೃದ್ಧಿಗೆ ತಾವು ಪ್ರಮಾಣಿಕ ಪ್ರಯತ್ನ ಮಾಡುವುದಾಗಿ ಅವರು ಭರವಸೆ ನೀಡಿದರು.

ರಸ್ತೆ, ಶೌಚಾಲಯ, ಕುಡಿಯುವ ನೀರು, ದಾಸೋಹ ಮನೆ, ಪಾರ್ಕಿಂಗ್, ಸ್ನಾನ್ ಘಾಟ್ ಹೀಗೆ ಒಟ್ಟು ಮೂರು ಹಂತದಲ್ಲಿ ಈ ಪ್ರದೇಶವನ್ನು ಅಭಿವೃದ್ಧಿಪಡಿಸಲು ಈಗಾಗಲೆ ನೀಲಿ ನಕ್ಷೆ ಸಿದ್ದಪಡಿಸಲಾಗಿದೆ. ಇತ್ತೀಚೆಗೆ ಸಚಿವ ಪ್ರಿಯಾಂಕ್ ಖರ್ಗೆ ಅವರ ಜೊತೆ ಒಂದು ಸುತ್ತಿನ ಸಭೆ ಸಹ ನಡೆದಿದೆ. ಜಿಲ್ಲೆಯ ಸಚಿವರು ಮತ್ತು ಶಾಸಕರೊಂದಿಗೆ ಮತ್ತೊಮ್ಮೆ ಸಭೆ ಸೇರಿ ಮುಖ್ಯಮಂತ್ರಿಗಳ ಬಳಿ ಹೋಗಿ ಇದಕ್ಕಾಗಿ ಹೆಚ್ಚಿನ ಅನುದಾನ ನೀಡಲು ಕೋರಲಾಗುವುದು ಎಂದರು.

ಇದಕ್ಕು ಮುನ್ನ ಶಾಸಕ ಎಂ.ವೈ.ಪಾಟೀಲ್ ಮಾತನಾಡಿ, ದೇವಸ್ಥಾನಕ್ಕೆ ವರ್ಷಕ್ಕೆ ಒಂದು ಕೋಟಿಗೂ ಹೆಚ್ಚು ಭಕ್ತರು



ದರ್ಶನಕ್ಕೆ ಬರುತ್ತಾರೆ. ಮೂಲಸೌಕರ್ಯ ಇಲ್ಲದಿರುವುದಕ್ಕೆ ಭಕ್ತರು ಶಾಪ ಹಾಕುತ್ತಿದ್ದಾರೆ. ಕೇಂದ್ರ ಸಚಿವ ನಿತಿನ್ ಗಡ್ಕರಿ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವಿಂದ್ರ ಫಡನವೀಸ್ ಸೇರಿದಂತೆ ಅನೇಕ ಗಣ್ಯರು ದೇವಸ್ಥಾನಕ್ಕೆ ಬಂದು ಹೋಗಿದ್ದಾರೆ. ಆದರೆ ದೇವಸ್ಥಾನ ಅಭಿವೃದ್ಧಿ ಕಂಡಿಲ್ಲ. ಸರ್ಕಾರ ವಿಶೇಷ ಕಾಳಜಿ ವಹಿಸಿ ಪ್ರಸಾದ್ ಯೋಜನೆ ಅಡಿಯಲ್ಲಿ ಹೆಚ್ಚಿನ ಅನುದಾನ ಒದಗಿಸಿ ದೇವಸ್ಥಾನ ಅಭಿವೃದ್ಧಿ ಮಾಡಬೇಕು ಎಂದು ಸಚಿವರಲ್ಲಿ ಮನವಿ ಮಾಡಿಕೊಂಡರು.

ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಕೆ.ಕೆ.ಆರ್.ಟಿ.ಸಿ ಅಧ್ಯಕ್ಷ ಅರುಣಕುಮಾರ ಪಾಟೀಲ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಕೆ.ಕೆ. ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕಿ ಡಾ.ಬಿ.ಸುಶೀಲಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ತಹಶೀಲ್ದಾರ ಸಂಜೀವಕುಮಾರ ದಾಸರ್, ಸಹಾಯಕ ಆಯುಕ್ತೆ ಸಾಹಿತ್ಯ, ಗಾಣಗಾಪೂರ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಶಿವಕಾಂತಮ್ಮ ಸೇರಿದಂತೆ ಅನೇಕ ಅಧಿಕಾರಿಗಳು ಇದ್ದರು.

ನಂತರ ಅತಿಥಿಗೃಹದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವ ರಾಮಲಿಂಗಾರೆಡ್ಡಿ ಅವರು 102 ಕೋಟಿ ರೂ. ಮೊತ್ತದಲ್ಲಿ ಗಾಣಗಾಪೂರ ಮತ್ತು 40 ಕೋಟಿ ರೂ. ಮೊತ್ತದಲ್ಲಿ ಘತ್ತರಗಾ ದೇವಸ್ಥಾನ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೂಲಂಕುಷವಾಗಿ ಚರ್ಚಿಸಿದರು. ಕಾಶಿ ಮಾದರಿಯಲ್ಲಿ ಗಾಣಗಾಪೂರ ಅಭಿವೃದ್ಧಿಗೆ ಜಮೀನು ಭೂಸ್ವಾಧೀನ ಅಗತ್ಯವಿದೆ ಮತ್ತು ಘತ್ತರಗಾ ಅಭಿವೃದ್ಧಿಗೆ ಅನುದಾನ ಲಭ್ಯವಿದ್ದು, ಸರ್ಕಾರ ಮಂಜೂರಾತಿ ನೀಡಬೇಕಿದೆ ಎಂಡು ಡಿ.ಸಿ. ಬಿ.ಫೌಜಿಯಾ ತರನ್ನುಮ್ ನೀಲಿ ನಕ್ಷೆಯೊಂದಿಗೆ ಸಚಿವರ ಗಮನಕ್ಕೆ ತಂದಾಗ ಮುಂಬರುವ ಸೆಷನ್ ಸಂದರ್ಭದಲ್ಲಿ ಈ ಬಗ್ಗೆ ಬೆಂಗಳೂರಿನಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಭೂಸ್ವಾಧೀನ ಕುರಿತು ನಿರ್ಧಾರ ತೆಗದುಕೊಳ್ಳೋಣ ಎಂದರು.

3 ತಿಂಗಳಲ್ಲಿ ಘತ್ತರಗಾ ಅಭಿವೃದ್ಧಿ ಕಾರ್ಯಕ್ಕೆ ಚಾಲನೆ: ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ ಅವರು, ಅಫಜಲಪೂರ ತಾಲೂಕಿನ ಘತ್ತರಗಾದ ಶ್ರೀ ಭಾಗ್ಯವಂತಿ ದೇವಸ್ಥಾನದ ಸಮಗ್ರ ಅಭಿವೃದ್ಧಿಗೆ 40 ಕೋಟಿ ರೂ. ಮೊತ್ತದ ಪ್ರಸ್ತಾವನೆ ಜಿಲ್ಲಾಡಳಿತದಿಂದ ಬಂದಿದ್ದು, ಕೂಡಲೆ ಅದಕ್ಕೆ ಅನುಮೋದನೆ ನೀಡಿ ಮುಂದಿನ 3-4 ತಿಂಗಳಿನಲ್ಲಿ ಭಕ್ತಾದಿಗಳ ಅನುಕೂಲಕ್ಕಾಗಿ ಮೂಲಸೌಕರ್ಯ ಕೆಲಸಗಳಿಗೆ ಚಾಲನೆ ನೀಡಲಾಗುವುದು ಎಂದರು.

# ಪಡಿತರ ಚೀಟಿ ಅನುಮೋದನೆ ಪ್ರಕ್ರಿಯೆ ಆರಂಭ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಸೇಡಂ ತಾಲ್ಲೂಕಿನಲ್ಲಿ ಹೊಸದಾಗಿ ಆದ್ಯತಾ ಪಡಿತರ ಚೀಟಿಗಳನ್ನು (ಬಿಪಿಎಲ್) ವಿತರಿಸುವ ನಿಟ್ಟಿನಲ್ಲಿ ಅನುಮೋದನೆ ನೀಡುವ ಪ್ರಕ್ರಿಯೆಯು ಆರಂಭವಾಗಿದ್ದು, ಸಾರ್ವಜನಿಕರು ಅನಗತ್ಯ ಯಾವುದೇ ದಲ್ಲಾಳಿಗಳಿಗೆ ಹಣ ನೀಡಬಾರದದೆಂದು ಸೇಡಂ ತಹಸೀಲ್ದಾರ್ ಶ್ರೀಯಾಂಕ ಎ. ಧನಶ್ರೀ ತಿಳಿಸಿದ್ದಾರೆ.

ಹೊಸ ಪಡಿತರ ಚೀಟಿಗಾಗಿ ಈಗಾಗಲೇ ಅರ್ಜಿ ಸಲ್ಲಿಸಿರುವ ಅರ್ಹ ಕುಟುಂಬಗಳಿಗೆ ಹಿರಿತನ ಆಧಾರದ ಮೇಲೆ ಅನುಮೋದನೆ ನೀಡಲಾಗುತ್ತಿದ್ದು, ಪ್ರಕ್ರಿಯೆಯು ಸಂಪೂರ್ಣವಾಗಿ ಉಚಿತವಾಗಿದೆ. ಸಾರ್ವಜನಿಕರು ಯಾವುದೇ ಕಾರಣಕ್ಕೂ ಮಧ್ಯವರ್ತಿಗಳ ಮೊರೆ ಹೋಗಬಾರದು ಎಂದು ಎಚ್ಚರಿಸಿದ್ದಾರೆ.

ಆನ್‌ಲೈನ್ ಇಂಟರ್ನೆಟ್ ಕೇಂದ್ರದವರು ಅಥವಾ ಮಧ್ಯವರ್ತಿಗಳು ಪಡಿತರ ಚೀಟಿ ಕೊಡಿಸುವುದಾಗಿ ಹಣಕ್ಕೆ ಬೇಡಿಕೆ ಇಟ್ಟರೆ ಸಾರ್ವಜನಿಕರು ಅಂತಹವರ ಮಾತನ್ನು ನಂಬಬಾರದು.

ಅರ್ಜಿದಾರರು ತಮ್ಮ ಪಡಿತರ ಚೀಟಿಯ ಅರ್ಜಿಯ ಸ್ಥಿತಿಯನ್ನು https://ahara.karnataka.gov.in/fcs_verify_kser/main.aspx ವೆಬ್‌ಸೈಟ್ ಲಿಂಕ್ ಬಳಸಿ ಪರಿಶೀಲಿಸಬಹುದು ಅಥವಾ ತಹಶೀಲ್ದಾರ್ ಕಚೇರಿಯ ಆಹಾರ ಶಾಖೆಗೆ ಖುದ್ದಾಗಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ತಹಶೀಲ್ದಾರರು ಸ್ಪಷ್ಟಪಡಿಸಿದ್ದಾರೆ.

# ಫೆ.16ಕ್ಕೆ ಜಿಲ್ಲಾ ಮಟ್ಟದ ಕ್ರೀಡಾಕೂಟ ಉದ್ಘಾಟನೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕಲಬುರಗಿ ಸರಕಾರಿ ಕೈಗಾರಿಕೆ ತರಬೇತಿ ಸಂಸ್ಥೆ(ಪುರುಷ) ವತಿಯಿಂದ 2025-26ನೇ ಸಾಲಿನ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ತರಬೇತಿದಾರರಿಗೆ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಇದೇ ಫೆಬ್ರುವರಿ 16 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಕ್ರೀಡಾ-ಕೂಟ ಉದ್ಘಾಟಿಸಲ್ಲಿದ್ದು, ಮುಖ್ಯ ಅತಿಥಿಗಳಾಗಿ ನಗರ ಪೊಲೀಸ್ ಆಯುಕ್ತ ಡಾ. ಎಸ್.ಡಿ. ಶರಣಪ್ಪ ಆಗಮಿಸುವರು. ಕಲಬುರಗಿ ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ(ಪು) ಪ್ರಾಚಾರ್ಯ ಮುರಲಿಧರ ರತ್ನಗಿರಿ ಅಧ್ಯಕ್ಷತೆಯಲ್ಲಿ ನಡೆಯುವ ಈ ಕ್ರೀಡಾಕೂಟದಲ್ಲಿ ಕೈಗಾರಿಕೆ ತರಬೇತಿ ಹಾಗೂ ಉದ್ಯೋಗ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕಿ ಮಂಜುಳಾ ಎಸ್., ದಾವಣಗೆರೆಯ ಐ.ಟಿ.ಓ.ಟಿ ಜಂಟಿ ನಿರ್ದೇಶಕ ರವೀಂದ್ರನಾಥ ಬಾಳಿ, ಕಲಬುರಗಿ ಕೆ.ಜಿ.ಟಿ.ಟಿ.ಐ ನಿರ್ದೇಶಕ ರಾಜೇಶ ಬಾವಗಿ, ಆದರ್ಶ ಶಿಕ್ಷಣ ಸಂಸ್ಥೆಯ ಸಂಯೋಜಕ ಬಸವರಾಜ ಯಲ್ಲೇರಿ, ತರಬೇತಿ ಸಂಸ್ಥೆಯ ಆಡಳಿತಾಧಿಕಾರಿ ಮತ್ತು ಸರಕಾರಿ ನೌಕರರ ಸಂಘದ ಹಿರಿಯ ಉಪಾಧಕ್ಷ ಸುರೇಶ ವಗ್ಗೆ, ವಿ.ಇ.ಎಸ್. ಕೈಗಾರಿಕೆ ತರಬೇತಿ ಸಂಸ್ಥೆಯ ಪ್ರಾಚಾರ್ಯ ಶಕೀಲ ಅನ್ಸಾರಿ ಭಾಗವಹಿಸಲಿದ್ದಾರೆ.

# ದಾಖಲಾಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕರ್ನಾಟಕ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿಗಮದ ವತಿಯಿಂದ ಕಲಬುರಗಿ ಜಿಲ್ಲೆಯ ದೇವದಾಸಿ ಪುನರ್ವಸತಿ ಯೋಜನಾ ಕಚೇರಿಯಲ್ಲಿ ಖಾಲಿ ಇರುವ ಾಖಲಾಧಿಕಾರಿ ಒಂದು ಸಂಖ್ಯೆ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಬಿ.ಕಾಂ ಹಾಗೂ ತತ್ಸಮಾನ ಪದವಿ, ಕಂಪ್ಯೂಟರ್ ಜ್ಞಾನದ ಜೊತೆಗೆ ಕನ್ನಡ ಮತ್ತು ಇಂಗ್ಲೀಷ್ ಟೈಪಿಂಗ್ ಅನುಭವ ಹೊಂದಿರಬೇಕು. ಮಾಸಿಕ 8,000 ರೂ. ಗೌರವಧನ ನೀಡಲಾಗುವುದು. ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ತಮ್ಮ ಬಯೋಡೇಟಾ, ವಿದ್ಯಾರ್ಹತೆಯ ದಾಖಲೆಗಳೊಂದಿಗೆ ಅರ್ಜಿಯನ್ನು ಇದೇ ಫೆಬ್ರವರಿ 21ರ ಸಂಜೆ 5 ಗಂಟೆಯೊಳಗಾಗಿ ದೇವದಾಸಿ ಪುನರ್ವಸತಿ ಯೋಜನಾ ಕಚೇರಿ, ಕೇರಾಫ್ ಜೈ ಸಂತೋಷಿ ಮಾತಾ ನಿವಾಸ, ಪ್ಲಾಟ್ ನಂ-94, ವೆಂಕಟಗಿರಿ ಹೋಟೆಲ್ ಎದುರು, ಹೊಸ ಜೇವರ್ಗಿ ರಸ್ತೆ, ಎನ್.ಜಿ.ಓ ಕಾಲೋನಿ, ಕಲಬುರಗಿ ಇಲ್ಲಿನ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಂಪಿ ಉತ್ಸವ ವಸ್ತು ಪ್ರದರ್ಶನ ಮಳಿಗೆಗಳಿಗೆ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ:**

ಹಂಪಿ ಉತ್ಸವ -2026 ಅಂಗವಾಗಿ ಹಂಪಿ ಗ್ರಾಮದ ಮಾತಂಗ ಪರ್ವತ ಮೈದಾನದಲ್ಲಿ ಆಯೋಜಿಸಲಾಗಿರುವ ತೋಟಗಾರಿಕೆ ಮತ್ತು ಫಲಪುಷ್ಪ, ಕೃಷಿ, ಅರಣ್ಯ, ಮತ್ಸ ಹಾಗೂ ವ್ಯಾಪಾರ ಮಳಿಗೆಗಳಿಗೆ ಶುಕ್ರವಾರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಉದ್ಘಾಟಿಸಿ, ವಸ್ತುಪ್ರದರ್ಶನಗಳಿಗೆ ಚಾಲನೆ ನೀಡಿದರು.

ಪುಷ್ಪಲೋಕದಲ್ಲಿ ಅರಳಿದ ಬಡವಿ ಶಿವಲಿಂಗ, ಸಾಸಿವೆಕಾಳು ಗಣಪ:

ಫಲಪುಷ್ಪ ಪ್ರದರ್ಶನ ಜನಮನ ಸೂರೆಗೊಳ್ಳುತ್ತಿದೆ. ಪುಷ್ಪಲೋಕದಲ್ಲಿ ಅರಳಿದ ಬೃಹತ್ ಬಡವಿ ಶಿವಲಿಂಗ, ಸಾಸಿವೆಕಾಳು ಗಣಪತಿ ಪ್ರಮುಖ ಆಕರ್ಷಣೆ ಎನಿಸಿವೆ. ಬಿಳಿ,ಕೆಂಪು,ನೇರಳೆ, ಹಳದಿ ಬಣ್ಣದ ಸೇವಂತಿ, ಗುಲಾಬಿ, ಚಂಡು ಹೂಗಳಿಂದ ಬಡವಿ ಶಿವಲಿಂಗ ಹಾಗೂ ಸಾಸಿವೆ ಕಾಳು ಗಣಪ ನಿರ್ಮಿಸಲಾಗಿದೆ. ಬಡವಿ ಶಿವಲಿಂಗ ನಿರ್ಮಾಣಕ್ಕೆ 10 ಸಾವಿರ ಹಾಗೂ ಸಾಸಿವೆ ಕಾಳು ಗಣಪತಿ ನಿರ್ಮಾಣಕ್ಕೆ 5 ಸಾವಿರ ಹೂಗಳು ಬಳಕೆಯಾಗಿವೆ. ಎರಡು ಕಲಾಕೃತಿಗಳು ಹೊಸಪೇಟೆ ಕಲಾವಿದ ಜಗದೀಶ್ ಕೈಚಳದಲ್ಲಿ ಮೂಡಿಬಂದಿದೆ.

ಸುವರ್ಣಯುಗದ ರಾಜಬೀದಿ ವೈಭವ ಅನಾವರಣ:

ವಿಜಯನಗರ ಸಾಮ್ರಾಜ್ಯದ ಸುವರ್ಣಯುಗ ನೆನಪಿಸುವ ಮುತ್ತು,ವಜ್ರ,ವೈಡೂರ್ಯ,ಸ್ವರ್ಣಗಳ ಮಾರಾಟ ರಾಜಬೀದಿ ನಾಡಿನ ಗತವೈಭವ ಸಾರುತ್ತಿವೆ. ಹೂಗಳಿಂದ ನಿರ್ಮಿತವಾದ ರಾಯರರಾಯ, ಯವನರಾಜ್ಯಪ್ರತಿಷ್ಠಾಪನಾಚಾರ್ಯ ಕೃಷ್ಣದೇವರಾಯರ ಪ್ರತಿಮೆ ಗಾಂಭೀರ್ಯ ಮೆಚ್ಚುವಂತಿದೆ. ಸಿರಿಧಾನ್ಯಗಳಲ್ಲಿ ಮೂಡಿಬಂದ ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ವಿನೀತಳಾಗಿ ಕೈಮುಗಿದು ನಿಂತ ಪ್ರತಿಮೆ, ಪರಿಸರ ರಕ್ಷಣೆ ನೋಡುಗರನ್ನು ಪ್ರೇರೆಪಿಸುತ್ತದೆ. ಕುಬ್ಜಮರಗಳ ಬೆಳಸುವ ಬೋನ್ಸಾಯ್ ಕಲೆ, ಜಿಲ್ಲೆಯ ತೋಟಗಾರಿಕೆ ಬೆಳೆಗಳ ಪರಿಚಯ ಪಲಪುಷ್ಪ ಪ್ರದರ್ಶನ ದೊರೆಯುತ್ತಿದೆ.

ಹಂಪಿ ಉತ್ಸವದಲ್ಲಿ ಸುಗ್ಗಿ ಸಂಭ್ರಮ : ರೈತರ ಬದುಕು ಅನಾವರಣಗಳಿಸಿದ ಕೃಷಿ ವಸ್ತುಪ್ರದರ್ಶನ

ಸುಗ್ಗಿ ಸಂಭ್ರಮ, ಕೃಷಿ ವಸ್ತುಗಳ ಪ್ರದರ್ಶನ ನಾಡಿನ ರೈತರ ಬದುಕನ್ನು ಅನಾವರಣಗೊಳಿಸಿತು. ಪಾರಂಪರಿಕ ಹಾಗೂ ಆಧುನಿಕ ಕೃಷಿ ಪದ್ಧತಿಗಳ ಸಂಯೋಗದೊಂದಿಗೆ ಸುಸ್ಥಿರ ಕೃಷಿ ಅಭಿವೃದ್ಧಿಯನ್ನು ಸಾಧ್ಯತೆಯನ್ನು ವಸ್ತುಪ್ರದರ್ಶನ ಸಾರುತ್ತಿದೆ. ಸುಗ್ಗಿ ಸಂಭ್ರಮಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ದವಸ ಧಾನ್ಯಗಳ ರಾಶಿ ಪೂಜೆ ನೆರವೇರಿಸಿದರು.

ಸುಗ್ಗಿ ಸಂಭ್ರಮದಲ್ಲಿ ಸಂಕ್ರಾಂತಿ ಹಬ್ಬ, ರಾಶಿಪೂಜೆ, ಬೀಜಗಳ ಒಕ್ಕಣೆ ಮಾಡುತ್ತಾ ಹಾಗೂ ಒಳಕಲ್ಲಿನಲ್ಲಿ ಧಾನ್ಯ ಬೀಸುತ್ತಾ ಜನಪದ ಗೀತೆ ಹಾಡುವ ಗ್ರಾಮೀಣ ಮಹಿಳೆಯರು, ಎತ್ತಿನ ಬಂಡಿ ಹಳ್ಳಿ ಸೊಗಡನ್ನು ಚಿತ್ರಣವನ್ನು ನೋಡುಗರ ಕಣ್ಣಿಗೆ ಕಟ್ಟಿಕೊಡುತ್ತಿವೆ.

ಕೃಷಿ ವಸ್ತು ಪ್ರದರ್ಶನದಲ್ಲಿ ದೇಶಿ ಪಾರಂಪರಿಕ ಕೃಷಿ ಉತ್ಪನ್ನಗಳು ರೈತರ ಜೀವನ ತರೆದಿಡುತ್ತಿವೆ. ಕುಲಾಂತರಿ ಹಾಗೂ ವಿದೇಶಿ ಬೀಜಗಳ ನಡುವೆಯೂ ಜವಾರಿ ಹಾಗೂ ನಾಟಿ ಬೀಜ ಸಂಪತ್ತು, ಜೀವ ಹಾಗೂ ಸಸ್ಯ ವೈವಿಧ್ಯತೆ ಕಾಪಾಡುವ ಮಹತ್ವ ಸಾರುತ್ತಿವೆ.


ಸಿರಿಧಾನ್ಯಗಳಲ್ಲಿ ಮೂಡಿಬಂದ ಗಣಪತಿ, ಕೆ.ಎಸ್.ಡಿ.ಎ ಲಾಂಚನ ಹಾಗೂ ನಂದಿ ಜನರನ್ನು ಸಳೆಯುತ್ತಿವೆ. ಇದರೊಂದಿಗೆ ಕೃಷಿಯಲ್ಲಿ ದ್ರೋಣಗಳ ಬಳಕೆ, ಟ್ರಾಕ್ಟರ್, ಪಶುಪಾಲನೆಯೊಂದಿಗೆ ಸಮಗ್ರ ಕೃಷಿ ಪದ್ದತಿ ಬಗ್ಗೆ ತಿಳಿಸುವ ಕೃಷಿ ಬ್ರಹ್ಮಾಂಡ, ರೇಷ್ಮೆ ಕೃಷಿ, ಸಿರಿಧಾನ್ಯಗಳ ಖಾದ್ಯಗಳ ಹಾಗೂ ಸಾವಯವ ಕೃಷಿ ಉತ್ಪನ್ನ ಮಾರಾಟ ಈ ಬಾರಿಯ ಕೃಷಿ ಪ್ರದರ್ಶನದಲ್ಲಿ ಪ್ರಮ

ಮಾತಂಗ ಬೆಟ್ಟದ ತಪ್ಪಲಲ್ಲಿ 'ದರೋಜಿ ಕರಡಿ ಲೋಕ':

ಐತಿಹಾಸಿಕ ಹಂಪಿ ಉತ್ಸವದ ಸಂಭ್ರಮದ ನಡುವೆ, ವಿಜಯನಗರ ಜಿಲ್ಲೆಯ ಸಮೃದ್ಧ ಜೀವ ವೈವಿಧ್ಯತೆಯನ್ನು ಪರಿಚಯಿಸುವ ಅರಣ್ಯ ಇಲಾಖೆಯ ವಸ್ತು ಪ್ರದರ್ಶನ ಮಳಿಗೆಯು ಪ್ರವಾಸಿಗರ ಮನಗೆಲ್ಲುತ್ತಿದೆ. ಮಾತಂಗ ಪರ್ವತದ ತಪ್ಪಲಿನ ಬಯಲಿನಲ್ಲಿ ನಿರ್ಮಿಸಲಾಗಿರುವ ಈ ಮಳಿಗೆಯು ಸದ್ಯ ಉತ್ಸವದ ಪ್ರಮುಖ ಆಕರ್ಷಣಾ ಕೇಂದ್ರವಾಗಿ ಹೊರಹೊಮ್ಮಿದೆ.

ಕರಡಿ ಧಾಮದ ಮರುಸೃಷ್ಟಿ:

ಏಷ್ಯಾದಲ್ಲೇ ಮೊದಲನೆಯದು ಎನ್ನಲಾದ ಜಿಲ್ಲೆಯ ಹೆಮ್ಮೆಯ 'ದರೋಜಿ ಕರಡಿಧಾಮ'ವನ್ನು ಹಂಪಿಯ ಅಂಗಳದಲ್ಲಿ ಅರಣ್ಯ ಇಲಾಖೆ ಅತ್ಯಂತ ನೈಜವಾಗಿ ಮರುಸೃಷ್ಟಿಸಿದೆ.



ಬೆಟ್ಟಗುಡ್ಡಗಳ ಸಾಲು, ಕಲ್ಲುಗಳ ನಡುವಿನ ಗುಹೆಗಳು ಮತ್ತು ಹಸಿರಿನ ಹೊದಿಕೆಯನ್ನು ಕಂಡು ಪ್ರವಾಸಿಗರು ಅಕ್ಷರಶಃ ಅಚ್ಚರಿ ವ್ಯಕ್ತಪಡಿಸುತ್ತಿದ್ದಾರೆ. ಕರಡಿಧಾಮಕ್ಕೆ ಭೇಟಿ ನೀಡಲು ಸಾಧ್ಯವಾಗದವರಿಗೆ, ಈ ಮಳಿಗೆಯು ಅದರ ಸಂಪೂರ್ಣ ಚಿತ್ರಣವನ್ನು ಕಣ್ಣಮುಂದೆ ತರುತ್ತಿದೆ.

ಕಾಡುಪ್ರಾಣಿಗಳ ನಡುವೆ ಒಂದು 'ಸೆಲ್ಫಿ':

ಮಳಿಗೆಯ ಒಳಗೆ ಕಾಲಿಡುತ್ತಿದ್ದಂತೆ ಹುಲಿ, ಚಿರತೆ, ಕರಡಿ ಹಾಗೂ ವಿವಿಧ ಉರಗಗಳ ಕಲಾಕೃತಿಗಳು ಸ್ವಾಗತಿಸುತ್ತವೆ. ಕಲಾತ್ಮಕವಾಗಿ ವಿನ್ಯಾಸಗೊಳಿಸಲಾದ ಈ ಪ್ರತಿಕೃತಿಗಳು ಎಷ್ಟು ನೈಜವಾಗಿವೆ ಎಂದರೆ, ಪ್ರವಾಸಿಗರು ಇವುಗಳ ಮುಂದೆ ನಿಂತು ಫೋಟೋ ಹಾಗೂ ಸೆಲ್ಫಿ ತೆಗೆದುಕೊಳ್ಳಲು ಮುಗಿಬೀಳುತ್ತಿದ್ದಾರೆ. ವಿಶೇಷವಾಗಿ ಮಕ್ಕಳಿಗೆ ಈ ಮಳಿಗೆಯು ಅರಣ್ಯ ಲೋಕದ ಪಾಠಶಾಲೆಯಂತಾಗಿದೆ.

ಅರಿವು ಮೂಡಿಸುವ ಪ್ರಯತ್ನ:ಕೇವಲ ಪ್ರದರ್ಶನಕ್ಕಷ್ಟೇ ಸೀಮಿತವಾಗದೆ, ಜಿಲ್ಲೆಯ ಪರಿಸರ ಸಂರಕ್ಷಣೆ ಮತ್ತು ವನ್ಯಜೀವಿಗಳ ಮಹತ್ವದ ಬಗ್ಗೆ ಅರಿವು ಮೂಡಿಸುವ ಫಲಕಗಳನ್ನು ಇಲ್ಲಿ ಅಳವಡಿಸಲಾಗಿದೆ. ಹಂಪಿಯ ಸ್ಮಾರಕಗಳ ಜತೆಗೆ ಜಿಲ್ಲೆಯ ನೈಸರ್ಗಿಕ ಸಂಪತ್ತನ್ನು ಪ್ರವಾಸಿಗರಿಗೆ ಉಣಬಡಿಸುವಲ್ಲಿ ಅರಣ್ಯ ಇಲಾಖೆಯ ಈ ಪ್ರಯತ್ನಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಅಲಂಕಾರಿಕ ಮತ್ಸ ಗಳ ಮೇಳ; ತುಂಗಭದ್ರಾ ಜಲಾಶಯದ ಪ್ರತಿಕೃತಿ ಆಕರ್ಷಣೆ:ಹಂಪಿ ಉತ್ಸವದ ಅಂಗವಾಗಿ ಮಾತಂಗ ಪರ್ವತ ಮೈದಾನದಲ್ಲಿ ಮೀನುಗಾರಿಕೆ ಇಲಾಖೆ ಆಯೋಜಿಸಿರುವ ಮತ್ಸ್ಯ ಮೇಳವು ಸಾರ್ವಜನಿಕರ ಗಮನ ಸೆಳೆಯುತ್ತಿದೆ. ಸಾಗರದ ಆಳದಲ್ಲಿನ ಮತ್ಸ್ಯ ಸಂಪತ್ತಿನ ವೈವಿಧ್ಯತೆಯನ್ನು ಪರಿಚಯಿಸುವ ಉದ್ದೇಶದಿಂದ ಏರ್ಪಡಿಸಿರುವ ಪ್ರದರ್ಶನದಲ್ಲಿ ದೇಶಿ ಹಾಗೂ ವಿದೇಶಿ ಮೂಲದ 50ಕ್ಕೂ ಹೆಚ್ಚು ತಳಿಯ ಅಲಂಕಾರಿಕ ಮೀನುಗಳಿವೆ. ವಿಂಡೋಸ್ ಏಂಜಲ್, ಫ್ಲೋರಾ, ಕ್ಯಾಟ್ ಫಿಶ್, ಕೋಯಿ ರ್ಪ್, ಟೈಗರ್ ಆಸ್ಕರ್, ರೆಡ್ ಕ್ಯಾಪ್ ಗೋಲ್ಡ್, ಲಯನ್ ಹೆಡ್, ಫೈಟರ್, ರೆಡ್ ಸ್ಪಾಟ್ ಸ್ಪೋರಮ್, ಚಿಚ್ಲಿಡ್ಸ್, ಮಲಾಬಾರ್ ಗೊರಾಮಿ, ರ್ಕ್ ಕ್ಯಾಟ್, ಸ್ನೇಕ್ ಹೆಡ್, ಡಿಸ್ಕಸ್, ಹನಿ ಹಾಗೂ ರ್ಲ್ ಗೊರಾಮಿ ಸೇರಿದಂತೆ ಹಲವು ರ್ಣರಂಜಿತ ಮೀನುಗಳು ಮೇಳದಲ್ಲಿ ಗಮನ ಸೆಳೆಯುತ್ತಿವೆ. ಬಣ್ಣಬಣ್ಣದ ರೂಪ, ವಿಶಿಷ್ಟ ಚಲನವಲನ ಮತ್ತು ರ್ಷಕ ಆಕಾರಗಳಿಂದ ಈ ಮೀನುಗಳು ಮಕ್ಕಳಿಂದ ಹಿಡಿದು ಹಿರಿಯರ ತನಕ ಎಲ್ಲರಲ್ಲೂ ಕುತೂಹಲ ಹುಟ್ಟಿಸುತ್ತಿವೆ. ನ ಮಳಿಗೆಯಲ್ಲಿರುವ ಗಾಜಿನ ಅಕ್ವೇರಿಯಂಗಳಲ್ಲಿ ಈ ಮೀನುಗಳನ್ನು ಅಲಂಕಾರಿಕವಾಗಿ ಸಿದ್ಧಪಡಿಸಿರುವುದು ವಿಶೇಷತೆ.

ಅಲಂಕಾರಿಕ ಮೀನು ಸಾಕಾಣಿಕೆ ಉದ್ಯಮವು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸ್ವಯಂ ಉದ್ಯೋಗ-ಕ್ಕೆ ಉತ್ತಮ ಅವಕಾಶಗಳನ್ನು ಒದಗಿಸುತ್ತಿದೆ. ಕಡಿಮೆ ಜಾಗದಲ್ಲಿ, ಕಡಿಮೆ ಹೂಡಿಕೆಯಲ್ಲಿ ಆರಂಭಿಸಬಹುದಾದ ಈ ಉದ್ಯಮಕ್ಕೆ ಸರ್ಕಾರದ ವಿವಿಧ ಯೋಜನೆಗಳ ಮೂಲಕ ಪ್ರೋತ್ಸಾಹ ನೀಡಲಾಗುತ್ತಿದೆ. ಒಳನಾಡು ಮತ್ತು ಕರಾವಳಿ ಪ್ರದೇಶಗಳಲ್ಲಿ ಮೀನು ಸಂಪತ್ತಿನ ವೃದ್ಧಿಗೆ ಜಾರಿಗೆ ತಂದಿರುವ ಯೋಜನೆಗಳ ಕುರಿತು ಬಿತ್ತಿಚಿತ್ರಗಳು ಹಾಗೂ ಮಾಹಿತಿ ಫಲಕಗಳ ಮೂಲಕ ತಿಳಿಸಲಾಗುತ್ತಿದೆ. ಆಹಾರಕ್ಕಾಗಿ ಬಳಸುವ ವಿವಿಧ ಮೀನುಗಳ ಪೋಷಕಾಂಶಗಳ ಮಹತ್ವವನ್ನೂ ವಿವರಿಸಲಾಗಿದೆ.

ಈ ಬಾರಿ ಮೇಳದ ಪ್ರಮುಖ ಆಕರ್ಷಣೆಯಾಗಿ ಜಿಲ್ಲೆಯ ಮತ್ಸ ಸಂಪತ್ತಿನ ಆಕರವಾದ ತುಂಗಭದ್ರಾ ಜಲಾಶಯದ ಪ್ರತಿಕೃತಿಯನ್ನು ನಿರ್ಮಿಸಲಾಗಿದೆ. ಜಲಾಶಯದ ವಿಹಂಗಮ ನೋಟವನ್ನು ರೂಪಕವಾಗಿ ಪ್ರದರ್ಶಿಸಿರುವುದು ನೋಡುಗರ ಮೆಚ್ಚುಗೆಗೆ ಪಾತ್ರವಾಗಿದೆ. ಜಲಾಶಯದಲ್ಲಿ ದೊರೆಯುವ ಮೀನುಗಳ ವೈವಿಧ್ಯತೆ ಹಾಗೂ ಮೀನುಗಾರರ ಜೀವನೋಪಾಯದಲ್ಲಿ ಅದರ ಪಾತ್ರದ ಕುರಿತು ವಿವರಿಸಲಾಗುತ್ತಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಕುಟುಂಬ ಸಮೇತರಾಗಿ ಆಗಮಿಸುವ ಸಾರ್ವಜನಿಕರು ಮತ್ಸ್ಯ ಮೇಳವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಒಟ್ಟಾರೆ, ಈ ಮೇಳವು ಅಲಂಕಾರಿಕ ಮೀನುಗಳ ಅದ್ಭುತ ಲೋಕವನ್ನು ಪರಿಚಯಿಸುವುದರ ಜೊತೆಗೆ ಮತ್ಸ್ಯೋದ್ಯಮದ ಮಹತ್ವ ಮತ್ತು ಸರ್ಕಾರದ ಯೋಜನೆಗಳ ಬಗ್ಗೆ ಜನಜಾಗೃತಿ ಮೂಡಿಸುವ ವೇದಿಕೆಯಾಗುತ್ತಿದೆ.

ವಸ್ತುಪ್ರದರ್ಶನ ಮಳಿಗೆಗಳ ಉದ್ಘಾಟನೆ ವೇಳೆ ಉಪವಿಭಾಗಧಿಕಾರಿ ವಿವೇಕ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಪ್ರಭುರಾಜ್ ಹಿರೇಮಠ, ಕೃಷಿ ಜಂಟಿ ನಿರ್ದೇಶಕ ಬಿ.ಟಿ.ಮಂಜುನಾಥ, ಉಪನಿರ್ದೇಶಕ ಡಾ.ನಹೀಂಪಾಷ, ಉಪಅರಣ್ಯ ಸಂರಕ್ಷಣಾಧಿಕಾರಿ ಅನುಪಮಾ, ಮೀನುಗಾರಿಕೆ ಇಲಾಕೆ ಉಪನಿರ್ದೇಶಕ ಬಿ.ಮಲ್ಲೇಶ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಗ್ರಾಮೀಣ ಕ್ರೀಡೆಗಳಿಗೆ ಆದ್ಯತೆ: ಶಾಸಕ ಕಂದಕೂರ



**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ಗ್ರಾಮೀಣ ಮಟ್ಟದಲ್ಲಿ ಮೊದಲ ಹಂತದ ಆಟವಾಗಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗುವ ಸಾಧ್ಯತೆಗಳು ಹೆಚ್ಚಾಗಿ ಕಾಣುತ್ತೇವೆ ಅದಕ್ಕೆ ಮೊದಲ ಆದ್ಯತೆ ನನ್ನ ಕ್ಷೇತ್ರದಲ್ಲಿ ನೀಡುತ್ತೇನೆ ಎಂದು ಗುರುಮಿಟಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಹೇಳಿದರು.ಯಾದಗಿರಿ ತಾಲೂಕಿನ ಗೌಡಗೇರ ಗ್ರಾಮದಲ್ಲಿ ನಡೆದ ಶ್ರೀ ಮೈಲಾರಲಿಂಗೇಶ್ವರ ಸಂಸ್ಥಾನ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುಮಿಠಕಲ್ ಮತಕ್ಷೇತ್ರದ ಜನಪ್ರಿಯ ಮಾಜಿ ಶಾಸಕರಾದ ಲಿಂಗೈಕ್ಯ ಶ್ರೀ ನಾಗನಗೌಡ ಕಂದಕೂರ ರವರ ದ್ವಿತೀಯ ಪುಣ್ಯಸ್ಮರಣೆ ಅಂಗವಾಗಿ ಟೆನ್ನಿಸ್ ಬಾಲ್ ಕ್ರಿಕೇಟ್ ಟೂರ್ನಮೆಂಟ್ ನಲ್ಲಿ ಬಹುಮಾನ ವಿತರಿಸಿ ಮಾತನಾಡಿದರು. ಇತ್ತೀಚಿನ ಯುವಕರು ತಮ್ಮ ಯೌವನ ವಯಸ್ಸಿನಲ್ಲಿ ಹಲವು ದುಷ್ಚಟಗಳಿಗೆ ಮಾರುಹೋಗಿ ಜೀವನ ಹಾಳು ಮಾಡಿಕೊಳ್ಳ ಬದಲು ಒಂದು ಉತ್ತಮವಾದ ಕ್ರೀಡೆಯನ್ನು ತರಬೇತಿಯನ್ನು ಪಡೆದು ತಮ್ಮ ಗ್ರಾಮೀಣ ಭಾಗದಲ್ಲಿ ಹಲವು ಕಡೆ ಭಾಗವಹಿಸಿ ನಂತರ ರಾಜ್ಯ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುವ ಒಂದು ಸುವರ್ಣ ಅವಕಾಶ ದೊರಕುತ್ತದೆ ಆಟಗಳಿಂದ ಮನುಷ್ಯನಿಗೆ ನೆಮ್ಮದಿ ಮತ್ತು ದೈಹಿಕವಾಗಿ ಸಬಲರಾಗಲು ಸಾಧ್ಯವಾಗುತ್ತದೆ ಆದ್ದರಿಂದ ಪ್ರತಿಯೊಬ್ಬ ಯುವಕರು ಕ್ರೀಡೆಗೆ ಹೆಚ್ಚಿನ ಆದ್ಯತೆ ನೀಡಿ ಎಂದು ಕಿವಿಮಾತು ಹೇಳಿದರು.


ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಷ್ ಕಟಕಟಿ, ಶರಣಗೌಡ ಹೊಸಳ್ಳಿ, ಲಕ್ಷ್ಮಣ ನಾಯಕ, ಮಲ್ಲೇಶ ನಾಯಕ ಹಾಗೂ ಜೆಡಿಎಸ್ ಕಾರ್ಯಕರ್ತರು ಮುಂತಾದವರು ಇದ್ದರು.

# ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮಕ್ಕೆ 500 ಕೋಟಿ ಅನುದಾನ ನೀಡಿ: ಚಿಂಚನಸೂರ್

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತಕ್ಕೆ 2026–27 ಸಾಲಿನಲ್ಲಿ ರೂ.500 ಕೋಟಿಗಳ ಅನುದಾನ ಮಂಜೂರು ಮಾಡುವಂತೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ರವರಿಗೆ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಮನವಿ ನೀಡಿದರು.

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತವನ್ನು ಕೋಲಿ, ಕಬ್ಬಲಿಗ, ಬೆಸ್ತ ಅಂಬಿಗ, ಮೊಗವೀರ, ಕಬ್ಬೇರ, ಗಂಗಾಮಾತಸ್ತ ಅದರ ಮುಂತಾದ 37 ಪರ್ಯಾಯ ಪದಗಳು ಇದ್ದು ಶೇ.46% ರಷ್ಟು ಕಲ್ಯಾಣ ಕರ್ನಾಟಕ (ಹೈದ್ರಾಬಾದ್ ಕರ್ನಾಟಕ) ದಲ್ಲಿ ಜನಾಂಗವಿದ್ದು, ಜನರ ಆರ್ಥಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗಾಗಿ ಈ ನಿಗಮವನ್ನು ಸ್ಥಾಪನೆ ಮಾಡಲಾಗಿರುತ್ತದೆ. ವಿವಿಧ ಕ್ಷೇತ್ರಗಳ ಭೇಟಿ ನೀಡಿದಾಗ ಹೆಚ್ಚಿನ ಜನರು ತಮ್ಮ ಕಷ್ಟಗಳನ್ನು ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿಗಳಿಗೆ ಸಾಲ/ಸೌಲಭ್ಯಗಳನ್ನು ಮತ್ತು ಹೆಚ್ಚಿನ ಜನರು ನಿಗಮದ ಯೋಜನೆಗಳ ಮೂಲಕ ಸಾಲ ಸೌಲಭ್ಯ ನೀಡುವಂತೆ ಒತ್ತಾಯಿಸುತ್ತಿದ್ದು, ಸಮುದಾಯದ ಜನರು ಬಹಳ ಕಷ್ಟ ಅನುಭವಿಸುತ್ತಿದ್ದು ಮತ್ತು ಅತ್ಯಂತ ಕಡುಬಡತನದ ಜನಾಂಗದವರಿದ್ದು, ಈ ಎಲ್ಲಾ ಜನಾಂಗದವರು ಆರ್ಥಿಕವಾಗಿ ಹಿಂದುಳಿದಿದ್ದು, ನಿಗಮದ ಸಮುದಾಯಕ್ಕೆ ಸೇರಿದ ಹೆಚ್ಚಿನ ಜನರಿಗೆ ಸಾಮಾಜಿಕ ಆರ್ಥಿಕ ಹಿತದೃಶಿಯಿಂದ ವಿವಿಧ ಯೋಜನೆಗಳ ಮೂಲಕ ಆರ್ಥಿಕ ಅಭಿವೃದ್ಧಿಗಾಗಿ ಹಾಗೂ ಹೆಚ್ಚಿನ ಜನರಿಗೆ ಸಾಲ ಸೌಲಭ್ಯ



ಒದಗಿಸಲು ಅನುಕೂಲವಾಗುವಂತೆ 2025–26 ನೇ ಸಾಲಿನ ವರೆಗೆ ಈ ನಿಗಮಕ್ಕೆ ವಿವಿಧ ಯೋಜನೆಗಳಡಿ ಸುಮಾರು 35,248 ಅರ್ಜಿಗಳು ಸ್ವೀಕೃತವಾಗಿರುತ್ತದೆ. ಸದರಿ ಎಲ್ಲಾ ಅರ್ಜಿದಾರರಿಗೆ ಸಾಲ/ಸೌಲಭ್ಯ ಒದಗಿಸಬೇಕಾಗಿದ್ದು, ಹಾಗಾಗಿ 2026–27 ನೇ ಸಾಲಿನಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತಕ್ಕೆ ರೂ. 500.00 ಕೋಟಿ ಗಳ ಅನುದಾನ ಮಂಜೂರು ಮಾಡಿ ಎಂದು ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಮನವಿ ನೀಡಿದರು.

# ವೃದ್ಧ ದಂಪತಿಗಳನ್ನು ನಡು ದಾರಿಯಲ್ಲಿಯೇ ಬಿಟ್ಟ ಸಾರಿಗೆ ಸಿಬ್ಬಂದಿಗಳ ವಿರುದ್ಧ ಕ್ರಮಕ್ಕೆ ಒತ್ತಾಯ.



**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ತಪ್ಪಿಸ್ತ ಸಾರಿಗೆ ಇಲಾಖೆಯ ಚಾಲಕ ನಿರ್ವಾಹಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು ಸುಕ್ಷೇತ್ರ ಸಂಗಮಕ್ಕೆ ಪ್ರತಿನಿತ್ಯ ಬಸ್ ಸೌಲಭ್ಯ ಒದಗಿಸುವಂತೆ ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ರೆಡ್ಡಿ ಚೆನ್ನೂರು ಒತ್ತಾಯಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ತಾಲೂಕಿನ ಸುಕ್ಷೇತ್ರ ಕೃಷ್ಣವೇಣಿ ಭೀಮಾ ಸಂಗಮದ ಶ್ರೀ ಸಂಗಮೇಶ್ವರ ದರ್ಶನಕ್ಕೆಂದು ಯಾದಗಿರಿಯ ವಯೋವೃದ್ಧ ದಂಪತಿಗಳಿಬ್ಬರು ಫೆ.9ರಂದು ಮಧ್ಯಾಹ್ನ 2 ಸುಮಾರಿಗೆ ಯಾದಗಿರಿ ಯಿಂದ ಸಂಗಮಕ್ಕೆ ಹೊರಡುವ ಬಸ್ಸಿನಲ್ಲಿ ಈ ಪ್ರಯಾಣಿಕರು ಸಂಗಮವರೆಗೆ ಟಿಕೆಟ್ ತೆಗೆದು ಕೊಂಡು ಪ್ರಯಾಣ ಬೆಳಿಸಿದ್ದಾರೆ.ಆದರೆ ಸಾರಿಗೆ ಇಲಾಖೆ ಸಿಬ್ಬಂದಿಗಳು ನಿಮ್ಮಿಬ್ಬರ ಗೋಸ್ಕರ ಮುಂದೆ ಹೋಗಲ್ಲ ಎಂದು ಅವರನ್ನು ಗುಂಡ್ಲುರ ಗ್ರಾಮದಲ್ಲಿಯೇ ಕೆಳಗಿಳಿಸಿ ಈ ವೃದ್ಧ ಪ್ರಯಾಣಿಕರೊಂದಿಗೆ ಅಸಭ್ಯವಾಗಿ ವರ್ತಿಸಿದ್ದು ಖಂಡನಿಯ ಯಾದಗಿರಿಯಿಂದ ಸಂಗಮ ದವರಿಗೆ ಟಿಕೆಟ್ ನೀಡಿ ನಡು ದಾರಿಯಲ್ಲಿಯೇ ಬಿಟ್ಟು ಈ ಹಿರಿಯ ಜೀವಿಗಳನ್ನು ಅವಮಾನಿಸಿದ್ದು ಸರಿಯಲ್ಲ ಈ ಇಬ್ಬರು ದಂಪತಿಗಳು ಸುಮಾರು ಎರಡು ಕಿಲೋಮೀಟರ ದೂರ ನಡೆದುಕೊಂಡೆ ಸಂಗಮಕ್ಕೆ ತಲುಪಿ ಸಂಗಮೇಶ್ವರರ ದರ್ಶನ ಪಡೆದು–ಕೊಂಡಿದ್ದಾರೆ. ಈ ಘಟನೆಯು ತಲೆತಗ್ಗಿಸುವಂಥದ್ದಾಗಿದೆ ಕೂಡಲೇ ಸಂಬಂಧಿಸಿದ ಅಧಿಕಾರಿಗಳು ತಪ್ಪಿಸ್ತ ಸಿಬ್ಬಂದಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಸುಕ್ಷೇತ್ರ ಸಂಗಮಕ್ಕೆ ದಿನನಿತ್ಯ ಬಸ್ಸಿನ ವ್ಯವಸ್ಥೆ ಕಲ್ಪಿಸಬೇಕು ಒಂದು ವೇಳೆ ನಿರ್ಲಕ್ಷ್ಯ ವಹಿಸಿದ್ದಲ್ಲಿ ರಾಜ್ಯ ರೈತ ಸಂಘದ ವತಿಯಿಂದ ಉಗ್ರ ಹೋರಾಟ ಮಾಡುವುದಾಗಿ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ರೆಡ್ಡಿ ಚೆನ್ನೂರು ಎಚ್ಚರಿಸಿದ್ದಾರೆ.

# ಸಹಾಜ್ ಕಿಡ್ಸ್ ಶಾಲೆಯಲ್ಲಿ 13 ನೇ ವಾರ್ಷಿಕೋತ್ಸವದ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ಯಾದಗಿರಿ ಜಿಲ್ಲೆಯ ಬಂದಳ್ಳಿ ಗ್ರಾಮದಲ್ಲಿ ಸಹಾಜ್ ಕಿಡ್ಸ್ ಶಾಲೆಯಲ್ಲಿ 13 ನೇ ವಾರ್ಷಿಕೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅತಿಥಿಗಳಾಗಿ ಆಗಮಿಸಿದ್ದ ದಿನೇಶ್ ಫಾಸ್ಟರ್ ಮಾತನಾಡಿ, ಶಾಲೆಯಲ್ಲಿ ಮಕ್ಕಳಿಗೆ ಜೀವನದ ಆದರ್ಶಗಳು ಹಾಗೂ ಸಂಸ್ಕಾರಗಳನ್ನು ಬೆಳೆಸಿ, ಭವಿಷ್ಯದಲ್ಲಿ ಮಹತ್ತರ ಸಾಧನೆಗಳತ್ತ ಮುನ್ನಡೆಯುವಂತೆ ಪ್ರೇರೇಪಿಸಿದರು ಈಗಿನ ಕಾಲದಲ್ಲಿ ಮಕ್ಕಳಿಗೆ ಶಿಕ್ಷಣ ಬಹು ಮುಖ್ಯ ತಂದೆ–ತಾಯಿಗಳು ಮಕ್ಕಳಿಗೆ ವಿದ್ಯಾಭ್ಯಾಸ ಕೊಡಿಸುವಲ್ಲಿ ನಿರತರಾಗಬೇಕು ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡಿ ಮಕ್ಕಳಲ್ಲಿ ಓದಿನ ಹವ್ಯಾಸ ಮೂಡಿಸಬೇಕು ಮಗನು ಜ್ಞಾನಿಯಾದರೆ ತಂದೆಗೆ ಸುಖ ಅಜ್ಞಾನಿಯಾದರೆ ತಾಯಿಗೆ ದುಃಖ ಎನ್ನುವ ಮಾತ್ತೊಂದನ್ನು ಹೇಳುತ್ತಾ ಈಗಿನ ಕಾಲದಲ್ಲಿ ವಿದ್ಯಾರ್ಥಿಗಳಿಗೆ ತಂದೆ ತಾಯಿಯ ಪ್ರೇರಣೆ ಬಹು ಮುಖ್ಯ ಎಂದು ಹೇಳಿದರು

ಮನೆಯಲ್ಲಿ ವಿದ್ಯಾರ್ಥಿಗಳಿಗೆ ತಂದೆ ತಾಯಿಗಳು ಓದಲು ಮಕ್ಕಳಿಗೆ ಪ್ರೋತ್ಸಾಹ ನೀಡಬೇಕು ಹಾಗೆ ಮಕ್ಕಳಲ್ಲಿ ಉತ್ತಮ ರೀತಿಯಲ್ಲಿ ಹವ್ಯಾಸಗಳು ಬೆಳೆಸಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶಾಲೆಯ ಗೌರವಧ್ಯಕ್ಷರಾದ ಕಾಳಪ್ಪ ಬಡಿಗೇರ್ ಮಾತನಾಡಿ ., ಶಾಲಾ ವಾರ್ಷಿಕೋತ್ಸವವು ಮಕ್ಕಳ ಪ್ರತಿಭೆ ಅರಳಿಸುವ ವೇದಿಕೆಯಾಗಿದ್ದು, ಶಿಸ್ತು, ಸಂಸ್ಕಾರ, ಸ್ವದೇಶಿ ಸಂಸ್ಕೃತಿ,

ಭಾಷಾಭಿಮಾನ ಮತ್ತು ಸಮಾಜಪರಿವರ್ತನೆ ಶಾಲೆಯ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು ಶಹತ್ ಶಿಕ್ಷಣ ಸಂಸ್ಥೆಯು ಮಕ್ಕಳ ಬಗ್ಗೆ ಕಾಳಜಿ ವಹಿಸುತ್ತೆ ಎಂಬ ಉದ್ದೇಶದಿಂದ ಸತತ ಪ್ರಯತ್ನ ಮಾಡುತ್ತದೆ ಸಹಾಜ್ ಕಿಡ್ಸ್ ಶಾಲೆ ಇನ್ನು ಉತ್ತಮ ರೀತಿಯಲ್ಲಿ ಬೆಳೆಯಲಿ ಈ ಶಾಲೆಯಲ್ಲಿ ಒಂದ–ರಿಂದ ಹತ್ತನೆಯ

ತರಗತಿಯವರೆಗೆ ಇದ್ದು ಉತ್ತಮ ಶಿಕ್ಷಣ ನೀಡುವಲ್ಲಿ ಒಳ್ಳೆಯ ಸಾಹಸ ಮಾಡ್ತಾ ಇದೆ ಎಂದು ಹೇಳಿದರು . ಪ್ರತಿವರ್ಷವೂ ಶಾಲೆಯ ವಿದ್ಯಾರ್ಥಿಗಳು ಹೆಚ್ಚು ಸಾಧನೆ ಮಾಡುತ್ತಿರುವದು ಶಾಲ ಸಂಸ್ಥೆಯ ಶೈಕ್ಷಣಿಕ ಗುಣಮಟ್ಟವನ್ನು ತೋರಿಸುತ್ತದೆ ಎಂದರು.



ಕಾರ್ಯಕ್ರಮದ ಅಂಗವಾಗಿ ಸಂಸ್ಕೃತಿಕ ಪ್ರದರ್ಶನಗಳು ನಡೆಯಿತು. ಗಣ್ಯ ಮಾನ್ಯರಿಗೆ ಸನ್ಮಾನ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು ಅ ಸಂಸ್ಥೆಯ ಪ್ರಾಂಶುಪಾಲರಾದ ಶಶಿಕಲಾ ಬಡಿಗೇರ್ ಮಾತನಾಡಿ

ನಮ್ಮ ಶಾಲೆಯ ವಿದ್ಯಾರ್ಥಿಗಳು ಮೊನ್ನೆ ನಡೆದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಪ್ರಥಮ ದ್ವಿತೀಯ ಹಾಗು ತೃತೀಯ ಸ್ಥಾನಗಳನ್ನು ಪಡೆದು ನಮ್ಮ ಶಾಲೆಗೆ ಹೆಸರು ತಂದಿದ್ದು ನಮಗೆ ಹೆಮ್ಮೆಯ ವಿಷಯ ಎಂದು ಹೇಳಿದರು

ಪ್ರತಿಭಾ ಕಾರಂಜಿಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಮೆಡಲ್ ಹಾಗು ಪ್ರಶಸ್ತಿ ಪತ್ರ ನೀಡಲಾಯಿತು ಹಾಗೂ ಶಾಲೆಯ ಪುಟಾಣಿ ಮಕ್ಕಳಿಂದ ಮನೋರಂಜನ ಕಾರ್ಯಕ್ರಮ ನೋಡುಗರ ಗಮನ ಸೆಳೆಯಿತು .

ವೇದಿಕೆಯಲ್ಲಿ ಮುಖ್ಯ ಅಥಿತಿಗಳಾಗಿ ಮಾರ್ತಂಡಪ್ಪ ಪ್ರಾಂಶುಪಾಲರು, ಮೈಲಾರಪ್ಪ ಜಹಾಗಿರ್ದಾರ್ , ಸಾಹೇಬಣ್ಣ ಗುತ್ತೇದಾರ ಸೈದಾಪುರ ಕಾಂಗ್ರೆಸ್ ಮುಖಂಡರು, ಕೃಷ್ಣ ದಾಸನಕೇರಿ ಯುವ ಕಾಂಗ್ರೆಸ್ ಮುಖಂಡರು ಯಾದಗಿರಿ, ಸಹಾಜ ಕಿಡ್ಸ್ ಅಕಾಡೆಮಿ ಶಾಲೆ ಬಂದಳ್ಳಿ ಶಾಲೆಯ ಅಧ್ಯಕ್ಷರು ಸುಭಾಷ್ ಚಂದ್ರ ಬಡಿಗೇರ್, ಮಂಜುನಾಥ್ ಬಡಿಗೇರ್ ಜಿಲ್ಲಾಧ್ಯಕ್ಷರು ಅಖಂಡ ಕರ್ನಾಟಕ ರಕ್ಷಣ ಸಮಿತಿ ಯಾದಗಿರಿ.

ಮುಖ್ಯಗುರುಗಳು ಹಾಗೂ ಶಾಲ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಿಬ್ಬಂದಿವರ್ಗ, ಪಾಲಕರು, ಪತ್ರಕರ್ತರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸ್ವಾಗತ ಭಾಷಣವನ್ನು ಮುಖ್ಯಗುರು ಶ್ರೀಮತಿ ಶಶಿಕಲಾ ಬಡಿಗೇರ್ ನೆರವೇರಿಸಿದರು. ಸಾಮೂಹಿಕ ಶಾಂತಿಮಂತ್ರದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು...

# ದ್ವಿತೀಯ ಮೇಲ್ಮನವಿ ಅರ್ಜಿ ಕಲಬುರಗಿ ಪೀಠದಲ್ಲಿ ಸ್ವೀಕಾರ


**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**

ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ವ್ಯಾಪ್ತಿ ಹೊಂದಿದ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದಲ್ಲಿ ಮಾಹಿತಿ ಹಕ್ಕು ಕಾಯ್ದೆ 2005, ಕಲಂ 19(3) ರನ್ವಯ ಸಲ್ಲಿಕೆಯಾಗುವ ದ್ವಿತೀಯ ಮೇಲ್ಮನವಿ ಅರ್ಜಿಗಳು ಇನ್ನುಮುಂದೆ ಕಲಬುರಗಿ ಪೀಠದಲ್ಲಿಯೇ ಸ್ವೀಕರಿಸಲಾಗುವುದು ಎಂದು ಆಯೋಗವು ತಿಳಿಸಿದೆ.

ಈ ಮುಂಚೆ ಕಲಬುರಗಿ, ಬೀದರ್, ರಾಯಚೂರು, ಬಳ್ಳಾರಿ, ಕೊಪ್ಪಳ, ವಿಜಯನಗರ, ಯಾದಗಿರಿ ಜಿಲ್ಲೆಗಳು ವ್ಯಾಪ್ತಿಯಲ್ಲಿ ಸಲ್ಲಿಕೆಯಾಗುತ್ತಿದ್ದ ದ್ವಿತಿಯ ಮೇಲ್ಮನವಿಗಳು ಬೆಂಗಳೂರಿನ ಕರ್ನಾಟಕ ಮಾಹಿತಿ ಆಯೋಗದಲ್ಲಿ ಸಲ್ಲಿಸಬೇಕಿತ್ತು.

ಸಾರ್ವಜನಿಕರಿಗೆ ಅನುಕೂಲವಾಗುವ ದೃಷ್ಟಿಯಿಂದ ಹಾಗೂ ಪ್ರಕರಣಗಳ ಶೀಘ್ರವಿಲೇವಾರಿಗೆ ಅನುಕೂಲವಾಗಲು ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಅರ್ಜಿದಾರರು ತಮ್ಮ ಮಾಹಿತಿ ಹಕ್ಕು ಕಾಯ್ದೆ, 2005ರ ಕಲಂ 19(3) ದ್ವಿತಿಯ ಮೇಲ್ಮನವಿ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠ ಮಹಲ್–ಎ–ಶಾಹಿ ಅತಿಥಿ ಗೃಹ, ಹಳೆಯ ಪಿ.ಡಬ್ಲ್ಯೂ.ಡಿ.ಐ.ಬಿ ಅವರಣ, ರೈಲ್ವೆ ಸ್ಟೇಷನ್ ಎದುರುಗಡೆ, ಕಲಬುರಗಿ ಇಲ್ಲಿ ಸಲ್ಲಿಸಬಹುದಾಗಿದೆ ಎಂದು ಪೀಠದ ಶಾಖಾಧಿಕಾರಿ (ಪ್ರಭಾರಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಿಲ್ಲನಕೇರಾದ ಶ್ರೀ ಚನ್ನವೀರೇಶ್ವರ ನೂತನ ಕಳಸಾರೋಹಣ ಉದ್ಘಾಟನಾ ಸಮಾರಂಭ



**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ಯಾದಗಿರಿ ಜಿಲ್ಲೆಯ ಸುಕ್ಷೇತ್ರ ಕಿಲ್ಲನಕೆರಾದ ಶ್ರೀ ಚನ್ನವೀರೇಶ್ವರ ಸಂಸ್ಥಾನ ಮೂಲಮಠ ನೂತನ ಕಳಸರೋಹಣ ಉದ್ಘಾಟನಾವನ್ನು ಪರಮಪೂಜ್ಯ ತಪೋ ರತ್ನ ಶ್ರೀ ಷ. ಬ್ರ. ಶ್ರೀ ಶ್ರೀ ಚನ್ನವೀರ ಶಿವಾಚಾರ್ಯ ಮಹಾಸ್ವಾಮಿಗಳುರವರ ಅಮೃತದಿಂದ ನೆರವೇರಿಸಲಾಯಿತು. ಮುಂಜಾನೆ ಹೋಮ ಮತ್ತು ಲಕ್ಷ್ಮಿ ಪೂಜೆ ನಂತರ ಧಾರ್ಮಿಕ ಸಭೆ ಸಾಯಂಕಾಲ ಪ್ರವಚನ ಪ್ರಾರಂಭ ಮಾಡಲಾಗುತ್ತದೆ. ಶ್ರೀ ಚನ್ನವೀರೇಶ್ವರ ಜಾತ್ರಾ ಮಹೋತ್ಸವವು

ದಿನಾಂಕ : 17–02–2026 ರಂದು ಸಾಯಂಕಾಲ : 6: ಗಂ–ಟೆಗೆ ಭವ್ಯ ರಥೋತ್ಸವ ಬಹಳ ಅದ್ದೂರಿಯಾಗಿ ಜರುಗಳಿದೆ. ಈ ಸಂದರ್ಭದಲ್ಲಿ ಷ.ಬ್ರ.ಶ್ರೀ ಗುರುಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು, ಸಂಸ್ಥಾನ ಹಿರೇಮಠ ಕಡೇಚೂರು, ಷ.ಬ್ರ.ಶ್ರೀ ಸದಾನಂದ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀ ಚರಮೂರ್ತೇಶ್ವರ ಮಠ ಗುರುಗುಂಟಾ ರಾಯಚೂರು,

ಶ್ರೀ ಬಸ್ಸಯ್ಯ ತಾತನವರು, ಶ್ರೀ ಚರಬಸವೇಶ್ವರ ಗದ್ದುಗೆ ಮಠ ಶಹಾಪೂರ, ಶ್ರೀ ಕ್ಷೀರಲಿಂಗ ಮಹಾಸ್ವಾಮಿಗಳು, ಶ್ರೀ ಪಾರ್ವತಿ ಪರಮೇಶ್ವರ ದೇವಸ್ಥಾನ ಚೇಗುಂಟಾ ಸ್ವಾಮಿಗಳು ದಿವ್ಯಸಾನಿದ್ದೆ ವಹಿಸಿದರು. ಈ ವೇಳೆಯಲ್ಲಿ ಶ್ರೀ ಚನ್ನವೀರೇಶ್ವರ ಸಂಸ್ಥಾನ ಮೂಲ ಮಠದ ಅರ್ಚಕರು ಮತ್ತು ಸದ್ಭಕ್ತಾದಿಗಳು ಹಾಗೂ ಕಿಲ್ಲನಕೇರಾ ಗ್ರಾಮದ ಹಿರಿಯ ಮುಖಂಡರು ಯುವಕರು ಇದ್ದರು.

# ಬಸು ನಿಲ್ಲಿಸಲು ಕರ್ನಾಟಕ ಜನಪರ ಹೋರಾಟ ಸಮಿತಿಯಿಂದ ರಸ್ತೆ ತಡೆದು ಧರಣಿ

- **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಸುರಪುರ ತಾಲೂಕಿನ ಬೊಮ್ಮನಹಳ್ಳಿ ಗ್ರಾಮದ ಮಕ್ಕಳಿಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ಲಿಸಬೇಕು ಎಂದು ಕರ್ನಾಟಕ ಜನಪರ ಹೋರಾಟ ಸಮಿತಿಯಿಂದ ರಸ್ತೆ ತಡೆದು ಹೋರಾಟದ ಮೂಲಕ ಮನವಿ ಸಲ್ಲಿಸಿದರು. ಹೋರಾಟ ಸ್ಥಳಕ್ಕೆ ಕೆಎಸ್ಆರ್‌ಟಿಸಿ ಇನ್ಸ್ಪೆಕ್ಟರ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ರಕ್ಷಕ ಠಾಣೆಯವರು. ಇಂಟಲಿಜೆನ್ಸಿ ಅಧಿಕಾರಿಗಳು. ಮತ್ತು ಡಿಪೋ ಅಧಿಕಾರಿಗಳು ಸ್ಥಳಕ್ಕೆ ಬಂದು ಸಮಸ್ಯೆಯನ್ನು ಬಗೆಹರಿಸಲಾಯಿತು.

ಇನ್ನು ಮುಂದೆ ಬಸ್ಸು ನಿಲ್ಲಿಸದೆ ಇದ್ದಲ್ಲಿ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಕೆ ಕೊಡಲಾಯಿತು ಈ ಸಂದರ್ಭದಲ್ಲಿ ಕರ್ನಾಟಕ ಜನಪರ



ಹೋರಾಟ ಸಮಿತಿಯ ರಾಜ್ಯ ಅಧ್ಯಕ್ಷ ದೇವರಾಜ್. ಪ್ರಧಾನ ಕಾರ್ಯದರ್ಶಿ ರೆಹಮಾನ್ ಚಿನ್ನಿಕಟ್ಟೆ. ಅಮರಯ್ಯಸ್ವಾಮಿ ರಾಜ್ಯ ಸಂಘಟನಾ ಕಾರ್ಯದರ್ಶಿ ಶರಣು ಸ್ವಾಮಿ. ಮಹಿಳಾ ಘಟಕ ಕಾರ್ಯದರ್ಶಿ ಬಸಲಿಂಗಮ್ಮ ಇದ್ದರು.


# ಮಾರ್ಚ 14 ರಂದು ಬೃಹತ್ ಲೋಕ ಅದಾಲತ್–ನ್ಯಾ.ಎಸ್.ಬಿ.ರಹಮಾನ

**ಮಲ್ಲಮ್ಮ ನುಡಿ ವಾರ್ತೆ ಬೀದರ,**

ಫೆ,ಗೌರವಾನ್ವಿತ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಮಾರ್ಚ.14 ರಂದು ಬೀದರ ಜಿಲ್ಲೆಯಲ್ಲಿ ಬೃಹತ್ ಲೋಕ ಅದಾಲತನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಎಸ್.ಬಿ.ರಹಮಾನ ಹೇಳಿದರು.

ಅವರು ಶುಕ್ರವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಆಸ್ತಿಪಾಲು ವಿಭಾಗ, ಆಸ್ತಿಪಾಲು ವಿಭಾಗ, ಸಿವಿಲ್ ಪ್ರಕರಣಗಳು, ಜೀವನಾಂಶ, ಚೆಕ್ ಬೌನ್ಸ, ವಿದ್ಯುತ್ ಪ್ರಕರಣಗಳಲ್ಲಿ ರಾಜಿ



ಮಾಡಿಕೊಳ್ಳುವಂತಹ ಪ್ರಕರಣಗಳು, ಕಾರ್ಮಿಕರ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಮಾಡಲು ಅವಕಾಶ ಇರುತ್ತದೆ. ಆದ್ದರಿಂದ ಇದರ ಸದುಪಯೋಗವನ್ನು ಜಿಲ್ಲೆಯ ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಹೇಳಿದರು. ಈ ಹಿಂದೆ ದಿನಾಂಕ 13–12–2025 ರಂದು ರಾಷ್ಟ್ರೀಯ ಲೋಕ ಅದಾಲತನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯಾದ್ಯಾಂತ ಒಟ್ಟು 46,116 ಪ್ರಕರಣಗಳನ್ನು ಲೋಕ ಆದಲಾತನಲ್ಲಿ ಇತ್ಯರ್ಥಗೊಳಿಸಲಾಗಿರುತ್ತದೆ. ಒಟ್ಟು 13,902 ಬಾಕಿ (ಪೇಂಡಿಂಗ) ಪ್ರಕರಣಗಳನ್ನು ಹಾಗೂ 32,214 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿರುತ್ತದೆ ಎಂದರು. ಈ ಬಾರಿ ರಾಷ್ಟ್ರೀಯ ಲೋಕ ಅದಾಲತನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ(ಪೇಂಡಿಂಗ) ಇರುವ ರಾಜಿಯಾಗಬಹುದಾದ ಪ್ರಕರಣಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಇತ್ಯರ್ಥಪಡಿಸಲು ಯೋಜನೆ ರೂಪಿಸಲಾಗಿದೆ. ಕಳೆದ ಲೋಕ ಅದಾಲತಗಿಂತ ಈ ಬಾರಿಯ ಲೋಕ ಅದಾಲತನಲ್ಲಿ ಹೆಚ್ಚು ಪ್ರಕರಣಗಳು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ. ದಿನಾಂಕ 12–02–2026 ಪ್ರಕಾರ ನಮ್ಮ ಜಿಲ್ಲೆಯಲ್ಲಿ ಒಟ್ಟು 29,547 ಪ್ರಕರಣಗಳು ಪೆಂಡಿಂಗ ಇದ್ದು. ಅವುಗಳಲ್ಲಿ ರಾಜಿಯಾಗಬಹುದಾದ ಹೆಚ್ಚು ಪ್ರಕರಣಗಳನ್ನು ರಾಜಿ ಸಂಧಾನ ಮಾಡುವ ಗುರಿ ಹೊಂದಿದ್ದೇವೆ ಹಾಗೂ ಈ ಕುರಿತು ಎಲ್ಲಾ ಪೂರ್ವ ತಯ್ಯಾರಿ ಮಾಡಿಕೊಂಡಿರುತ್ತೇವೆ. ಜಿಲ್ಲೆಯಲ್ಲಿ ನಾವು ಒಟ್ಟು 18 ಲೋಕ ಅದಾಲತ ಬೇಂಚಗಳನ್ನು ನಾವು ರಚಿಸಿರುತ್ತೇವೆಂದರು.ಪ್ರಕರಣಗಳನ್ನು ರಾಜಿ ಸಂಧಾನ ಮಾಡಿಕೊಳ್ಳುವುದರಿಂದ ಕಕ್ಷಿದಾರನಿಗೆ ನ್ಯಾಯಾಲಯ ಶುಲ್ಕ ವಾಪಸ್ ಸಿಗಲಿದೆ ಮೇಲ್ಮನವಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಇಬ್ಬರೂ ಪಕ್ಷಗಾರರು ತಮ್ಮ ದ್ವೇಷ ಮರೆತು ಸುಮಧುರ ಬಾಂಧವ್ಯ ಹೊಂದುವ ಅವಕಾಶ ಇರುತ್ತದೆ ಹಾಗೆ ಯಾವುದೇ ಖರ್ಚು ವೆಚ್ಚ ಇಲ್ಲದೆ ಶೀಘ್ರವಾಗಿ ಪ್ರಕರಣಗಳು ಇತ್ಯರ್ಥವಾಗುತ್ತದೆ. ಕಾರಣ ಮಾರ್ಚ.14 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಆದಾಲತ್ ನಡೆಯಲಿದ್ದು, ಜಿಲ್ಲೆಯ ಹೆಚ್ಚಿನ ಜನರು ಈ ಲೋಕ ಆದಾಲತ್‌ನಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.ಈ ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ಸೇರಿದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಎಲ್ಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ರೈಲ್ವೆ ಸ್ಟೇಷನ್ ಹೋಗುವ ರಸ್ತೆ ಕಳಪೆ.
## ರಸ್ತೆ 24-ಪಿಟ್ ಅಗಲೀಕರಣ ಇಲ್ಲ ಯಾಕೆ..?
## ಉಳಿದ ಜಾಗ ನಂಗೆ ನೀರು ಕಬಳಿಸಿದ ವ್ಯಕ್ತಿ ಯಾರು



ವರದಿ ವೀರೇಶ ಹೊಸಳ್ಳಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು:

ಸಿಂಧನೂರು: ರೈಲ್ವೆ ಸಿಂಧನೂರು ಯಾವಾಗ ಬರುತ್ತದೆ. ಬಹುದಿನಗಳ ಸಿಂಧನೂರು ಜನತೆಯ ಬೇಡಿಕೆ ಆಗಿದ್ದು. ಅದು ಇವತ್ತು ಈಡೇರಿದೆ ಖುಷಿ ವಿಚಾರವಾಗಿದೆ. ಆದರೆ ಬೆಳಿಗ್ಗೆ

4 ಗಂಟೆ ಸುಮಾರಿಗೆ ಪ್ರಾಮಾಣಿಕರಿಗೆ ರೈಲ್ವೆ ಸ್ಟೇಷನ್ ಗೆ ಹೋಗಬೇಕಾದರೆ ಸಮಸ್ಯೆಗಳು ಸುರಿಮಳೆ ಏಕೆಂದರೆ ರಸ್ತೆ ಬದಿಯಲ್ಲಿ ರಾತ್ರಿಯಲ್ಲಿ ಪ್ರತಿ ದಿನ ನಡೆದುಕೊಂಡು ಹೋಗಬೇಕು ಸಮಯಕ್ಕೆ ಸರಿಯಾಗಿ ಬಸ್ ಗಳು ಸೌಕರ್ಯ ಇಲ್ಲ. ರಸ್ತೆಯ ಬದಿಯಲ್ಲಿ ಲೈಟಿಂಗ್ ಇಲ್ಲಿದೆ ರೈಲ್ವೆ ಸ್ಟೇಷನ್ ಹೋಗಬೇಕಾದ ಪರಿಸ್ಥಿತಿ ಜನರು ಎದುರಿಸುತ್ತಿದ್ದಾರೆ.

ರೈಲ್ವೆ ಸ್ಟೇಷನ್ ರಸ್ತೆ ಕಾಮಗಾರಿ ಸಂಪೂರ್ಣ ಕಳಪೆಯಾಗಿದ್ದು. ಮತ್ತು ಈಗಾಗಲೇ ಒಂದು ಕಡೆಗೆ ಸಿಸಿ ರಸ್ತೆ ಮಾಡಿ ಮತ್ತೊಂದು ಕಡೆ ಮರ್ಮ ದೊಂದಿ ಕೂಡಿದ ರಸ್ತೆ ಅದರಲ್ಲಿ ಉಳಿದ ಜಾಗವನ್ನು ಆಕ್ರಮಿಸಿಕೊಂಡು ಅಷ್ಟೇಕ್ಕೆ ಕಾಮಗಾರಿ ಕೆಲಸವನ್ನು ಮುಗಿಯಸುತ್ತಿರುವುದು ನೋಡಿದರೆ ಇದರಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಅಧಿಕಾರಿಗಳು ಶಾಮೀಲಾಗಿದ್ದಾರೆ ಎಂದು ಅನುಮಾನ ಸಾರ್ವಜನಿಕರಲ್ಲಿ ಮೂಡಿದ್ದು.

ರೈಲ್ವೆ ಸ್ಟೇಷನ್ ನಲ್ಲಿ ಟಿಕೆಟ್ ಬುಕಿಂಗ್ ಸೌಲಭ್ಯ ಇಲ್ಲದೆ ಪ್ರತಿ ನಿತ್ಯ ಅಲ್ಲಿಗೆ ಬಂದ ಟಿಕೆಟ್ ಪಡೆದು-ಕೊಂಡು ಹೋಗುವುದಕ್ಕೆ ರೈಲ್ವೆಗೆ ಹೋಗುವ ಪ್ರಾಮಾಣಿಕರಿಗೆ ಸಮಸ್ಯೆ ಆಗುತ್ತದೆ ಹಾಗಾಗಿ ಬೇರೆ ಬೇರೆ ಕಡೆಗೆ ಹೋಗುವ ಪ್ರಾಮಾಣಿಕರು ಅಲ್ಲಿ ಒಂದು ಟಿಕೆಟ್ ಬುಕಿಂ-ಗ್ ಕೌಂಟರ್ ನಲ್ಲಿ ಅಡ್ವಾನ್ಸ್ ಟಿಕೆಟ್ ಪಡೆದುಕೊಳ್ಳುವುದಕ್ಕೆ ಅನುಕೂಲವಾಗುತ್ತದೆ ಎಂದು ಸಾರ್ವಜನಿಕರು ದೂರವಾಗಿದೆ.

ಗಂಗಾವತಿ ರಸ್ತೆಯಿಂದ ರಸ್ತೆಯಿಂದ ರೈಲ್ವೆ ಸ್ಟೇಷನ್ ಗೆ ಹೋಗುವ ರಸ್ತೆ ಕಳಪೆ ಕಾಮಗಾರಿಗೆ ಯಾಗಿದ್ದು ಕಂಡು ಬರುತ್ತದೆ ಏಕೆಂದರೆ ಸರ್ಕಾರದ ಜಾಗ 24- ಪೇಟ್ ಇದ್ದರು. ರಸ್ತೆಯನ್ನು ಅಗಲೀಕರಣ ಮಾಡದೇ ತಮ್ಮಗೆ ಇಷ್ಟು ಬಿದ್ದಂತೆ ಕಾಮಗಾರಿ ಕೆಲಸ ಮಾಡುತ್ತಿರುವುದು ಸರಿಯಾದ ನ್ಯಾಯವೇ ಎಂದು ಸಾರ್ವಜನಿಕರು ಆಕ್ರೋಶವನ್ನು ವ್ಯಕ್ತಪಡಿಸಿದರು.

ಈಗಲಾದರೂ ಸ್ಥಳೀಯ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ರೈಲ್ವೆ ಸ್ಟೇಷನ್ ಕಳಪೆ ಕಾಮಗಾರಿ ಯಾಗದಂತೆ ಎಚ್ಚರವಹಿಸುತ್ತಾರೆ ಇಲ್ಲವೋ ಕಾದು ನೋಡಬೇಕಿದೆ.

# ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1 ರ ವ್ಯಾಪ್ತಿಯ 220/11ಕೆವಿ ಅಲ್ಲಿಪುರ ವಿದ್ಯುತ್ ಉಪ-ಕೇಂದ್ರದಲ್ಲಿ 20ಎಂವಿಎ ಟ್ರಾನ್ಸಫಾರ್ಮರ್ ನ ನಿರ್ವಹಣಾ ಕಾರ್ಯ ಹಾಗೂ ಈ ಉಪಕೇಂದ್ರದಿಂದ ಸರಬರಾಜು ಆಗುವ ವಿದ್ಯುತ್ ಲೈನ್ ಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಫೆ.14 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ಬಳ್ಳಾರಿ ನಗರದ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:

ಎಫ್-33 ರ ವ್ಯಾಪ್ತಿಯ ಕೆ.ಚ್.ಬಿ. ಕಾಲೋನಿ, ನೇತಾಜಿ ನಗರ, ಇನ್ನಾರೆಡ್ಡಿ ಲೇಔಟ್, ಇನ್‌ಫ್ಯಾಂಟ್ರಿ ರೋಡ್, ವಾಸವಿ ಸ್ಕೂಲ್, ಕೊಳಗಲ್ ರೋಡ್, ವಿದ್ಯಾನಗರ, ಕಲ್ಯಾಣಿ ಕಾಲೋನಿ, ಭತ್ರಿ ರೋಡ್, ಭತ್ರಿ, ಗುರು ಕಾಲೋನಿ, ಸತ್ಯವಾಣಿ ನಗರ, ಸಿದ್ದಾರ್ಥ ನಗರ,

ವಿಯಾನಿ ಶಾಲೆ. ಎಫ್-34 ರ ವ್ಯಾಪ್ತಿಯ ಫಸ್ಟ್ ಗೇಟ್, ಕೊರಚ ಸ್ಟ್ರೀಟ್, ಉರ್ದು ಟ್ರೈನಿಂಗ್ ಸ್ಕೂಲ್, ಕಡಪಗೆರೆ, ಟೈಲರ್ ಸ್ಟ್ರೀಟ್, ವಡ್ಡೆ ನಾಗಪ್ಪ ಕಾಲೋನಿ, ತಿಲಕ್ ನಗರ, ವಿನಾಯಕ ನಗರ, ಐಶ್ವರ್ಯ ಕಾಲೋನಿ, ಐಟಿಐ ಕಾಲೇಜು, ರೇಡಿಯೋ ಪಾರ್ಕ್, ಕೌಲ್ ಬಜಾರ್ ಮೇನ್ ರೋಡ್. ಎಫ್-35 ವ್ಯಾಪ್ತಿಯ ಜಲ ಶುದ್ಧೀಕರಣ ಕೇಂದ್ರ.

ಎಫ್-36 ವ್ಯಾಪ್ತಿಯ ಬಂಡಿಹಟ್ಟಿ, ಆಶ್ರಯ ಕಾಲೋನಿ, ಈದ್ಗ ರೋಡ್, ಟೀರ್ಸ್ ಕಾಲೋನಿ, ಜಾಗೃತಿ ನಗರ ಸರ್ಕಲ್, ಆಜಾದ್ ನಗರ. ಎಫ್-40 ವ್ಯಾಪ್ತಿಯ ಕುವೆಂಪು ನಗರ, ರಾಮಂಜನೇಯ ನಗರ, ಸಿ.ಎಮ್.ಸಿ ಕಾಲೋನಿ, ಎಕ್ಸ್ ಸರ್ವಿಸ್‌ಮೆನ್ ಕಾಲೋನಿ. ಎಫ್-72 ವ್ಯಾಪ್ತಿಯ ಕಾಂಟೋನ್ ಮೆಂಟ್, ಸೂರ್ಯ ಕಾಲೋನಿ, ತಿಲಕ್ ನಗರ, ಸುಧಾ ಕ್ರಾಸ್, ನಂದಿ ಕಾಲೋನಿ, ಹೆಚ್. ಆರ್.ಜಿ ಕಾಲೋನಿ, ಜಯನಗರ, ರಹಿಮಬಾದ್ ಕಾಲೋನಿ, ನಲಂದ ಕಾಲೇಜ್, ವಿಜಯನಗರ ಕಾಲೋನಿ, ಕೆ.ಹೆಚ್.ಬಿ ಕಾಲೋನಿ, ಜಗನಾಥ ಮಂದಿರ, ಭಾಸ್ಕರ ನಾಯ್ಡು ಸ್ಟ್ರೀಟ್, ಸೆಂಟ್ ಜೋಸೆಫ್ ಸ್ಕೂಲ್, ಬೆಳಗಲ್ ಕ್ರಾಸ್, ಚಂದ್ರ ಕಾಲೋನಿ, ಎಂ.ಕೆ ಗಡಂಗ್. ಎಫ್-77 ವ್ಯಾಪ್ತಿಯ ಬಸವನಕುಂಟೆ, ಕೋಟೆ ಪ್ರದೇಶ, 1 ನೇ ಗೇಟ್, 2 ನೇ ಗೇಟ್, ಸಿದ್ದಾರ್ಥ ನಗರ, ಸುಧಾಕ್ರಾಸ್, ಓ.ಪಿ.ಡಿ.. ಎಫ್-75 ವ್ಯಾಪ್ತಿಯ ಟ್ರಾಮಾ ಕೇರ್ ಸೆಂಟರ್, ಗೋಪಾಲಗೌಡ ನಗರ. ಎಫ್-76 ವ್ಯಾಪ್ತಿಯ ಅರಣ್ಯ ಕ್ವಾಟರ್ಸ್, ಜಾಗೃತಿ ನಗರ; ರೇಷ್ಮೆ ಇಲಾಖೆ, ಟೀರ್ಸ್ ಕಾಲೋನಿ, ಈದ್ಗ ಮೈದಾನ, ರಾಮಾಂಜನೇಯ ನಗರ. ಎಫ್-77 ವ್ಯಾಪ್ತಿಯ ಓ.ಪಿ.ಡಿ., ಶಾಂತಿ ನಗರ, ಕೊಳಗಲ್ ರೋಡ್, ಬಿಎಂಆರ್‌ಸಿ ಕ್ಯಾಂಪಸ್ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರಾಷ್ಟ್ರೀಯ ಅಪಸ್ಮಾರ ದಿನಾಚರಣೆ
# ಜನಜಾಗೃತಿ ಜಾಥಾಗೆ ಚಾಲನೆ




• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಹಾಗೂ ನ್ಯಾಷನಲ್ ಪ್ಯಾರಾ ಮೆಡಿಕಲ್ ಕಾಲೇಜ್ ಇವರ ಸಂಯುಕ್ತ ಆಶ್ರಯದಲ್ಲಿ "ಅಂತರಾಷ್ಟ್ರೀಯ ಅಪಸ್ಮಾರ" ದಿನಾಚರಣೆಯನ್ನು ಆಚರಿಸಲಾಯಿತು.

ಅಂತರಾಷ್ಟ್ರೀಯ ಅಪಸ್ಮಾರ ದಿನಾಚರಣೆ 2026ರ ಘೋಷವಾಕ್ಯ "ಕಥೆಗಳನ್ನು ಕಾರ್ಯರೂಪಕ್ಕೆ ತರುವುದು" ಆಗಿದೆ. ಅಂತರಾಷ್ಟ್ರೀಯ ಅಪಸ್ಮಾರ ದಿನಾಚರಣೆಯನ್ನು ಜನಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಅಧಿಕಾರಿಗಳಾದ ಹಾಗೂ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದ ನೊಡಲ್ ಆಫೀಸರ್ ಡಾ. ಹೆಚ್. ಪ್ರಕಾಶ್ ಅವರು ಜನಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.

ಅಂತರಾಷ್ಟ್ರೀಯ ಅಪಸ್ಮಾರ ದಿನಾಚರಣೆಯನ್ನು ಪ್ರತಿ ವರ್ಷ ಫೆಬ್ರುವರಿ ಎರಡನೇ ವಾರದ ಮೊದಲನೇ ಸೋಮವಾರದಂದು ಆಚರಿಸಲಾಗುತ್ತದೆ, ಅಪಸ್ಮಾರವಿರುವ ಅಥವಾ ಮೂರ್ಛೆರೋಗವಿರುವ ವ್ಯಕ್ತಿಗೆ ಎಲ್ಲರೂ ಸಹಾಯ ಮಾಡಬೇಕು ಸಮಾಜದಲ್ಲಿ ಎಲ್ಲರ ಹಾಗೆ ಅವರು ಸಹ ಜೀವನವನ್ನು ನಡೆಸಬಹುದು ಅವರಿಗೆ ನಾವು ಸಹಾಯವನ್ನು ಮಾಡಬೇಕು. ಈ ವರ್ಷದ ಘೋಷ ವಾಕ್ಯದ ಪ್ರಕಾರ ಪ್ರತಿಯೊಬ್ಬ ಮೂರ್ಛೆ ರೋಗವಿರುವ ವ್ಯಕ್ತಿಯ ಹಿಂದೆ ಒಂದು ಕಥೆ ಇರುತ್ತದೆ ಅದನ್ನು ನಾವು ತಿಳಿದು ಅವರಿಗೆ ಸಹಾಯ ಮಾಡಬೇಕು. ಹಾಗೂ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಬೀ ಕಾರ್ಯಕ್ರಮವು ನರವೈಜ್ಞಾನಿಕ ಕಾಯಿಲೆಗಳಾದ ತಲೆನೋವು, ಪಾಶ್ವ ವಾಯು, ಅಪಸ್ಮಾರ ಹಾಗೂ ಡಿಮಾನ್ಷಿಯ ಅಂತಹ ಕಾಯಿಲೆಗಳಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತದೆ. ಹಾಗೂ ನರಭೈಜ್ಞಾನಿಕ ಕಾಯಿಲೆ ಇರುವಂತಹ ವ್ಯಕ್ತಿಗೆ ಬೆಂಗಳೂರಿನ ನಿಮ್ಹಾನ್ಸ್ ಇಂದ ಟೆಲಿ ನ್ಯೂರೋಲಾಜಿ ಎಂಬ ಸೇವೆಯನ್ನು ನೀಡಲಾಗುತ್ತದೆ ಅದರ ಸದುಪಯೋಗವನ್ನು ಜನರು ಪಡೆದುಕೊಳ್ಳಲು ಅವರಿಗೆ ತಿಳಿಸಲು ಆಶಾ ಕಾರ್ಯಕರ್ತರಿಗೆ ಹೇಳಿದರು.

ನಂತರ ಕಬಿ ಕಾರ್ಯಕ್ರಮದ ಫಿಜಿಯೋಥೆರಪಿಸ್ಟ್ ಡಾಕ್ಟರ್ ಚೈತ್ರ ಅವರು ಅಪಸ್ಮಾರ ಕುರಿತು ಪ್ರತಿಜ್ಞೆಯನ್ನು ಮಾಡಿಸಿದರು. ನಂತರ ಎಲ್ಲರೂ ಅಂತರಾಷ್ಟ್ರೀಯ ಅಪಸ್ಮಾರ ಕುರಿತು ಜನರಿಗೆ ಜನಜಾಗೃತಿಯನ್ನು ಮೂಡಿಸಲು ಹಳೆ ಜಿಲ್ಲಾ ಆಸ್ಪತ್ರೆಯಿಂದ ಅಶೋಕ್ ಸರ್ಕಲ್ ಮಾರ್ಗದಿಂದ ಅಪಸ್ಮಾರದ ಘೋಷ ವಾಕ್ಯ ಹೇಳುವ ಮುಖಾಂತರ ಹಳೆ ಜಿಲ್ಲಾ ಆಸ್ಪತ್ರೆಗೆ ತಲುಪಲಾಯಿತು. ಈ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ್ ವಿಪಿ ಅವರು ಈ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಕಬಿ ಕಾರ್ಯಕ್ರಮದ ಜಿಲ್ಲಾ ಸಂಯೋಜಕರು ಕುಮಾರಿ ತೇಜಸ್ವಿನಿ ಹಾಗೂ ಈ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು, ಜಿಲ್ಲಾ ಕ್ಷಯ ರೋಗ ಹಾಗೂ ಕುಷ್ಟರೋಗ ನಿವಾರಣ ಕಚೇರಿಯ ಸಿಬ್ಬಂದಿ ವರ್ಗದವರು, ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯ ಸಿಬ್ಬಂದಿ ವರ್ಗದವರು, ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳು, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಿಬ್ಬಂದಿ ವರ್ಗದವರು, ಆಶಾ ಕಾರ್ಯಕರ್ತೆಯರು, ಕಬಿ ಕಾರ್ಯಕ್ರಮದ ಸಿಬ್ಬಂದಿಯವರು ಹಾಗೂ ನ್ಯಾಷನಲ್ ಪ್ಯಾರಾಮೆಡಿಕಲ್ ಕಾಲೇಜಿನ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.


## ರಾಯಚೂರಿನ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ
# ನಿರ್ವಹಣಾ ಘಟಕದ ಸ್ಥಳಕ್ಕೆ ಪ್ರಾದೇಶಿಕ ಆಯುಕ್ತ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ರಾಯಚೂರು ಜಿಲ್ಲಾ ಪ್ರವಾಸದಲ್ಲಿದ್ದ ರಾಯಚೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಗಳು ಆಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಫೆ.11ರಂದು ಯಕ್ಲಸಾಪೂರ ಬಳಿಯಲ್ಲಿರುವ ರಾಯಚೂರಿನ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿದರು.

ಜೆಸಿಬಿ ಮತ್ತು ಇನ್ನೀತರ ಯಂತ್ರಗಳ ಮೂಲಕ ಬಿರುಸಿನಿಂದ ನಡೆದ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಕಾರ್ಯದ ವೀಕ್ಷಣೆ ನಡೆಸಿದ ಆಯುಕ್ತರು, ಪಾಲಿಕೆಯು ಘಟಕದ ಆವರಣದಲ್ಲಿ ಕೈಗೊಂಡ ಬೇರೆ ಬೇರೆ ಕಾರ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಕೆಲ ತಿಂಗಳುಗಳ ಹಿಂದಷ್ಟೇ ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಇಲ್ಲಿಗೆ ಭೇಟಿ ನೀಡಿ ಘಟಕದ ನಿರ್ವಹಣಾ ಕಾರ್ಯದ ಬಗ್ಗೆ ಪರಿಶೀಲಿಸಿ, ಕಾರ್ಯಚುರುಕುಗೊಳಿಸಲು ಸೂಚನೆ ನೀಡಿದ್ದರು. ಅದರಂತೆ ಪಾಲಿಕೆಯು ಈ ಕಾರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿದೆ. ಸಾಕಷ್ಟು ಪ್ರಮಾಣದಲ್ಲಿ



ಹಾಕಲಾಗಿದ್ದ ಘನತಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಕಾರ್ಯ ನಡೆಸಿ ಅರ್ಧದಷ್ಟು ತಾಜ್ಯವನ್ನು ವಿಲೆ ಮಾಡಿ ಈಗ ಮೊದಲಿಗಿಂತ ನಿರ್ವಹಣಾ ಕಾರ್ಯ ಚುರುಕಾಗಿ ನಡೆದಿದೆ. ಇನ್ನು ಕೆಲವೇ ತಿಂಗಳಲ್ಲಿ ಇಲ್ಲಿನ ಎಲ್ಲ ಘನತಾಜ್ಯವನ್ನು ಪುನರ್ಬಳಕೆ ಪ್ರಕ್ರಿಯೆಗೊಳಪಡಿಸಿ ಖಾಲಿ ಮಾಡುವುದಾಗಿ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಆಯುಕ್ತರಿಗೆ ತಿಳಿಸಿದರು.

ಪಾಲಿಕೆಯ ವಾಹನಗಳ ವೀಕ್ಷಣೆ: ರಾಯಚೂರು ಮಹಾನಗರ ಪಾಲಿಕೆಯಿಂದ ನಗರದ ಸ್ವಚ್ಛತೆ-ಗಾಗಿ ಖರೀದಿಸಿರುವ ಸ್ವೀಪಿಂಗ್ ಯಂತ್ರ, ಒಳಚರಂಡಿ ಶುಚಿಗೊಳಿಸುವ ಮೌಂಟೇಡ್ ರೋಬೋಟಿಕ್ ಯಂತ್ರದ ಕಾರ್ಯವನ್ನು ಆಯುಕ್ತರು ವೀಕ್ಷಣೆ ನಡೆಸಿದರು. ನಗರದ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಎರಡೂ ವಾಹನಗಳ ಕಾರ್ಯಗಳ ವೀಕ್ಷಣೆ ನಡೆಸಿದರು.

ಮಾವಿನ ಕೆರೆ ಪ್ರದೇಶಕ್ಕೆ ಭೇಟಿ: ರಾಯಚೂರು ಪ್ರವಾಸದಲ್ಲಿದ್ದ ಪ್ರಾದೇಶಿಕ ಆಯುಕ್ತರು, ಮಾವಿನ ಕೆರೆ ಪ್ರದೇಶಕ್ಕೆ ಭೇಟಿ ನೀಡಿದರು. ಮಾವಿನಕೆರೆ ಕೆರೆ ದಡದ ಮೇಲೆ ಕೈಗೊಂಡ ಕಾಮಗಾರಿ, ಉದ್ಯಾನ ನಿರ್ಮಾಣ, ಫುಟ್ ಪಾತ್ ನಿರ್ಮಾಣದ ಕಾಮಗಾರಿ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಕೆರೆಗೆ ನೀರು ಕಡಿಮೆಯಾದಾಗಲು ಸಹ ಉದ್ಯಾನ ನಿರ್ವಹಣೆಯು ಸಮರ್ಪಕವಾಗಿ ನಡೆಯುವಂತೆ ನೋಡಿಕೊಳ್ಳಲು ಆಯುಕ್ತರು ಸಲಹೆ ಮಾಡಿದರು.

ಈ ಸಂದರ್ಭದಲ್ಲಿ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಶರಣಪ್ಪ ಸತ್ಯಂಪೇಟೆ, ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ಇನ್ನೀತರ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಸಾಮೂಹಿಕ ಇಷ್ಟಲಿಂಗ ಪೂಜೆ



ಮಲ್ಲಮ್ಮ ನುಡಿ ವಾರ್ತೆ ಬೀದರ್: ತಾಲುಕಿನ ಬಾವಗಿ ಭದ್ರೇಶ್ವರ ಮಠದಲ್ಲಿ ಫೆ.15ರಂದು ಮಹಾಶಿವರಾತ್ರಿ ಅಂಗವಾಗಿ ಸಾಮೂಹಿಕ ಇಷ್ಟಲಿಂಗ ಪೂಜೆ ಕಾರ್ಯಕ್ರಮ ಹಮ್ಮಿ-ಕೊಳ್ಳಲಾಗಿದೆ' ಎಂದು ಭದ್ರೇಶ್ವರ ಮಠದ ಶ್ರೀ ಶಿವಕುಮಾರ್ ತಿಳಿಸಿದರು

ಸಾಯಂಕಾಲ 6:00ಗೆ ನಡೆಯಲಿರುವ ಸಾಮೂಹಿಕ ಇಷ್ಟಲಿಂಗ ಪೂಜೆ ಕಾರ್ಯಕ್ರಮ-ದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳಬೇಕು ನಂತರ ಭದ್ರೇಶ್ವರ ಗದ್ದಿಗೆ ರುದ್ರಾಭಿಷೇಕ ಅನ್ನ ಸಂತರ್ಪಣೆ ಇರುತ್ತದೆ ಭದ್ರೇಶ್ವರ ಮಠದ ಶ್ರೀ ಪತ್ರಿಕೆ ಪ್ರಕಟಣೆ ತಿಳಿಸಿದರು

# ನಗರದ ಗಾಂಜಾ ಗಿರಾಕಿ ಕಿಂಗ್ ಪಿನ್ ದೌಲಾ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:



ಸುಮಾರು ಒಂದೂವರೆ ದಶಕದ ಅವಧಿಯಲ್ಲಿ ಎನ್‌ಡಿಪಿಎಸ್ ಪ್ರಕರಣಗಳಲ್ಲಿ ಮತ್ತೆ ಮತ್ತೆ ಕಾಣಿಸಿಕೊಳ್ಳುತ್ತಿರುವ ಹೆಸರು ಡಿ. ದೌಲಾ ಅಲಿಯಾಸ್ ಎಸ್. ದೌಲಾ ಎಂಬ ಡ್ರಗ್ ಪೆಡ್ಲರ್ ಅರೆಸ್ಟ್ ಮಾಡಿ ಜೈಲಿಗೆ ಅಟ್ಟಲಾಗಿದೆ.

2010ರ ದಶಕದಿಂದ 2025ರವರೆಗೆ ವಿವಿಧ ಠಾಣೆಗಳ ದಾಖಲೆಗಳನ್ನು ಪರಿಶೀಲಿಸಿದಾಗ, ಈ ವ್ಯಕ್ತಿಯ ವಿರುದ್ಧ ಒಟ್ಟು 21 ಪ್ರಕರಣಗಳು ದಾಖಲಾಗಿರುವುದು ಬೆಳಕಿಗೆ ಬಂದಿದೆ ಎಂದು ಪೊಲೀಸ್ ಇಲಾಖೆಯ ಮೂಲಗಳಿಂದ ತಿಳಿದು ಬಂದಿದೆ .

ಪೊಲೀಸ್ ದಾಖಲೆಗಳ ಪ್ರಕಾರ, ದೌಲ ಮೇಲಿನ ಆರೋಪಗಳು ಮುಖ್ಯವಾಗಿ ಗಾಂಜಾ ಅನಧಿಕೃತ ಸಾಗಾಟ ಮತ್ತು ಮಾರಾಟಕ್ಕೆ ಸಂಬಂಧಿಸಿದವು. ಹಲವು ಬಾರಿ ಬಂಧನವಾಗಿದ್ದು, ನಂತರ ಜಾಮೀನಿನ ಮೇಲೆ ಬಿಡುಗಡೆಯಾದ ಬಳಿಕ ಮತ್ತೆ ಮತ್ತೆ ಅಂತದೇ ಪ್ರಕರಣಗಳಲ್ಲಿ ಹೆಸರು ಕಾಣಿಸಿಕೊಂಡಿದೆ, ಅಧಿಕಾರಿಗಳ ಪ್ರಕಾರ ಪದೇ ಪದೇ ಇಂಥದೇ ಕೇಸ್ ನಲ್ಲಿ ದೌಲ ಎಂಬ ಡ್ರಗ್ ಪೆಡ್ಲರ್ ಕಾಣಿಸಿಕೊಳ್ಳುತ್ತಿರುವುದರಿಂದ ಈ ಹಿಂದೆ ಅವನನ್ನು ಜಿಲ್ಲೆಯಿಂದ ಗಡಿಪಾರು ಸಹ ಮಾಡಲಾಗಿತ್ತು. ಆದರೆ ಮತ್ತೆ ಅವನು ಅದೇ ಹಳೆ ಚಾಳಿಯನ್ನು ಮುಂದುವರಿಸಿಕೊಂಡು ಹೋಗುತ್ತಾ ನಗರದಲ್ಲಿ ಯುವಕರನ್ನೇ ಗುರಿಯಾಗಿಸಿಕೊಂಡು ಗಾಂಜ ಮತ್ತು ಮಾದಕ ವಸ್ತುಗಳನ್ನು ಮಾರಾಟವನ್ನು ಮಾಡುತ್ತಿದ್ದ, ಪೊಲೀಸರು ಇವನ ಮೇಲೆ ಕೇಸ್ ದಾಖಲಿಸಿದ ಕೆಲವೇ ದಿನಗಳಲ್ಲಿ ಜಾಮೀನು ಪಡೆದು ಮತ್ತೆ ಹೊರಬಂದು ತನ್ನ ಗಾಂಜಾ ವ್ಯಾಪಾರವನ್ನು ಮುಂದುವರಿಸುತ್ತಿದ್ದ ಇದು ಪೊಲೀಸರ ಕಾರ್ಯ ವೈಖರಿಯ ವೈಫಲ್ಯ ಎಂದು

ಸ್ಥಳೀಯ ಸಾರ್ವಜನಿಕರಲ್ಲಿ ಈ ಬೆಳವಣಿಗೆ ನಿಷೇಧಿತ ಮಾದಕ ವಸ್ತುಗಳ ನಿಯಂತ್ರಣಕ್ಕೆ ಕಠಿಣ ಕ್ರಮ ಅಗತ್ಯವೆಂಬುಡು ನಗರದ ಸಾರ್ವಜನಿಕರಲ್ಲಿ ಅಭಿಪ್ರಾಯವಾಗಿತ್ತು.

ಪೊಲೀಸ್ ಮೂಲಗಳು ಹೇಳುವಂತೆ, ಮುಂದಿನ ದಿನಗಳಲ್ಲಿ ಈ ಸಂಬಂಧಿತ ಪ್ರಕರಣಗಳ ಹಿನ್ನಲೆ ಮತ್ತು ಜಾಲವನ್ನು ಆಳವಾಗಿ ಪರಿಶೀಲಿಸುವ ಕಾರ್ಯಾಚರಣೆ ಮುಂದುವರಿಯಲಿದೆ ಯಾರೇ ಆಗಿರಲಿ ಇಂತಹ ಸಮಾಜ ವಿದ್ರೋಹ ಘಟನೆಗಳಲ್ಲಿ ಪಾಲ್ಗೊಂಡಲ್ಲಿ ಅಂಥವರನ್ನು ಕಠಿಣ ಕಾನೂನು ಕ್ರಮಗಳ ಮೂಲಕ ಶಿಕ್ಷೆಗೆ ಗುರಿ ಪಡಿಸಲಾಗುವುದು ಎಂದು ಪೊಲೀಸ್ ಇಲಾಖೆ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

# ಆಯೋಗದ ಅಧ್ಯಕ್ಷರ ಪ್ರವಾಸ

ರಾಯಚೂರು: ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರಾದ ಪಿ.ರಘು ಅವರು ಫೆ.17 ರಿಂದ 19ವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಹಮ್ಮಿಕೊಂಡಿದ್ದಾರೆ.

ಫೆ.17ರ ಸಂಜೆ 4 ಗಂಟೆಗೆ ಯಾದಗಿರಿಯಿಂದ ಹೊರಟು ಸಂಜೆ 6ಕ್ಕೆ ರಾಯಚೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಫೆ.18ರ ಬೆಳಿಗ್ಗೆ 10 ಗಂಟೆಗೆ ನಗರದ ರಿಮ್ ಆಸ್ಪತ್ರೆಗೆ ಭೇಟಿ ನೀಡುವರು. ಮತ್ತು ಮ್ಯಾನ್‌ಹೋಲ್ ಸ್ವಚ್ಛತೆ ಘಟನೆ ಬಗ್ಗೆ ಪರಿಶೀಲನೆ ನಡೆಸುವರು. ಬಳಿ ಬೆಳಿಗ್ಗೆ 11 ಗಂಟೆಗೆ ರಾಯಚೂರು ಜಿಲ್ಲೆಯ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಹಾಗೂ ಇತರೆ ಇಲಾಖೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರು ಮತ್ತು ಸ್ವಚ್ಛತಾ ಕಾರ್ಮಿಕರೊಂದಿಗೆ ನೇರ ಸಂವಾದ ನಡೆಸುವರು. ಮಧ್ಯಾಹ್ನ 12.30ಕ್ಕೆ ರಾಯಚೂರು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆ, ಗ್ರಾಮ ಪಂಚಾಯತಿಗಳು ಮತ್ತು ಇತರೆ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರು, ಪೌರಕಾರ್ಮಿಕರಿಗೆ ಸಂಬಂಧಿಸಿದಂತೆ ಅಧಿಕಾರಿಗಳೊಡನೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

# ಧರ್ಮಸ್ಥಳ ಸಂಘದ ಸಾಮಾಜಿಕ ಕೆಲಸದ ಬಗ್ಗೆ ಹೆಮ್ಮೆ ಇದೆ:ಪ್ರಭು ಚೌವ್ಹಾಣ



(ವರದಿ:ಪರಮೇಶ ರಾಂಪುರೆ)

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಟ್ರಸ್ಟ್ (ರಿ.) ಸಾಮಾಜಿಕ ಕೆಲಸದ ಬಗ್ಗೆ ಹೆಮ್ಮೆ ಇದೆ, ಸಮಾಜ ಕಟ್ಟ ಕಡೆ ವ್ಯಕ್ತಿಗೆ ಇದರ ಲಾಭ ಸಿಗುತ್ತಿದೆ, ಬಡವರಿಗಾಗಿ ಮಿನಿ ಸರಕಾರದಂತೆ ಕೆಲಸ ಮಾಡುತ್ತಿದೆ ಎಂದು ಶಾಸಕ ಪ್ರಭು ಚೌವ್ಹಾಣ ನುಡಿದರು.

ತಾಲೂಕಿನ ಠಾಣಾಕುಶನೂರನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಟ್ರಸ್ಟ್ (ರಿ.) ವತಿಯಿಂದ ಸಾಮೂಹಿಕ ಶ್ರೀ ಲಕ್ಷ್ಮಿ ಪೂಜಾ ವ್ಯವಸ್ಥಾಪನಾ ಸಮಿತಿ ಹಾಗೂ ಪ್ರಗತಿಬಂಧು-ಸ್ವಸಹಾಯ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ 'ಸಾಮೂಹಿಕ ಶ್ರೀ ಲಕ್ಷ್ಮಿ ಪೂಜೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮದ ಉದ್ಘಾಟನೆ ಮಾಡಿ ಅವರು ಮಾತನಾಡಿದರು.

"ಗ್ರಾಮೀಣ ಭಾಗದ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ದೊಡ್ಡ ಶಕ್ತಿಯಾಗಿ ನಿಂತಿದೆ. ಇಂತಹ ಸಾಮೂಹಿಕ ಪೂಜೆಗಳು ಸಮಾಜದಲ್ಲಿ ಒಗ್ಗಟ್ಟು ಮತ್ತು ಶಾಂತಿಯನ್ನು ನೆಲೆಸುವಂತೆ ಮಾಡುತ್ತವೆ" ಎಂದು ತಿಳಿಸಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಹಿರೇಮಠ ಸಂಸ್ಥಾನ ಭಾಲ್ಕಿಯ ಪರಮ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ಆಶೀರ್ವಚನ ನೀಡಿದರು. "ಭಕ್ತಿ ಮತ್ತು ಶಿಸ್ತು ಜೀವನದ ಎರಡು ಕಣ್ಣುಗಳಿದ್ದಂತೆ. ಧರ್ಮಸ್ಥಳ ಯೋಜನೆಯು ಜನರ ಆರ್ಥಿಕ ಸಬಲೀಕರಣದ ಜೊತೆಗೆ ಧಾರ್ಮಿಕ ಜಾಗೃತಿಯನ್ನು ಮೂಡಿಸುತ್ತಿರುವುದು ಶ್ಲಾಘನೀಯ" ಎಂದು ಅವರು ಅಭಿಪ್ರಾಯಪಟ್ಟರು.

ಯೋಜನಾಧಿಕಾರಿ ರಾಘವೇಂದ್ರಗೌಡ ಪ್ರಾಸ್ತವಿಕವಾಗಿ ಮಾತನಾಡಿದರು. ಹಾಗೂ

ಸಂಜುಕುಮಾರ ಜುಮ್ಮಾ, ಗಿರೀಶ ಒಡೆಯರ

ಕಾಶೀನಾಥ ಜಿರ್ಗೆ ಸಂಘದಿಂದ ಮಹಿಳೆಯರು ಸಬಲರಾಗುತ್ತಿದ್ದಾರೆ. ಸ್ವಾಲಂಬಿ ಬದುಕು ಕಟ್ಟಿ ಕೊಂಡಿದ್ದಾರೆ ಎಂದು ಹೇಳಿದರು.

ಬೆಳಿಗ್ಗೆಯಿಂದಲೇ ಆರಂಭವಾದ ಕಾರ್ಯಕ್ರಮದಲ್ಲಿ ನೂರಾರು ಭಕ್ತಾದಿಗಳು ಪಾಲ್ಗೊಂಡಿದ್ದರು, ಬೆಳಿಗ್ಗೆ 8:00 ಗಂಟೆಗೆ: ಪೂಜಾ ಸಂಕಲ್ಪ ಹಾಗೂ ವ್ರತಾಧಿಕಾರಿಗಳಿಂದ ಸಂಕಲ್ಪ ಕಾರ್ಯ ನಡೆಯಿತು. ನಂತರ ಶ್ರೀ ಲಕ್ಷ್ಮಿ ಪೂಜೆ ಮತ್ತು ನಾಮಾವಳಿಗಳ ಪಠಣದೊಂದಿಗೆ ಮಹಾಪೂಜೆ ನೆರವೇರಿಸಲಾಯಿತು.

ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರ ಮನರಂಜಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರಾದ ಶ್ರೀಟಟ ಕಾಶಿನಾಥ ಜಿರ್ಗೆ ವಹಿಸಿದ್ದರು. ಸಪ್ನಾ ಶ್ರೀಕಾಂತ ಖಂಡೆ, ರಾಮಶೇಟ್ಟಿ ಪನ್ನಾಳೆ, ಸತೀಶ ಜಿರ್ಗೆ, ಶಿವಶರಣ ವಲ್ಲಾಪುರೆ, ನಾಗರಾಜ ಬಿರಾದಾರ, ವಲಯ ಮೇಲ್ವಿಚಾರಕರು ವಿಲಾಸ, ರಾಜಕುಮಾರ, ಶಂಕರ, ಭಾರತ ಕದಂ, ಸೇರಿದಂತೆ ಸಂಘದ ನೂರಾರು ಮಹಿಳಾ ಸದ್ಯಸರು ಉಪಸ್ಥಿತರಿದ್ದರು.

# ಸಕಲ ಐಶ್ವರ್ಯಗಳಲ್ಲಿ ವಿದ್ಯೆ ಶ್ರೇಷ್ಠ ಸಂಪತ್ತು: ಶಾಸಕ ರಾಜುಗೌಡ



• ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:

ಪಾಲಕರು ತಮ್ಮ ಮಕ್ಕಳಿಗೆ ವಿದ್ಯಾ ಸಂಪತ್ತು ಕೊಡಲು ಹೆಚ್ಚು ಆಸಕ್ತಿ ವಹಿಸಬೇಕು. ಏಕೆಂದರೆ ವಿದ್ಯೆ ಎಂಬುದು ಸಕಲ ಸಂಪತ್ತುಗಳಲ್ಲಿ ಶ್ರೇಷ್ಠವಾದ ಸಂಪತ್ತಾಗಿದೆ ಎಂದು ದೇವರು ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ (ಕು.ಸಾಲವಾಡಗಿ) ಹೇಳಿದರು. ಪಟ್ಟಣದ ಶ್ರೀ ರಾಘವೇಂದ್ರ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆ(ರಿ) ಇದರ ಅಡಿಯಲ್ಲಿ ನಡೆಯುತ್ತಿರುವ ವಿ.ಕೆ. ಎಚ್.ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ 2025-26 ನೇ ಸಾಲಿನ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಗುರುವಾರ ಮಾತನಾಡಿದರು. ಇವತ್ತು ಬಹುತೇಕ ತಂದೆ-ತಾಯಂದಿರು ಮಕ್ಕಳಿಗಾಗಿ ಸಂಪತ್ತನ್ನು ಗಳಿಸಿ ಬಿಟ್ಟು ಹೋಗಲು ಬಯಸುತ್ತಾರೆ ಆದರೆ ಮಕ್ಕಳನ್ನೇ ಸಂಪತ್ತನ್ನಾಗಿ ಮಾಡಿ ಹೋಗಲು ನಾವೆಲ್ಲರೂ ಪ್ರಯತ್ನಿಸಬೇಕಾಗಿದೆ ಎಂದರು. ನಿವೃತ್ತ ಪ್ರಾಚಾರ್ಯ ಪ್ರೊ. ಎಂ.ಡಿ.ಬಳಗಾನೂರ ಅವರು ಮಾತನಾಡಿ ಪಾಲಕರು ಮಕ್ಕಳಿಗೆ ಕೇವಲ ಒಳ್ಳೆಯ ಶಿಕ್ಷಣ ಕೊಟ್ಟರೆ ಸಾಲದು ಒಳ್ಳೆಯ ಸಂಸ್ಕಾರಗಳನ್ನೂ ಕಲಿಸಿಕೊಡಬೇಕು. ನೈತಿಕ ಹಾಗೂ ಮಾನವೀಯ ಮೌಲ್ಯಗಳಿಲ್ಲದ ಶಿಕ್ಷಣಕ್ಕೆ ಯಾವ ಮಹತ್ವವೂ ಇಲ್ಲ. ಮಕ್ಕಳನ್ನು ಇಂಜಿನಿಯರ್ ಡಾಕ್ಟರ್ ಮಾಡುವುದರ ಜೊತೆಗೆ ಒಬ್ಬ ಒಳ್ಳೆಯ ಮನುಷ್ಯನನ್ನಾಗಿ ಮಾಡಿ ಎಂದರು. ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ, ಪೀರ ಮೊಹಮ್ಮದ್ ಲಟಿಗೇರಿ, ಜೈನಬ ಗಝಾಲಿ ಮಾತನಾಡಿದರು. ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಪರಮ ಪೂಜ್ಯ ಸಿದ್ದಲಿಂಗ ದೇವರು ಕೇವಲ ಮಕ್ಕಳ ಅಂಕಗಳಿಗೆ ಮಹತ್ವ ನೀಡದೆ ಅವರ ಸರ್ವಾಂಗೀಣ ಪ್ರಗತಿಗಾಗಿ ಚಿಂತಿಸಿ ಅವರಲ್ಲಿ ಉದಾತ್ತ ಮೌಲ್ಯಗಳನ್ನು ಬೆಳೆಸಲು ಸದಾ ಕಾಳಜಿ ವಹಿಸಿ ಎಂದರು. ವಿಕೆಎಚ್ ಸಂಸ್ಥೆಯ ಅಧ್ಯಕ್ಷ ಪ್ರಲ್ಹಾದಸಿಂಗ್ ವಿ.ಹಜೇರಿ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಪಾತ್ರರಾದ ಎಂ.ಪಿ.ಸಿಪಾಯಿ, ಉತ್ತಮ ಪಾಲಕ ಸಂತೋಷಸಿಂಗ್ ಹಾಗೂ ಆದರ್ಶ ವಿದ್ಯಾರ್ಥಿ ಶಕೀಲ ಇನಾಮದಾರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಾಲೆಯ ಕಾರ್ಯದರ್ಶಿ ಮಾಧುರಿ ಪ. ಹಜೇರಿ, ಮುಸ್ಲಿಂ ಬ್ಯಾಂಕ್ ಉಪಾಧ್ಯಕ್ಷ ರಫೀಕ್ ಬೇಪಾರಿ, ನಿರ್ದೇಶಕರಾದ ಸಲಾವುದ್ದೀನ್ ಇರ್ಫಾನ್ ಖಾಜಿ, ಸಾಹಿಲ್ ಮುರಾಳ, ಉಸ್ಮಾನಗನಿ ಖಾಜಿ, ಸಮಾಜ ಸೇವಕ ಡಾ.ಮೀರಾಶಾ ಮಕಾನದಾರ, ಸಿ.ಆರ್ಸಿ ಗಳಾದ ರಾಜು ವಿಜಾಪುರ, ಅಲ್ತಾಫ್ ಮುದ್ದೇಬಿಹಾಳ, ಅಲ್ ಹುದಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಜಾವೀದ ಕೆಂಭಾವಿ, ಬಸನಗೌಡ ಹಳ್ಳಿ ಪಾಟೀಲ, ಮೌಲಾಸಾಬ ಶೇಕ, ಅಬ್ದುಲ್ ಜಬ್ಬಾರ ಹವಾಲ್ದಾರ, ಮುಖ್ಯ ಗುರುಮಾತೆ ರಾಜೇಶ್ವರಿ ಅಗ್ನಿ, ಆಡಳಿತ ಮಂಡಳಿ ನಿರ್ದೇಶಕರು, ಶಾಲಾ ಸಿಬ್ಬಂದಿ ವರ್ಗ, ಪಾಲಕರು ಹಾಗೂ ವಿದ್ಯಾರ್ಥಿಗಳು ಇದ್ದರು. ವೇದಿಕೆ ಕಾರ್ಯಕ್ರಮದ ನಂತರ ಮಕ್ಕಳ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಕುರುಗೋಡು ಉತ್ಸವ: ಭರದ ಸಿದ್ಧತೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

(ಕುರುಗೋಡು) ಪಟ್ಟಣದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ವೈಭವವನ್ನು ಪರಿಚಯಿಸುವ ನಿಟ್ಟಿನಲ್ಲಿ ಕುರುಗೋಡು ಪಟ್ಟಣವು ತನ್ನ ಚೊಚ್ಚಲ ಉತ್ಸವ ಆಚರಣೆ-ಯ ಸಂಭ್ರಮದಲ್ಲಿದೆ.

ಇದೇ ಫೆ.15 ಮತ್ತು 16 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಎರಡು ದಿನಗಳ ಕುರುಗೋಡು ಉತ್ಸವ ಆಯೋಜಿಸಿದೆ.

ಉತ್ಸವದ ಆಕರ್ಷಣೆಗೆ ಈಗಾಗಲೇ ಕುರುಗೋಡು ತಾಲ್ಲೂಕು ಆಡಳಿತವು ವಿದ್ಯುತ್ ದೀಪಗಳಿಂದ ಕುರುಗೋಡು ಪಟ್ಟಣದ ಮುಖ್ಯ ರಸ್ತೆಗಳ ಅಲಂಕಾರ, ವಿವಿಧೆಡೆ ಸ್ವಚ್ಛತಾ ಕಾರ್ಯ, ಪ್ರಚಾರ ಕಾರ್ಯ ಸೇರಿದಂತೆ ಹಲವು ಕಾರ್ಯಗಳನ್ನು ಕೈಗೊಂಡಿದೆ.

ಉತ್ಸವವನ್ನು ಜನೋತ್ಸವವನ್ನಾಗಿಸಲು ತಾಲ್ಲೂಕು ಆಡಳಿತದ ಅಧಿಕಾರಿಗಳು ಮನೆ-ಮನೆ ಭೇಟಿ ನೀಡಿ ಉತ್ಸವಕ್ಕೆ ಆಹ್ವಾನ ನೀಡುತ್ತಿದ್ದಾರೆ. ಅಷ್ಟೇ ಅಲ್ಲದೇ, ಜನಾಕರ್ಷಣೆಗಾಗಿ ಉತ್ಸವದಲ್ಲಿ ಹಲವು ರೀತಿಯ ವಿವಿಧ ಸ್ಪರ್ಧಾ ಕಾರ್ಯಕ್ರಮಗಳನ್ನು ಆಯೋಜಿಸಿದೆ.

• **ಇತಿಹಾಸ:**

ಕುರುಗೋಡು ಪ್ರದೇಶದ ಇತಿಹಾಸವು ಶಿಲಾಯುಗದ ಕಾಲದಿಂದ ಪ್ರಾರಂಭವಾಗುತ್ತದೆ. ಶಿಲಾಯುಗದ ಕಾಲದ ಮಾನವರ ವಾಸದ ನೆಲೆಗಳು, ಬರೆದ ಗುಹಾಚಿತ್ರಗಳು ಮತ್ತು ಉಪಯೋಗಿಸುತ್ತಿದ್ದ ಶಿಲಾಯುಧಗಳನ್ನು ಶೋಧಿಸಲಾಗಿದೆ. ಮಹಾಭಾರತದ ಕಾಲದಲ್ಲಿ ಕುಂತಳ ರಾಜ್ಯದ ರಾಜಧಾನಿಯಾಗಿದ್ದ ಇಲ್ಲಿ, ಸುಪ್ರಸಿದ್ಧ ಅರಸ ಚಂದ್ರಹಾಸನು ರಾಜ್ಯಭಾರ ಮಾಡಿದ್ದಾನೆಂದು ಪ್ರತೀತಿ ಇದೆ.

ನಂತರ ಈ ಪ್ರದೇಶವು ಮೌರ್ಯರು, ಶಾತವಾಹನರು, ಬಾದಾಮಿ ಚಾಲುಕ್ಯರು ಮತ್ತು ಕಲ್ಯಾಣದ ಚಾಲುಕ್ಯರ ಆಡಳಿತಕ್ಕೊಳಪಟ್ಟಿತ್ತು. ಕಲ್ಯಾಣದ ಚಾಲುಕ್ಯರ ಸಾಮಾಂತರಾಗಿದ್ದ ಸಿಂದ ವಂಶದ 11 ಅರಸರು ಇಲ್ಲಿ ಕ್ರಿ.ಶ 950 ರಿಂದ 1200 ರ ವರೆಗೆ, ಸುಮಾರು 250 ವರ್ಷಗಳ ಕಾಲ ಸಂಪತ್ತು-ಸಮೃದ್ಧಿಯಿಂದ "ಬಲ್ಲಕುಂದೆ 300 ನಾಡನ್ನು" ಆಳಿದ್ದಾರೆ ಎಂದು ತಿಳಿಯಬಹುದು.

ಈ ಸಿಂದ ಅರಸರು ಈ ನಾಡಿನ ರಾಜಧಾನಿಯನ್ನು 'ಕುರುಗೋಡಿ'ನಲ್ಲಿ ಇಂದ್ರನ ಅಮರಾವತಿಯಂತೆ ಅತ್ಯಂತ ಸುಂದರವಾಗಿ ನಿರ್ಮಿಸಿ, ಬಂಧುರವಾದ ಕೋಟೆಯನ್ನು ಕಟ್ಟಿಸಿ, ಕಲ್ಲೇಶ್ವರ, ಸಂಗಮೇಶ್ವರ, ಉಜ್ಜಾಳೇಶ್ವರ, ತ್ರಿಕೂಟೇಶ್ವರ ಮೊದಲಾದ ಕಲಾತ್ಮಕವಾದ ಹಲವಾರು ದೇವಾಲಯಗಳನ್ನು ಮತ್ತು ಜೈನ ಬಸದಿಗಳನ್ನು ನಿರ್ಮಿಸಿರುವುದು ಪಟ್ಟಣದ ಸುತ್ತ-ಮುತ್ತ ಹಾಗೂ ಹೊರವಲಯ ಕಾಣಬಹುದಾಗಿದೆ.

**ಐತಿಹಾಸಿಕ ದೊಡ್ಡಬಸವೇಶ್ವರನ ಏಕಾಶಿಲಾ ಮೂರ್ತಿ:**

ಕ್ರಿ.ಶ.1336 ರಲ್ಲಿ ವಿಜಯನಗರ ಸಾಮ್ರಾಜ್ಯವನ್ನು ಹಂಪಿಯಲ್ಲಿ ಸ್ಥಾಪಿಸಿದ 'ಹರಿಹರ ಬುಕ್ಕ' ಸಹೋದರ ಪಿತ 'ಸಂಗಮನು' ಕುರುಗೋಡು ಮೂಲದವನೆಂದು ಸಂಶೋಧನೆಯಿಂದ ತಿಳಿಯಬಹುದಾಗಿದೆ. ಈತನೇ ಕುರುಗೋಡಿನಲ್ಲಿ ಭವ್ಯವಾದ 'ಸಂಗಮೇಶ್ವರ' ದೇವಾಲಯನ್ನು ನಿರ್ಮಿಸಿರುವನು.

ನಂತರ ವಿಜಯನಗರ ಸಾಮ್ರಾಜ್ಯದಲ್ಲಿ ವಿಲೀನವಾಗಿದ್ದ ಕುರುಗೋಡಿನಲ್ಲಿ, ಹಂಪೆಯ ಅಧಿಪತಿ 'ಶ್ರೀ ಪಂಪಾ-ವಿರುಪಾಕ್ಷೇಶ್ವರ'ಗೆ ಅಭಿಮುಖವಾಗಿ, ಎದುರು ಬಸವಣ್ಣನ ಸಂಕೇತಿಕವಾಗಿ 13 ಅಡಿ ಎತ್ತರದ ದಕ್ಷಿಣ ಭಾರತದಲ್ಲೇ ಎರಡನೇ ಅತಿದೊಡ್ಡದಾದ 'ದೊಡ್ಡಬಸವೇಶ್ವರ'ನ ಬೃಹದ್ಧಾಕಾರದ ಏಕಶಿಲಾ ಮೂರ್ತಿಯನ್ನು ನಿರ್ಮಿಸಲಾಗಿದೆ. ಇದೇ ಕಾಲದಲ್ಲಿ ಈ ಪಟ್ಟಣದಲ್ಲಿ 10 ಅಡಿ ಮತ್ತು 20 ಅಡಿ ಎತ್ತರದ ಬೃಹದ್ಧಾಕಾರದ 2 ಗಣೇಶ ವಿಗ್ರಹಗಳನ್ನು ನಿರ್ಮಿಸಲಾಗಿದ್ದು, ಇವುಗಳನ್ನು ಕಾಣಬಹುದಾಗಿದೆ.

ವಿಜಯನಗರ ಸಾಮ್ರಾಜ್ಯದ ಕಾಲದಲ್ಲಿ ನಿರ್ಮಿತವಾದ ದೊಡ್ಡ ಬಸವೇಶ್ವರ ದೇವಾಲಯ ಮತ್ತು ಹಲವು ಬೃಹದಾಕಾರದ ಮೂರ್ತಿ ಶಿಲ್ಪಗಳು ವಿಜಯನಗರದ ಶಿಲ್ಪಕಲೆಯ ಮಾದರಿಯಲ್ಲಿ ವೈಶಿಷ್ಟಪೂರ್ಣವಾಗಿ ನಿರ್ಮಿತವಾಗಿವೆ.

ವಿಶ್ವದಲ್ಲಿ ಎಲ್ಲಿಯೂ ಕಂಡು ಬರದ ಐದು ಮುಖಗಳೂ, ಹನ್ನೆರಡು ದಸ್ತಗಳೂ ಇರುವ "ಪಂಚಮುಖಿ ವೀರಭದ್ರ" ದೇವರ ಮೂರ್ತಿ ಈ ಊರಿನಲ್ಲಿರುವುದು ಒಂದು ಅತ್ಯಂತ ಹೆಮ್ಮೆಯ ವಿಷಯ. ಹಂಪೆ ಮತ್ತು ಕುರುಗೋಡಿನ ಈ ಸಾಂಸ್ಕೃತಿಕ ಸಂಬಂಧದಿಂದ ಈ ಸ್ಥಳವು 'ದಕ್ಷಿಣಕಾಶಿ' ಎಂಬುದಾಗಿ ಕರೆಯಲ್ಪಟ್ಟಿದೆ.

**ಮುಖ್ಯ ವೇದಿಕೆ ಸಿದ್ಧತೆ:**

ಫೆ.16ರಂದು ನಡೆಯುವ ಕುರುಗೋಡು ಉತ್ಸವದ ಉದ್ಘಾಟನಾ ಕಾರ್ಯಕ್ರಮಕ್ಕೆ ತಾಲ್ಲೂಕು ಆಡಳಿತವು ಪಟ್ಟಣದ ಕಂಪ್ಲಿ ರಸ್ತೆಯ ಹೊರವಲಯದ ಖಾದರ್ ಲಿಂಗ ದರ್ಗಾ ಹತ್ತಿರ ಸ್ಥಳ ಪರಿಶೀನೆ ನಡೆಸಿದ್ದು, ಕಾರ್ಯಕ್ರಮ ಆಯೋಜನೆಗೆ ಸಿದ್ಧತಾ ಕಾರ್ಯ ಕೈಗೊಂಡಿದೆ.

**ಹೆಲಿಪ್ಯಾಡ್ ಸ್ಥಳ ಪರಿಶೀಲನೆ:**

ಇತಿಹಾಸ ಪ್ರಸಿದ್ಧ ಕುರುಗೋಡು ಪಟ್ಟಣದಲ್ಲಿ ಕಲ್ಲಿನ ಗುಡ್ಡದ ಸಾಲುಗಳು ಸಾಲುಗಳು, ಹೊರವಲಯದಲ್ಲಿ ಪುರಾತನ ದೇವಾಲಯಗಳು, ಕಾಲುವೆ ಮಾರ್ಗ ಸೇರಿದಂತೆ ಸುತ್ತ-ಮುತ್ತಲಿನ ಪರಿಸರ ವಾತಾವರಣ ಕಣ್ತುಂಬಿಕೊಳ್ಳಲು ತಾಲ್ಲೂಕು ಆಡಳಿತವು ಬೈ-ಸ್ಕೈ ಆಯೋಜನೆ ಮಾಡಿದ್ದು, ಪಟ್ಟಣದ ನಾಡಗೌಡರ ಮರಿಬಸವನಗೌಡ ಸ್ಮಾರಕ ಸರ್ಕಾರಿ ಬಾಲಕರ ಪ್ರೌಢಶಾಲಾ ಮೈದಾನದಲ್ಲಿ ಸ್ಥಳ ಪರಿಶೀಲನೆ ಮಾಡಿದೆ.

ಈ ವೇಳೆ ಕುರುಗೋಡು ಪುರಸಭೆ ಅಧ್ಯಕ್ಷ ಶೇಕಣ್ಣ, ಕುರುಗೋಡು ತಾಲ್ಲೂಕು ತಹಶೀಲ್ದಾರ್ ನರಸಪ್ಪ, ಗ್ರೇಡ್-2 ತಹಶೀಲ್ದಾರ್ ಮಲ್ಲೇಶಪ್ಪ, ಕುರುಗೋಡು ವೃತ್ತ ಸಿಪಿಐ ವಿಶ್ವನಾಥ್ ಹಿರೇಗೌಡರ್, ಜೆಸ್ಕಾಂ ಅಧಿಕಾರಿ ಶೇಕ್ಷಾವಲಿ ಹಾಗೂ ಇತರರು ಹಾಜರಿದ್ದರು.

# ಹಂಪಿ ಉತ್ಸವ ಜನಾಕರ್ಷಿಸಿದ ಎತ್ತುಗಳ ಪ್ರದರ್ಶನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

(ಹಂಪಿ): ಮೂರು ದಿನಗಳ ಐತಿಹಾಸಿಕ ಹಂಪಿ ಉತ್ಸವದ ಆರಂಭದ ದಿನವಾದ ಇಂದು ಬೆಳಿಗ್ಗೆ ಕಮಲಾಪುರ ಬಳಿಯ ಹವಾಮಕಚೇರಿಯ ಮೈದಾನದಲ್ಲಿ ನಡೆದ ಎತ್ತುಗಳ ಪ್ರದರ್ಶನ ಜನಾಕರ್ಷಕವಾಗಿತ್ತು.

ವಿಜಯನಗರದ ವಿವಿಧ ಹಳ್ಳಿಗಳಿಂದ 180 ಕ್ಕೂ ಹೆಚ್ಚು ಜೋಡಿ ಎತ್ತುಗಳನ್ನು ರೈತರು ಪ್ರದರ್ಶನಕ್ಕೆ ತಂದಿದ್ದರು.

ಪಶು ಸಂಗೋಪನಾ ಇಲಾಖೆ ಹಮ್ಮಿಕೊಂಡಿದ್ದ ಈ ಪ್ರದರ್ಶನದಲ್ಲಿ ಹಳ್ಳಿಕಾರ್, ಸೀಮೆ, ಮಲ್ನಾಡು, ಕಿಲಾರಿ, ಓಂಗೋಲ್, ಪುಂಗನೂರು, ಅಮೃತ ಮಹಲ್ ಮೊದಲಾದ ತಳಿಗಳ ಎತ್ತುಗಳನ್ನು ಜೂಕ, ಕೋಟಂಚು, ಗೊಂಡೇವು, ಹೂವಿನ ಹಾರಗಳಿಂದ ಸಿಂಗರಿಸಲಾಗಿತ್ತು.



ಇದರಲ್ಲಿ ಹೋವಿನಹಡಗಲಿ ತಾಲೂಕಿನ ಹೊಳಲು ಗ್ರಾಮದಿಂದ ಸೊಪ್ಪಿನ ಬಸವರಾಜ್ ಅವರ ಅಮೃತ ಮಹಲ್, ಹಾಗು ಸೀಮೆ ಜಾತಿಯ ನರಸಿಂಹ ಮತ್ತು ಹಿಂದೂ ಸಾಮ್ರಾಟ ಎಂಬ ಹೆಸರಿನ ಎತ್ತುಗಳ ಕೊಂಬಿಗೆ ಹತ್ತು ಅಡಿ ಎತ್ತರದಷ್ಟು ಬೆಲೂನ್ ಕಟ್ಟಿದ್ದು ಎಲ್ಲರ ಗಮನ ಸೆಳೆಯಿತು.

ಸ್ಥಳದಲ್ಲಿದ್ದ ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ.ರವಿ ಅವರು ಮಾತನಾಡಿ, ಪ್ರದರ್ಶನದಲ್ಲಿ ಆಯ್ಕೆಯಾಗುವ ಮೊದಲ ಮೂರುಜೋಡಿಗೆ ಕ್ರಮವಾಗಿ 10 ಸಾವಿರ, 7500, 5000. ಬಹುಮಾನ ನೀಡಲಿದೆ ಜೊತೆಗೆ ಭಾಗವಹಿಸಿದ್ದ ಎಲ್ಲ ಜೋಡಿಗೆ ಪ್ರಮಾಣ ಪತ್ರನೀಡಿತು.

ಜೊತೆಗೆ ಉಚಿತ ಮೇವು, ನೀರು, ಮತ್ತು ರೈತರಿಗೂ ಮಧ್ಯಾಹ್ನದ ಊಟ ವ್ಯವಸ್ಥೆ ಮಾಡಿತ್ತು.

ಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮ್ಮದ್ ಚಾಲನೆ ನೀಡಿ, ಹಂಪಿ ಉತ್ಸವ ಬರೀ ಕಲಾರಾಧಕರ ಉತ್ಸವ ಆಗದೆ ಎತ್ತುಗಳ ಪ್ರದರ್ಶನದಿಂದ ರೈತರ ಉತ್ಸವವೂ ಆಗಿದೆಂದರು.

# ಕಮಲಾಪುರ ಕೆರೆಯಲ್ಲಿ ದೋಣಿ ವಿಹಾರಕ್ಕೆ ನಿರಾಸಕ್ತಿ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಹಂಪಿ ಉತ್ಸವದ ಅಂಗವಾಗಿ ಮೂರು ದಿನಗಳ ಕಾಲ ಕಮಲಾಪುರದ ಕೆರೆಯಲ್ಲಿ ಮೀನುಗಾರಿಕೆ ಇಲಾಖೆ ಹಮ್ಮಿಕೊಂಡಿರುವ ದೋಣಿ ವಿಹಾರಕ್ಕೆ ಜನರ ಪ್ರತಿಕ್ರಿಯೆ ಕಡಿಮೆ ಕಂಡು ಬಂದಿತು.

ಕೆರೆಯನ್ನು ಒಂದು ಸುತ್ತು ಹೋಗಿ ಬರಲು ಬೋಟಿನಲ್ಲಿ ಗುಂಪನಲ್ಲಿ ಒಬ್ಬರಿಗೆ 100 ರೂ ಶುಲ್ಕವಿದೆ, ಅಲ್ಲದೆ ಇಬ್ಬರೇ (ಸಿಂಗಲ್) ರೈಡ್ ಮಾಡಲು 300 ಮತ್ತು 400 ರೂ ಇದೆ.

ರೈಡ್ ಮಾಡುವವರಿಗೆ ಸುರಕ್ಷಾ ಜಾಕೆಟ್ ವ್ಯವಸ್ಥೆ ಮಾಡಿದೆ. ಇದಕ್ಕೂ ಸಚಿವ ಜಮೀರ್ ಅಹಮ್ಮದ್ ಇಂದು ಚಾಲನೆ ನೀಡಿದರು.

# ಕಂಪ್ಲಿ ಉತ್ಸವದ ಸಮಾರೋಪ ಕ್ಷೇತ್ರಕ್ಕೆ 3 ಸಾವಿರ ಮನೆ : ಜಮೀರ್



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

( ಕಂಪ್ಲಿ): ಕಳೆದ ಸಾಲಿನಲ್ಲಿ ಕಂಪ್ಲಿ ಕ್ಷೇತ್ರಕ್ಕೆ 2 ಸಾವಿರ ಮನೆ ನೀಡಿದ್ದು, ಬರುವ ಆರ್ಥಿಕ ಸಾಲಿಗೆ 3 ಸಾವಿರ ಮನೆಗಳನ್ನು ನೀಡಲಾಗುವುದು ಎಂದು

ವಸತಿ ಸಚಿವ ಬಿ.ಝೆಡ್.ಜಮೀರ್ ಅಹ್ಮದ್ ಖಾನ್ ಹೇಳಿದರು.

ಅವರು ನಿನ್ನೆ ರಾತ್ರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಂಪ್ಲಿ ಪಟ್ಟಣದ ಸುಂದರಿ ಸಕ್ಕರೆ ಕಾರ್ಖಾನೆ ಮೈದಾನದ ಗಂಡುಗಲಿ ಕುಮಾರರಾಮ ವೇದಿಕೆಯಲ್ಲಿ ಯೋಜಿಸಿದ್ದ ಕಂಪ್ಲಿ ಉತ್ಸವದ ಸಮಾರೋಪ ಸಮಾರಂಭ ಉದ್ಘಾಟನೆ ಮಾಡಿ ಮಾತನಾಡಿದರು.

2024ರಲ್ಲಿ ಮೊದಲ ಹಂತದಲ್ಲಿ 36,779 ಮನೆಗಳನ್ನು ಹಂಚಿಕೆ ಮಾಡಲಾಗಿತ್ತು. ಎರಡನೇ ಹಂತದಲ್ಲಿ 42,345 ಮನೆಗಳನ್ನು ಹಂಚಿಕೆ ಮಾಡಲಾಗುವುದು. ಮೂರನೇ ಹಂತದಲ್ಲಿ 36 ಸಾವಿರ ಮನೆಗಳನ್ನು ಜೂನ್ ತಿಂಗಳಲ್ಲಿ ಹಂಚಿಕೆ ಮಾಡಲಾಗುವುದು ಎಂದರು

ಕಳೆದ ಸರ್ಕಾರದಲ್ಲಿ ಈ ಕ್ಷೇತ್ರಕ್ಕೆ 3 ಸಾವಿರ ಕೋಟಿ ಅನುದಾನ ಲಭಿಸಿದೆ. ನಮ್ಮ ಸರ್ಕಾರ ಬಂದ ಮೇಲೆ ಈ ಭಾಗಕ್ಕೆ ಎರಡೂವರೆ ವರ್ಷದಲ್ಲಿ ಸುಮಾರು 2,500 ಸಾವಿರ ಕೋಟಿ ರೂ. ಅನುದಾನ ನೀಡಿದೆ. ತಾಲ್ಲೂಕು ಮಟ್ಟದ ಉತ್ಸವವನ್ನು ಸರ್ಕಾರದ 70 ಲಕ್ಷ ರೂ. ವೆಚ್ಚದಲ್ಲಿ ಇಷ್ಟು ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜನೆ ಮಾಡಿರುವುದು ಹೆಮ್ಮೆಯ ಸಂಗತಿ. ಇದಕ್ಕೆ ಈ ಜನಸ್ತೋಮವೇ ಸಾಕ್ಷಿಯಾಗಿದೆ. ಕಂಪ್ಲಿ ಕ್ಷೇತ್ರದ ಮೇಲೆ ಶಾಸಕ ಗಣೇಶ್ ಅವರು ಇಟ್ಟಿರುವ ಪ್ರೀತಿ ಅಂತಹದ್ದು. ಮುಂಬರುವ ಉತ್ಸವಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಆಹ್ವಾನಿಸಲಾಗುವುದು ಎಂದರು.

ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಮಾತನಾಡಿ, ಈ ಭಾಗದ ರೈತರ ಕ್ಷೇಮಾಭಿವೃದ್ಧಿಗೆ ಶ್ರಮಿಸುವ ಮತ್ತು ಜನಸಾಮಾನ್ಯರ ಕಷ್ಟ- ಕಾರ್ಪಣ್ಯಗಳಿಗೆ ತ್ವರಿತ ಸ್ಪಂದಿಸುವ ಭಗೀರಥ, ಸಹೃದಯಿ ಶಾಸಕ ಜೆ.ಎನ್ ಗಣೇಶ್ ಎಂದರು.

ಶಾಸಕ ಗಣೇಶ್, ಕ್ಷೇತ್ರದ ಅಭಿವೃದ್ಧಿಗಾಗಿ ಅನುದಾನಕ್ಕಾಗಿ ಎಲ್ಲಾ ಸಚಿವರ ಕಚೇರಿಗಳಿಗೆ ಸಾಕಷ್ಟು ಅಲೆದಾಡುತ್ತಿದ್ದರು. ಈ ಉತ್ಸವದ ಅನುದಾನಕ್ಕಾಗಿ ಸಾಕಷ್ಟು ಅವಿರತರಾಗಿ ಶ್ರಮಿಸಿದ್ದಾರೆ. ಮುಂಬರುವ ಎಲ್ಲಾ ಕಂಪ್ಲಿ ಉತ್ಸವಗಳಿಗೆ ಜಿಲ್ಲೆಯ ಎಲ್ಲಾ ಶಾಸಕರ ಸಾಥ್ ಇರಲಿದೆ ಎಂದು ಹೇಳಿದರು.

ಕಂಪ್ಲಿ ಶಾಸಕರು ಜೆ.ಎನ್. ಗಣೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಂಪ್ಲಿ ಕ್ಷೇತ್ರದಲ್ಲಿ ಅಭಿವೃದ್ಧಿ ಪರ್ವವೇ ಆರಂಭಗೊಂಡಿದೆ. ಕಂಪ್ಲಿ-ಕುರುಗೋಡಿನಲ್ಲಿ ಮಿನಿ ವಿಧಾನಸೌಧ, 100 ಹಾಸಿಗೆಯುಳ್ಳ ಆಸ್ಪತ್ರೆ, ಮುಖ್ಯ ರಸ್ತೆಗಳ ನಿರ್ಮಾಣ, ಶಾಲಾ-ಕಾಲೇಜುಗಳು, ಕಂಪ್ಲಿ-ಗಂಗಾವತಿ ಸೇತುವೆ ಸೇರಿದಂತೆ ಹಲವಾರು ರೀತಿಯ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ, ಸತತ ಮೂರು ತಿಂಗಳ ಪ್ರಯತ್ನದಿಂದ ಕಂಪ್ಲಿ- ಕುರುಗೋಡು ಉತ್ಸವ ಆಚರಿಸಲು ಅವಕಾಶ ದೊರೆತಿದೆ ಎಂದರು.

ಕಾರ್ಯಕ್ರಮಕ್ಕೂ ಆರಂಭಕ್ಕೂ ಮುನ್ನ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ನಗರ ಶಾಸಕ ಭರತ್ ರೆಡ್ಡಿ ಡಾ.ಬಾಬು ಜಗಜೀವನ್ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ್, ಕರ್ನಾಟಕ ಸ್ಟೇಟ್ ಮಿನಿರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ್ಮಣ್, ಕಂಪ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸರಾವ್, ಕಂಪ್ಲಿ ತಾಲ್ಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷ ಹಬೀಬ್ ರೆಹಮಾನ್ ಸೇರಿದಂತೆ ತಾಲ್ಲೂಕು ಆಡಳಿತದ ಅಧಿಕಾರಿಗಳು-ಸಿಬ್ಬಂದಿ ವರ್ಗ, ಸಾರ್ವಜನಿಕರು ಇದ್ದರು.

ಬಳಿಕ ಚಂದನ್ ಶೆಟ್ಟಿ ಮತ್ತು ತಂಡದವರಿಂದ ರಸಮಂಜರಿ ಸಂಗೀತ ಕಾರ್ಯಕ್ರಮ ಜರುಗಿದವು.

# ಕುಡಿಯುವ ನೀರಿನ ಗುಣಮಟ್ಟ, ಸ್ವಚ್ಛತೆ ಆದ್ಯತೆಯಾಗಬೇಕು: ಯಲ್ಲಾ ರಮೇಶ್ ಬಾಬು

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಜಿಲ್ಲೆಯಲ್ಲಿ ಕುಡಿಯುವ ನೀರಿನ ಗುಣಮಟ್ಟ ಮತ್ತು ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು. ಜಿಲ್ಲೆಯ ನಗರ, ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಕುಡಿಯುವ ನೀರಿನ ಗುಣಮಟ್ಟದ ಕುರಿತು ಮತ್ತು ಸ್ವಚ್ಛತೆಯ ಕುರಿತು ಡಿಹೆಚ್ಒ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಾಂತಿ, ಬೇಧಿ, ಕಾಲಾರ, ಕರಳು ಬೇನೆ ಹಾಗೂ ಅತಿಸಾರ ಬೇಧಿ ಮತ್ತು ಕಾಮಾಲೆ ಮುಂತಾದ ಸಾಂಕ್ರಾಮಿಕ ಕಾಯಿಲೆಗಳು ಹರಡದಂತೆ ಎಚ್ಚರವಹಿಸುವ ಮೂಲಕ ಅಂತರ ಇಲಾಖೆಗಳ ಸಹಯೋಗದಲ್ಲಿ ಕರ್ತವ್ಯ ನಿರ್ವಹಿಸಬೇಕು ಹಾಗೂ ಮುಂಜಾಗೃತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಮಾತನಾಡಿ,

ನಗರ ಪ್ರದೇಶದಲ್ಲಿ ವರದಿಯಾಗುವ ಡೆಂಗ್ಯೂ ಪ್ರಕರಣಗಳಿಗೆ ನಿಯಂತ್ರಣ ಕ್ರಮ ಹಾಗೂ ಡೆಂಗ್ಯೂ ರೋಗ ನಿಯಂತ್ರಣ ಮತ್ತು ಮುಂಜಾಗೃತಾ ಕ್ರಮಗಳನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಬೇಕು ಎಂದರು.

ಮುಖ್ಯವಾಗಿ ನಗರ ಪ್ರದೇಶದಲ್ಲಿ ನಿಂತ ನೀರಿನ ತಾಣಗಳನ್ನು ಮತ್ತು ಘನತಾಜ್ಯ ಸ್ವಚ್ಛತೆಗೊಳಿಸುವುದರಿಂದ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಬಹುದು. ಜೊತೆಗೆ ಅವಶ್ಯಕತೆ ಇದ್ದಲ್ಲಿ ಒಳಾಂಗಣ ಮತ್ತು ಹೊರಾಂಗಣದಲ್ಲಿ ಧೂಮೀಕರಣ ಮಾಡಬೇಕು ಎಂದರು. ಜಿಲ್ಲಾ ಕ್ಷಯ-ರೋಗ ನಿರ್ಮೂಲನಾ ಕಾರ್ಯಕ್ರಮ ಅಧಿಕಾರಿ ಡಾ.ಇಂದ್ರಾಣಿ.ವಿ ಅವರು ಮಾತನಾಡಿ, 2025 ರ ಅಂಕಿ-ಅಂಶ ಪ್ರಕಾರ ಜಿಲ್ಲೆಯ ನಗರಪ್ರದೇಶಗಳಲ್ಲಿ ಹೆಚ್ಚಿನ ದುರ್ಬಲ ವರ್ಗದ ಜನರ ಸಂಖ್ಯೆಯಿದ್ದು, ಇವರಲ್ಲಿ ಕ್ಷಯರೋಗದ ಪ್ರಮಾಣ ಜಾಸ್ತಿ ಕಂಡುಬಂದಿರುತ್ತದೆ. ಇದಕ್ಕೆ ಕಾರಣ ಅಪೌಷ್ಟಿಕತೆ, ಸ್ವಚ್ಛತೆಯಿಲ್ಲದಿರುವುದು, ಶುದ್ಧ ಗಾಳಿ, ಬೆಳಕು ಬಾರದೇ ಇರುವಂತಹ ಮನೆಗಳಲ್ಲಿ ವಾಸ, ಕೊಳಚೆ ಪ್ರದೇಶ ಹಾಗೂ ಇತರೆ ಕಾರಣಗಳಿಂದ ಧೂಳಿನ ಪ್ರಮಾಣ ಹೆಚ್ಚಾಗಿರುವುದರಿಂದ ಈ ಭಾಗದಲ್ಲಿ ಹೆಚ್ಚಾಗಿ ಕಂಡುಬಂದಿದೆ ಎಂದು ತಿಳಿಸಿದ ಅವರು, ಸ್ವಚ್ಛತೆಗೆ ಮಹತ್ವ ನೀಡಲು ಮಹಾನಗರ ಪಾಲಿಕೆಯ ಕಾರ್ಯನಿರ್ವಾಹಕ ಅಭಿಯಂತರರಿಗೆ



ಹೇಳಿದರು. ಮಹಾನಗರ ಪಾಲಿಕೆಯ ಕಾರ್ಯನಿರ್ವಾಹಕ ಅಭಿಯಂತರರಾದ ಮಲ್ಲನಗೌಡ ಅವರು, ಪಾಲಿಕೆಯ ವತಿಯಿಂದ ಸ್ವಚ್ಛ ಕುಡಿಯುವ ನೀರಿನ ನಿರ್ವಹಣೆ ಹಾಗೂ ತಾಣಗಳ ಬಗ್ಗೆ ವಿವರಿಸಿದರು. ಸಭೆಯಲ್ಲಿ ಕುಡಿಯಲು ಯೋಗ್ಯತೆ ಇಲ್ಲದ ನೀರಿನ ತಾಣಗಳ ಬಗ್ಗೆ ನಗರ ವೈದ್ಯಾಧಿಕಾರಿಗಳು ತಿಳಿಸಿರುವ ಸ್ಥಳಗಳಲ್ಲಿ ಹಮ್ಮಿಕೊಳ್ಳಬೇಕಾದ ಕ್ರಮಗಳ ಬಗ್ಗೆ, ಪುರಸಭೆಯ ಮುಖ್ಯ ಅಧಿಕಾರಿಗಳು ಹಾಗೂ ಪಟ್ಟಣ ಪಂಚಾಯಿತಿ ಮತ್ತು ಮಹಾನಗರ ಪಾಲಿಕೆಯ ಅಭಿಯಂತರರವರೊಂದಿಗೆ ಚರ್ಚಿಸಲಾಯಿತು. ಕುಡಿಯುವ ನೀರಿನ ಕ್ಲೋರಿನೇಷನ್ ಮಾಡುವ ವಿಧಾನದ ಬಗ್ಗೆ ಮಹಾನಗರ ಪಾಲಿಕೆಯ ಸಿಬ್ಬಂದಿಯವರಿಗೆ ವಿಡಿಯೋ ಮೂಲಕ ತರಬೇತಿ ನೀಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲಾ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು, ಮಹಾನಗರ ಪಾಲಿಕೆಯ ಅಭಿಯಂತರರು, ಪುರಸಭೆ-ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳು, ಜಿಲ್ಲಾ ಸರ್ವೇಕ್ಷಣಾ ಘಟಕದ ಮೇಲ್ವಿಚಾರಣಾ ಸಿಬ್ಬಂದಿ, ಕಾಲಾರ ನಿಯಂತ್ರಣ, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಕಚೇರಿ-ಸಿಬ್ಬಂದಿ ಉಪಸ್ಥಿತರಿದ್ದರು.

# 17ರಂದು ಕೊಪ್ಪಳ ಜಿಲ್ಲಾ ಯೋಜನಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2025-26ನೇ ಸಾಲಿನ ಜಿಲ್ಲಾ ಯೋಜನಾ ಸಮಿತಿಯ ಸಭೆಯನ್ನು ಫೆಬ್ರುವರಿ 17 ರಂದು ಮಧ್ಯಾಹ್ನ 3 ಗಂಟೆಗೆ ಕೊಪ್ಪಳ ಜಿಲ್ಲಾ ಪಂಚಾಯತಿಯ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಕೊಪ್ಪಳ ಜಿಲ್ಲಾ



ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಸಭೆಯ ಅಧ್ಯಕ್ಷತೆವಹಿಸುವರು. ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಸಭೆಗೆ ಹಾಜರಾಗುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಚ್.ಎಸ್.ಕೆ ಪಾಲಿಟೆಕ್ನಿಕ್ನಲ್ಲಿ ಅಂತರ್ ಪ್ರೌಢ ಶಾಲಾ ಕ್ರೀಡಾ ಕೂಟ ಆಯೋಜನೆ

ಬಳ್ಳಾರಿ.. ಜಿಲ್ಲೆಯ ಪ್ರತಿಷ್ಠಿತ ವೀರಶೈವ ವಿದ್ಯಾವರ್ಧಕ ಸಂಘದ ಅಧೀನದಲ್ಲಿರುವ ಹಾನಗಲ್ ಶ್ರೀ ಕುಮಾರೇಶ್ವರ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನಿನ್ನೆ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಅಂತರ್ ಪ್ರೌಢ ಶಾಲಾ ಕ್ರೀಡಾ ಕೂಟ ಕ್ರಿಕೆಟ್, ವಾಲಿಬಾಲ್, ಖೋಖೋ, ಫೋ ಬಾಲ್ ಕ್ರೀಡೆಗಳನ್ನು ಏರ್ಪಡಿಸಲಾಗಿತ್ತು. ಪ್ರಾರ್ಥನಾ ಗೀತೆಯೊಂದಿಗೆ ಮತ್ತು ಪ್ರಾಚಾರ್ಯರ ಸ್ವಾಗತ ಭಾಷಣದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು ಮುಖ್ಯ ಅತಿಥಿಯಾಗಿ ಡಾ.ಅರವಿಂದ ಪಾಟೀಲ್ ಕಾರ್ಯದರ್ಶಿಗಳು ವೀವಿಸಂಘ ಬಳ್ಳಾರಿ ಮತ್ತು ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರಾದ ಪಲ್ಲೇದ ಪ್ರಭುಲಿಂಗರವರು ಆಗಮಿಸಿದ್ದರು



ಜಿಲ್ಲೆಯ ವಿವಿಧ ಶಾಲೆಗಳಿಂದ ಬಂದಿದ್ದ ವಿದ್ಯಾರ್ಥಿ ವಿದ್ಯಾರ್ಥಿನಿಯರು ಈ ಕ್ರೀಡೆಗಳಲ್ಲಿ ಭಾಗವಹಿಸಿದ್ದರು.

ಮುಖ್ಯ ಅತಿಥಿಗಳು ಮತ್ತು ಅಧ್ಯಕ್ಷರು ಎಲ್ಲಾ ವಿದ್ಯಾರ್ಥಿ ವಿದ್ಯಾರ್ಥಿನೀಯರನ್ನು ಉದ್ದೇಶಿಸಿ ಮಾತನಾಡುತ್ತಾ ಕ್ರೀಡೆ ಮಾನಸಿಕ ಮತ್ತು ದೈಹಿಕ ಸಮತೋಲನ ಕಾಪಾಡಿಕೊಳ್ಳಬಹುದು ಮತ್ತು ಎಲ್ಲರು ಕ್ರೀಡಾ ಮನೋಭಾವವನ್ನು ಬೆಳೆಸಿಕೊಳ್ಳಿ ಎಂದು ಹೇಳಿದರು ಈ ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಶ್ರೀಶೈಲಗೌಡ, ಶ್ರೀಮತಿ ಗೌಸೀಯಾ ಬೇಗಂ, ಎಲ್ಲಾ ವಿಭಾಗದ ಮುಖ್ಯಸ್ಥರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಈ ಕಾರ್ಯಕ್ರಮವನ್ನು ಕಾಲೇಜಿನ ದೈಹಿಕ ಶಿಕ್ಷಣ ವಿಭಾಗದಿಂದ ಆಯೋಜಿಸಲಾಗಿತ್ತು ಭಾಷನ ವನ್ನು ನಿರೂಪಣೆಯನ್ನು ಶ್ರೀಮತಿ ಪಲ್ಲವಿ ಹಿರೇಮಠ, ಮತ್ತು ವಂದನಾರ್ಪಣೆಯನ್ನು ಕುಮಾರಿ ಹಿಮಬಿಂದು ನಿರ್ವಹಿಸಿದರು,

# ಗ್ರಾಮೀಣ ಜನರಿಗೆ ದಂತ ಆರೋಗ್ಯದ ಅರಿವು ಅಗತ್ಯ



• ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ:

ಮನುಷ್ಯನ ಆರೋಗ್ಯದಲ್ಲಿ ದಂತ ಆರೋಗ್ಯವೂ ಮಹತ್ವದ್ದಾಗಿದೆ. ಈ ದಿಸೆಯಲ್ಲಿ ಬಾಯಿ ಮತ್ತು ಹಲ್ಲಿನ ಆರೋಗ್ಯದ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಅವಶ್ಯವಾಗಿದೆ. ವಿಶೇಷವಾಗಿ ಗ್ರಾಮೀಣ ಜನರಲ್ಲಿ ಈ ಆರೋಗ್ಯದ ಕುರಿತು ತಿಳಿವಳಿಕೆ ಮೂಡಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾ ಸರ್ಜನ್ ಡಾ.ಮಹೇಶ ಕೋಣಿ ಅಭಿಪ್ರಾಯಪಟ್ಟರು.

ಬಿ.ವಿ.ವಿ ಸಂಘದ ಪಿ.ಎಮ್.ಎನ್.ಎಮ್ ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ 'ಬಾಯಿ ಮತ್ತು ಮುಖದ ಶಸ್ತ್ರಚಿಕಿತ್ಸಕರ ದಿನ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಬಾಯಿ ಆರೋಗ್ಯದ ಅಗತ್ಯವನ್ನರಿತು ಭಾರತ ಸರ್ಕಾರ ರಾಷ್ಟ್ರೀಯ ಬಾಯಿ ಆರೋಗ್ಯ ಜಾಗೃತಿ ಕಾರ್ಯಕ್ರಮವನ್ನು ಆರಂಭಿಸಿದೆ.

ಈ ದಿಸೆಯಲ್ಲಿ ದಂತ ಕಾಲೇಜಿನಲ್ಲಿ ಆಶಾ ಕಾರ್ಯಕರ್ತೆಯರಿಗಾಗಿ ಬಾಯಿ ಮತ್ತು ಮುಖದ ಶಸ್ತ್ರಚಿಕಿತ್ಸೆ ಬಗ್ಗೆ ಅರಿವು ಮೂಡಿಸುವ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿದ್ದು ಶ್ಲಾಘನೀಯ ಪ್ರಯತ್ನ. ಆಶಾ ಕಾರ್ಯಕರ್ತೆಯರ ಮೂಲಕ ದಂತ ಆರೋಗ್ಯದ ಅರಿವು ಸಾರ್ವಜನಿಕರಿಗೆ ತಲುಪಲಿ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ.ರವಿರಾಜ ದೇಸಾಯಿ, ದಂತ ಚಿಕಿತ್ಸೆಗಾಗಿ ಸರ್ಕಾರ 'ದಂತಭಾಗ್ಯ' ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯಡಿ ಪಿ.ಎಮ್.ಎನ್.ಎಮ್ ದಂತ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡುವ ಸೌಲಭ್ಯವಿದೆ. ಈ ಸೌಲಭ್ಯದ ಕುರಿತು ಆಶಾ ಕಾರ್ಯಕರ್ತೆಯರು ಸಾರ್ವಜನಿಕರಿಗೆ ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿನ ಜನರಿಗೆ ಅರಿವು ಮೂಡಿಸಬೇಕು. ಸಾರ್ವಜನಿಕರ ಆರೋಗ್ಯಕ್ಕಾಗಿ ಶ್ರಮಿಸುತ್ತಿರುವ

ಆಶಾ ಕಾರ್ಯಕರ್ತೆಯರು ಹಳ್ಳಿಗಳಲ್ಲಿ ಗುರುಸಮಾನರಾಗಿರುವರು ಎಂದರು.

ಪ್ರಿಯಾ ಮತ್ತು ಪ್ರಾರ್ಥನಾ ಅವರ ಪ್ರಾರ್ಥನೆಯೊಂದಿಗೆ ಆರಂಭಗೊಂಡ ಕಾರ್ಯಕ್ರಮದಲ್ಲಿ ಬಾಯಿ ಮತ್ತು ಮುಖದ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥೆ ಡಾ.ಸುಮಾ ಸರಾಫ ಸ್ವಾಗತಿಸಿದರು.


ಡಾ.ಗಿರೀಶ ಚೌರ ವಿಭಾಗದ ಚಟುವಟಿಕೆಗಳನ್ನು ವಿವರಿಸಿ ಕಿರುಚಿತ್ರಗಳನ್ನು ಪ್ರದರ್ಶಿಸಿದರು. ಡಾ.ಸೌಮ್ಯ ದೇಸಾಯಿ ಪರಿಚಯಿಸಿದರು. ಡಾ.ಶ್ರಾವ್ಯ ದೇವರಕೊಂಡ ವಂದಿಸಿದರು. ಡಾ.ಸೌಮ್ಯ ಸೂಳಿಭಾವಿ ಮತ್ತು ಡಾ.ಪಾರ್ವತಿ ನಿರೂಪಿಸಿದರು.

ಬಾಯಿ ಮತ್ತು ಮುಖದ ಶಸ್ತ್ರಚಿಕಿತ್ಸಕರ ದಿನದ ಅಂಗವಾಗಿ ಆಯೋಜಿಸಿದ್ದ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ದಂತ ವೈದ್ಯಾಧಿಕಾರಿಗಳಾದ ಡಾ.ಜಯಂತಕುಮಾರ,

ಡಾ.ವಾಣಿ ಹುಣಸಿಕಟ್ಟಿ, ಆಶಾ ಕಾರ್ಯಕರ್ತೆಯರು, ಡಾ.ಸತ್ಯಜೀತ ದಂಡಗಿ, ಡಾ.ಭೀಮಪ್ಪ, ಡಾ.ಆಶಾ ಬಡದೇಸಾಯಿ, ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಮಹಾವಿದ್ಯಾಲಯದ ಎಲ್ಲ ವಿಭಾಗಗಳ ಮುಖ್ಯಸ್ಥರು, ವೈದ್ಯ ಸಿಬ್ಬಂದಿ, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ನಿರ್ಮಲಾ ಸೀತಾರಾಮನ್ ಜೊತೆ ಬಸೀರಾ ಸಂವಾದ

• ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ:



ನವನಗರದ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿದ್ಯಾರ್ಥಿನಿ ಬಸೀರಾ ಬಾಂಗಿ ದೆಹಲಿಯಲ್ಲಿ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಸಂವಾದದಲ್ಲಿ ಭಾಗಿಯಾಗಿ ಇಡೀ ರಾಷ್ಟ್ರದ ಗಮನ ಸೆಳೆದಿದ್ದಾರೆ.

ಫೆಬ್ರವರಿ 1 ನವದೆಹಲಿಯಲ್ಲಿ ಕೇಂದ್ರ ವಿತ್ತ ಸಚಿವರೊಂದಿಗೆ ಸಂವಾದದಲ್ಲಿ ಭಾಗವಹಿಸಿದ್ದ ಬಸೀರಾ ಬಾಂಗಿ ಅವರನ್ನು ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ್ ಸನ್ಮಾನಿಸಿ ವಿದ್ಯಾರ್ಥಿನಿಯ ಈ ಸಾಧನೆ ವಿಶ್ವವಿದ್ಯಾಲಯಕ್ಕೆ ಕೀರ್ತಿ ತಂದಿದೆ ಎಂದು ಹೇಳಿ ಅಭಿನಂದಿಸಿದರು.

ಧಾರವಾಡ ಜಿಲ್ಲೆಯ ಅಮ್ಮಿನಭಾವಿಯ ಬಸೀರಾ ಬಾಂಗಿ ಪ್ರಸ್ತುತ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಎಮ್.ಎಸ್ಸಿ ತರಕಾರಿ ವಿಜ್ಞಾನದಲ್ಲಿ ವ್ಯಾಸಂಗ ಮಾಡುತ್ತಿರುವರು. ಕಾಲೇಜು ವ್ಯಾಸಂಗದ ಸಂದರ್ಭ ಸ್ವಾಮಿ ವಿವೇಕಾನಂದ ಯೂಥ್ ಮೂವ್‌ಮೆಂಟ್‌ನಿಂದ ಶಿಷ್ಯವೇತನ ಪಡೆದಿದ್ದ ವಿದ್ಯಾರ್ಥಿನಿ ಈಗ ಆ ಸಂಸ್ಥೆಯ ಮೂಲಕ ವಿತ್ತ ಸಚಿವರ ಬಜೆಟ್ ಮಂಡನೆ ಸಂದರ್ಭ ಪಾರ್ಲಿಮೆಂಟ್‌ನಲ್ಲಿ ಉಪಸ್ಥಿತರಿದ್ದು ನಂತರದ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ದೇಶದಿಂದ ಒಟ್ಟು 30 ವಿದ್ಯಾರ್ಥಿಗಳು ಆಯ್ಕೆಯಾಗಿದ್ದು ಕರ್ನಾಟಕದಿಂದ ಆಯ್ಕೆಯಾದ ಇಬ್ಬರು ವಿದ್ಯಾರ್ಥಿಗಳಲ್ಲಿ ಬಸೀರಾ ಬಾಂಗಿ ಒಬ್ಬರಾಗಿದ್ದರು.

ವಿದ್ಯಾರ್ಥಿನಿಯನ್ನು ಸನ್ಮಾನಿಸುವ ಸಂದರ್ಭದಲ್ಲಿ ಉಪಸ್ಥಿತರಿದ್ದ ಬಿ.ವಿ.ವಿ ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ) ವಿದ್ಯಾರ್ಥಿಯ ಪ್ರತಿಭೆ ಗುರುತಿಸಿ ವಿತ್ತ ಸಚಿವರೊಂದಿಗೆ ಸಂವಾದದಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಿದ್ದು ಮೆಚ್ಚುವಂತಹ ಸಂಗತಿ. ದೇಶದ ಆರ್ಥಿಕ ಪ್ರಗತಿಗಾಗಿ ಯುವಜನತೆಯ ವಿಚಾರಗಳನ್ನು ಇಂಥ ಕಾರ್ಯಕ್ರಮಗಳ ಮೂಲಕ ಕೇಂದ್ರ ಸರ್ಕಾರ ಬಳಸಿಕೊಳ್ಳುತ್ತಿರುವುದು ಶ್ಲಾಘನೀಯ ನಡೆಯಾಗಿದೆ ಎಂದರು.

# ಎಮ್ಮಿಗನೂರು ಗ್ರಾ.ಪಂ.ನಲ್ಲಿ ಆರ್ಥಿಕ ಸಾಕ್ಷರತಾ ಸಪ್ತಾಹ

• ಮಲ್ಲಮ್ಮ ನುಡಿ ವಾರ್ತೆ
ಬಳ್ಳಾರಿ:



ಎಮ್ಮಿಗನೂರು ಗ್ರಾಮ ಪಂಚಾಯತ್ ಕಚೇರಿಯಲ್ಲಿ ಮಹಿಳಾ ಸ್ವಸಹಾಯ ಗುಂಪು ಸದಸ್ಯರಿಗೆ 2026 ರ ಆರ್ಥಿಕ ಸಾಕ್ಷರತಾ ಸಪ್ತಾಹ ಶಿಬಿರ ನಡೆಯಿತು. 103 ಸ್ವಸಹಾಯ ಗುಂಪು ಸದಸ್ಯರು ಆರ್ಥಿಕ ಸಾಕ್ಷರತಾ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. 2026 ರ ಹಣಕಾಸು ಸಾಕ್ಷರತಾ ಸಪ್ತಾಹದ ಮುಖ್ಯ ವಿಷಯ ಏಜಅ (ನಿಮ್ಮ ಗ್ರಾಹಕರನ್ನು ತಿಳಿದುಕೊಳ್ಳಿ).

ಶ್ರೀ ಮೋನಿ ರಾಜ ಬ್ರಹ್ಮ ವ್ಯವಸ್ಥಾಪಕ ಈಖಆಆ ಖಃಖ ಬೆಂಗಳೂರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದರು.

ಶ್ರೀ. ಗಿರೀಶ್ ವಿ ಕುಲಕರ್ಣಿ ಲೀಡ್ ಬ್ಯಾಂಕ್ ಮ್ಯಾನೇಜರ್, ಕೆನರಾ ಬ್ಯಾಂಕ್ ಬಳ್ಳಾರಿ, ಶ್ರೀಮತಿ ವೈ ರೇಣುಕಾ ಜಿ.ಪಿ.ಎಲ್.ಎಫ್ ಅಧ್ಯಕ್ಷರು, ಶ್ರೀ ಸಂತೋಷ್ ತೇಲಿ ಕೆನರಾ ಬ್ಯಾಂಕ್ ಎಮ್ಮಿಗನೂರು ಶಾಖೆ ವ್ಯವಸ್ಥಾಪಕರು, ಶ್ರೀ ಚಂದ್ರಶೇಖರ್ ವ್ಯವಸ್ಥಾಪಕ ಕೆ.ಜಿ.ಬಿ, ಸುನಿಲ್ ಕುಮಾರ್ ಬಿ.ಡಿ.ಸಿ.ಸಿ ಬ್ಯಾಂಕ್ ಲಿಮಿಟೆಡ್ ವ್ಯವಸ್ಥಾಪಕರು, ಮಲ್ಲಿಕಾರ್ಜುನ್ ವ್ಯವಸ್ಥಾಪಕರು, ಕೆನರಾ ಬ್ಯಾಂಕ್ ಆರ್.ಓ.–ಆಪರೇಷನ್ಸ್, ರಮೇಶ ಬಿ.ಎಲ್.ಬಿ.ಓ, ಪವನ್ ಕುಮಾರ್ ಸಿ.ಎಫ್.ಎಲ್ ಮದರ್ ರಾನ್ ಪ್ರಾಧಿಕಾರ, ರಂಗರಾಜ್ ಸಿ.ಎಫ್.ಎಲ್ ಸಂಯೋಜಕರು ಎಮ್ಮಿಗನೂರು ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿದ್ದರು.

KYC, Re-KYC, CKYC, ಡಿಜಿಟಲ್ /ಸೈಬರ್ ವಂಚನೆಗಳು, PMJJBY PMSBY ಮತ್ತು APY ಬಗ್ಗೆ ಚರ್ಚಿಸಲಾಯಿತು ಮತ್ತು ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದ ಸಮಯದಲ್ಲಿ... ಸಾರ್ವಜನಿಕ ಮಾಹಿತಿಗಾಗಿ ವೀಡಿಯೊಗಳನ್ನು ಪ್ರದರ್ಶಿಸಲಾಯಿತು.

ಮೋನಿ ರಾಜ ಬ್ರಹ್ಮ ಸರ್ ಅವರು ರಸಪ್ರಶ್ನೆಯನ್ನು ನಡೆಸಿಕೊಟ್ಟರು ಮತ್ತು 8 ಅದೃಷ್ಟಶಾಲಿ ವಿಜೇತರಿಗೆ ತ್ವರಿತ ಬಹುಮಾನಗಳನ್ನು ಸಹ ವಿತರಿಸಲಾಯಿತು.

# ಮತದಾರರ ಮ್ಯಾಪಿಂಗ್‌ನಲ್ಲಿ ವಿಶೇಷ ಗಮನಹರಿಸಿ ಸ್ವೀಪ ನೋಡಲ್ ಅಧಿಕಾರಿ ವಸ್ತ್ರದ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ:



ಮತದಾರರ ಪಟ್ಟಿಯ ಪರಿಶುದ್ಧತೆ ಚುನಾವಣೆಯ ಪಾರದರ್ಶಕತೆಗೆ ಮೂಲಸ್ತಂಭವಾಗಿದ್ದು, ಮತದಾರರ ಮ್ಯಾಪಿಂಗ್ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ಪ್ರತಿಯೊಬ್ಬ ಅರ್ಹ ನಾಗರಿಕನ ಹೆಸರು ಮತದಾರರ ಪಟ್ಟಿಯಲ್ಲಿ ಇರುವ ಬಗ್ಗೆ ಖಚಿತಪಡಿಸಬೇಕು ಎಂದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಸ್ವೀಪ್ ಹಾಗೂ ಬಿಎಲ್‌ಓಗಳೊಂದಿಗೆ ಎಸ್.ಐ.ಆರ್ ಮ್ಯಾಪಿಂಗ್ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 2002 ಹಾಗೂ 2025 ಮತದಾರರ ಮ್ಯಾಪಿಂಗ್ ಕಾರ್ಯ ಮುತುವರ್ಜಿವಹಿಸಿ ಮಾಡಬೇಕಿದೆ. ಶೇ.50ಕ್ಕಿಂತ ಕಡಿಮೆ ಇರುವ ಮತಗಟ್ಟೆಗಳ ಪ್ರಗತಿಯ ಬಗ್ಗೆ ವಿಶೇಷ ಗಮನಹರಿಸಿ ಪ್ರಗತಿ ಸಾಧಿಸಬೇಕು. ಎಲ್ಲ ಮತದಾರರು ತಮ್ಮ ಹೆಸರುಗಳು ಮ್ಯಾಪಿಂಗ್ ಆಗಿರುವ ಬಗ್ಗೆ ಪರಿಶೀಲಿಸಿಕೊಳ್ಳಬೇಕು ಎಂದರು.

ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಉಪ ಚುನಾವಣೆ ಸಮೀಪಿಸುತ್ತಿದ್ದು, ಮತದಾರರ ಮ್ಯಾಪಿಂಗ್ ಕಾರ್ಯದ ಬಗ್ಗೆ ಉಪ ವಿಭಾಗಾಧಿಕಾರಿಗಳು ಹಾಗೂ ತಹಶೀಲ್ದಾರರು ಹೆಚ್ಚಿನ ಗಮನಹರಿಸಲು ಸೂಚಿಸಿದ ಅವರು, ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡುವ ಮೂಲಕ ಮತಗಟ್ಟೆವಾರು ಮ್ಯಾಪಿಂಗ್, ಹೊಸ ಮತದಾರರ ಸೇರ್ಪಡೆ ಹಾಗೂ ಹೆಸರು ತಿದ್ದುಪಡಿ, ತೆಗೆದು ಹಾಕುವ ಅರ್ಜಿ ವಿಲೇವಾರಿಗಳ ಬಗ್ಗೆ ವಿವರವಾದ ಚರ್ಚೆ ನಡೆಸಿದರು.

ಉಪ ಚುನಾವಣೆ ಹಿನ್ನಲೆಯಲ್ಲಿ ಸ್ವೀಪ್ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಕ್ರಿಯಾ ಯೋಜನೆ ರೂಪಿಸಬೇಕು. ಕ್ರಿಯಾ ಯೋಜನೆ ಸಿದ್ದಪಡಿಸಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆ ಭೇಟಿ ನೀಡುವ ಸಂದರ್ಭಗಳಲ್ಲಿ ಇವಿಎಂ ಯಂತ್ರಗಳ ಕಾರ್ಯ ಚಟುವಟಿಕೆಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕೆಂದು ತಿಳಿಸಿದರು.

ನಂತರ ನವಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ನಡೆದ ಬಿಎಲ್‌ಓಗಳ ಸಭೆಯಲ್ಲಿ ಮತಗಟ್ಟೆ ಅಧಿಕಾರಿಗಳು ತಮ್ಮ ಮತಗಟ್ಟೆಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳು ಇರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ರ‍್ಯಾಂಪ್ ವ್ಯವಸ್ಥೆ, ಕೊಠಡಿ ಸುಸ್ಥಿತಿ ಇದ್ದ ಬಗ್ಗೆ, ವಿದ್ಯುತ್ ಸಂಪರ್ಕ ವ್ಯವಸ್ಥೆ ಸರಿಯಾಗಿ ಇರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಮತದಾರರ ಮ್ಯಾಪಿಂಗ್ ಕಾರ್ಯದಲ್ಲಿ ಶೇ.100 ರಷ್ಟು ಕೆಲಸವಾಗಬೇಕು. ಈ ನಿಟ್ಟಿನಲ್ಲಿ ಮ್ಯಾಪಿಂಗ್ ಕಾರ್ಯವನ್ನು ಹಬ್ಬದ ಆಚರಣೆ ರೀತಿಯಲ್ಲಿ ಕಾರ್ಯ ನಡೆಸಬೇಕಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ ಸ್ವಾಮಿ, ಜಿ.ಪಂ ಸಹಾಯಕ ನಿರ್ದೇಶಕ ಎಸ್.ಎಂ.ಕಾಂಬಳೆ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ಚುನಾವಣಾ ವಿಭಾಗದ ಮಹೇಶ ಪಾಂಡವ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಾವು, ನಾಯಿ ಕಡಿತ ಪ್ರಕರಣ ನಿಯಂತ್ರಣಕ್ಕೆ ಕ್ರಮವಹಿಸಿ: ಜಿಲ್ಲಾಧಿಕಾರಿ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ:



ಜಿಲ್ಲೆಯಲ್ಲಿ ಹಾವು ಮತ್ತು ನಾಯಿ ಕಡಿತ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಅದನ್ನು ತಡೆಗಟ್ಟಲು ಹಾಗೂ ನಿಯಂತ್ರಿಸಲು ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಾವು, ನಾಯಿ ಕಡಿತದಂತಹ ತುರ್ತು ಪರಿಸ್ಥಿತಿಗಳಲ್ಲಿ ಪ್ರಾಥಮಿಕ ಚಿಕಿತ್ಸೆ, ಸಮಯಕ್ಕೆ ಸರಿಯಾಗಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಸೂಕ್ತ ಚಿಕಿತ್ಸೆ ಒದಗಿಸಲು ಅಗತ್ಯ ಕ್ರಮಕೈಗೊಳ್ಳಬೇಕು. ಹಾವು ಕಡಿದಾಗ ತಕ್ಷಣ ಚಿಕಿತ್ಸೆ ಪಡೆಯದಿದ್ದರೆ ಜೀವಾಪಾಯ ಸಂಭವಿಸಬಹುದಾದ ಸಾಧ್ಯತೆ ಹೆಚ್ಚಾಗಿರುತ್ತದೆ. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವಾಗಬೇಕೆಂದು ತಿಳಿಸಿದರು.

ಜಿಲ್ಲೆಯಲ್ಲಿ ಕಳೆದ 2024 ರಲ್ಲಿ 371 ಹಾವು ಕಡಿತದ ಪ್ರಕರಣಗಳಲ್ಲಿ 6 ಮೃತಪಟ್ಟಿದ್ದರೆ, 2025ರಲ್ಲಿ 586 ಪ್ರಕರಣಗಳಲ್ಲಿ 4, 2026ನೇ ಸಾಲಿನ ಜನವರಿ ಮಾಹೆಯಲ್ಲಿ 37 ಪ್ರಕರಣಗಳು ಕಂಡುಬಂದಿದ್ದು, ಅದರಲ್ಲಿ ಜಮಖಂಡಿ ತಾಲೂಕಿನ ಕುಂಬಾರಹಳ್ಳ ಗ್ರಾಮದ 40 ವರ್ಷದ ವ್ಯಕ್ತಿ ಮೃತಪಟ್ಟ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು ಪ್ರತಿ ತಾಲೂಕಾ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಅಗತ್ಯ ಪ್ರಮಾಣದ ಆಂಟಿ–ವನೆಲ್ ಇಂಜಿಕ್ಷನ್‌ಗಳ ಲಭ್ಯವಿರುವಂತೆ ನೋಡಿಕೊಳ್ಳಲು ಜಿಲ್ಲಾ ಆರೋಗ್ಯ ಮತ್ತು ಕಲ್ಯಾಣಾಧಿಕಾರಿ ಮಂಜುನಾಥ ಡಿ.ಎನ್ ಅವರಿಗೆ ಸೂಚಿಸಿದರು.

ನಾಯಿ ಕಡಿತ ಪ್ರಕರಣಗಳ ಕುರಿತು ಚರ್ಚಿಸಿದ ಜಿಲ್ಲಾಧಿಕಾರಿಗಳು, ಇತ್ತೀಚೆಗೆ ನಾಯಿ ಕಡಿತ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿದ್ದು, ಬೀದಿ ನಾಯಿಗಳ ಬಗ್ಗೆ ಸಾರ್ವಜನಿಕರು ಹಾಗೂ ಮಕ್ಕಳು ಜಾಗೃತಿಯಿಂದ ಇರಲು ಸೂಕ್ತ ತಿಳುವಳಿಕೆ ನೀಡುವ ಅಗತ್ಯವಿದೆ. ನಾಯಿ ಕಡಿತ ಪ್ರಕರಣಗಳಲ್ಲಿ ಈಗಾಗಲೇ ಇಬ್ಬರು ಮೃತಪಟ್ಟಿರುವ ಬಗ್ಗೆ ವರದಿಯಾಗಿದೆ. ಪಶುಪಾಲನಾ ಇಲಾಖೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಸಹಕಾರದಿಂದ ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮಕೈಗೊಳ್ಳುವಂತೆ ಸೂಚಿಸಿದರು. ಗ್ರಾಮ ಪಂಚಾಯತ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮಗಳು ಹಾಗೂ ಶಾಲೆಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತಿಳಿಸಿದರು.

ಸಮಯಕ್ಕೆ ಸರಿಯಾಗಿ ಚಿಕಿತ್ಸೆ ದೊರೆಯದೇ ಮೃತಪಟ್ಟವರ ಬಗ್ಗೆ ಮಾಹಿತಿಯನ್ನು ಜಿಲ್ಲಾಧಿಕಾರಿಗಳು ಪಡೆದುಕೊಂಡರು. ವಿಷಕಾರಿ ಹಾವು ಕಚ್ಚಿದಾಗ ಹೆದರದೇ ಸಮಾಧಾನವಾಗಿದ್ದು, ರಕ್ತಪರಿಚಲನೆ ತಡೆಗಟ್ಟುವಂತಹ ಕೈಗಡಿಯಾರ, ಬಳೆ ಉಂಗುರ ಮುಂತಾದವುಗಳನ್ನು ತೆಗೆಯಬೇಕು. ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಬೇಕೆ ಹೊರತು. ಕಚ್ಚಿದ ಭಾಗದಲ್ಲಿ ಬಟ್ಟೆ ಕಟ್ಟುವದಾಗಲಿ, ಗಾಯವನ್ನು ಕುಯ್ಯುವುದು ಮಾಡಬಾರದು. ತಕ್ಷಣ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯುವ ಕೆಲಸವಾಗಬೇಕು. ಪ್ರಾಥಮಿಕ ಹಂತದ ವಿಧಾನಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ತಿಳಿಸಿದರು.

ಆಸ್ಪತ್ರೆಗಳಲ್ಲಿ ಔಷಧಿಗಳ ಲಭ್ಯತೆ, ಸಿಬ್ಬಂದಿಗಳ ಕೊರತೆ ಹಾಗೂ ಸೂಕ್ತ ಚಿಕಿತ್ಸೆಗಳ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಚಿಕಿತ್ಸೆಗೆ ಬಂದಂತಹ ರೋಗಿಗಳ ಜೊತೆ ಸೌಜನ್ಯದಿಂದ ವರ್ತನೆ ಮಾಡಿ ಸೂಕ್ತ ಚಿಕಿತ್ಸೆ ದೊರೆಯುವಂತೆ ಕ್ರಮಕೈಗೊಳ್ಳುವ ಕೆಲಸವಾಗಬೇಕು ಎಂದು ಸೂಚನೆ ನೀಡಿದರು. ಸಂಗ್ರಹವಾಗುತ್ತಿರುವ ನೀರಿನ ಪರೀಕ್ಷೆಯ ಮಾಹಿತಿಯನ್ನು ಸಹ ಪಡೆದುಕೊಂಡರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ.ಎನ್. ಜಿಲ್ಲಾ ಶಸ್ತ್ರಚಿಕಿತ್ಸಕ ಮಹೇಶ ಕೋಣಿ, ಜಿಲ್ಲಾ ಸಮೀಕ್ಷಣಾಧಿಕಾರಿ ಕರೆಣ್ಣವರ ಸೇರಿದಂತೆ ಆರೋಗ್ಯ ಇಲಾಖೆಯ ಇತರೆ ಅಧಿಕಾರಿಗಳಾದ ಡಾ.ಶಿವನಗೌಡ ಪಾಟೀಲ, ಡಾ.ಸುವರ್ಣ ಕುಲಕರ್ಣಿ, ಡಾ.ಕುಸುಮಾ ಮಾಗಿ ಹಾಗೂ ಆಯಾ ತಾಲೂಕಿನ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

> **ಸ್ನೇಕ್ ಕ್ಯಾಚರ್ ಮಾಹಿತಿ**
> **ಕಚ್ಚಿದ ಹಾವುಗಳನ್ನು ಸಾಯಿಸದೇ ಅವುಗಳನ್ನು ರಕ್ಷಿಸಲು ಜಿಲ್ಲೆಯ ಸ್ನೇಕ ಕ್ಯಾಚರಗಳಾದ ರಾಜಮಹಮ್ಮದ (9663117856), ತೊಸಿಫ್ ಮುಲ್ಲಾ(9632120597) ಇವರನ್ನು ಸಂಪರ್ಕಿಸಬಹುದಾಗಿದೆ. ಅಲ್ಲದೇ ತುರ್ತು ಆರೋಗ್ಯ ಸೇವೆಗಾಗಿ 112 ಮತ್ತು 108ಗೆ ಕರೆ ಮಾಡಬಹುದಾಗಿದೆ.**

# ಸಾಣೆಹಳ್ಳಿ ಕಲಾಸಂಘದಿಂದ ನಾಟಕೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

ನಗರದ ಸಾಮಾಜಿಕ–ಧಾರ್ಮಿಕ–ಸಾಂಸ್ಕೃತಿಕ ಸೇವಾ ಸಂಸ್ಥೆ, ಗೆಳೆಯರ ಬಳಗ ಹಾಗೂ ಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮ ಟ್ರಸ್ಟ ವಿದ್ಯಾಗಿರಿ ಇವರ ಆಶ್ರಯದಲ್ಲಿ ಫೆ.15, 16 ಹಾಗೂ 17 ರಂದು ನಾಟಕೋತ್ಸವ ಏರ್ಪಡಿಸಲಾಗಿದೆ.

ಸಾಣೆಹಳ್ಳಿಯ ಶಿವಕುಮಾರ ಕಲಾಸಂಘ ಇವರ ಶಿವಸಂಚಾರ 2025ರ 3 ನಾಟಕಗಳು ವಿದ್ಯಾಗಿರಿಯ ಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮದ ಬಯಲುರಂಗ ಮಂಟಪದಲ್ಲಿ ಪ್ರದರ್ಶನಗೊಳ್ಳಲಿವೆ. 15 ರಂದು ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ರಚಿಸಿದ ಶಿವಯೋಗಿ ಸಿದ್ಧರಾಮೇಶ್ವರ ನಾಟಕ, ಫೆ.16 ರಂದು ಕೃಷ್ಣಮೂರ್ತಿ ರಚನೆಯ ಕಳ್ಳರ ಸಂತೆ ನಾಟಕ ಹಾಗೂ ಫೆ. 17ರಂದು ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ರಚನೆಯ ಜಂಗಮದೆಡೆಗೆ ನಾಟಕಗಳು ದಿನಾಲು ಸಾಯಂಕಾಲ 7 ಗಂಟೆಗೆ ಪ್ರದರ್ಶನಗೊಳ್ಳಲಿವೆ.

ಮಾತೆಯರು ಹಾಗೂ ಮಹಿಳೆಯರಿಗೆ ಪ್ರತ್ಯೇಕ ಆಸನದ ವ್ಯವಸ್ಥೆ ಮಾಡಿದ್ದು, ಪ್ರವೇಶ ಉಚಿತವಾಗಿದೆ ಎಂದು ಗೆಳೆಯರ ಬಳಗದ ಅಧ್ಯಕ್ಷ ಮಹಾಬಳೇಶ್ವರ ಗುಡಗುಂಟಿ ಹಾಗೂ ಸಾಯಿಮಂದಿರದ ಅಧ್ಯಕ್ಷ ಜಿ.ಎನ್. ಪಾಟೀಲ, ಕಾರ್ಯಾಧ್ಯಕ್ಷ ಶ್ರೀಶೈಲ ಕರಿಶಂಕರಿ ತಿಳಿಸಿದ್ದಾರೆ.

## ಪಿಎಂ ಶ್ರಮಯೋಗಿ ಮಾನ್ ಧನ್ ಯೋಜನೆ

# ನೋಂದಣಿಗೆ ಜಿಲ್ಲೆಯಾದ್ಯಂತ ವಿಶೇಷ ಅಭಿಯಾನ

• ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ:




ಅಸಂಘಟಿತ ವಲಯದ ಕಾರ್ಮಿಕರಿಗೆ ವೃದ್ಯಾಪದ ವೇಳೆಯಲ್ಲಿ ಸಾಮಾಜಿಕ ಭದ್ರತೆ ಕಲ್ಪಿಸಲು ಪ್ರಧಾನಮಂತ್ರಿ ಶ್ರಮಯೋಗಿ ಮಾನ್‌ಧನ್ ಯೋಜನೆಯಡಿ ಪಿಂಚಣಿ ಸೌಲಭ್ಯ ಒದಗಿಸಲು ಜಿಲ್ಲೆಯಲ್ಲಿ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಪ್ರಧಾನಮಂತ್ರಿ ಶ್ರಮಯೋಗಿ ಮಾನ್–ಧನ್ ಯೋಜನೆ ಅನುಷ್ಠಾನ ಕುರಿತು ಜರುಗಿದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೋಂದಣಿಗೆ ಮಾರ್ಚ 15ರವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, 18 ರಿಂದ 40 ವರ್ಷದೊಳಗಿನ ಹಾಗೂ ಮಾಸಿಕ ಆದಾಯ 15 ಸಾವಿರ ರೂ. ಅಥವಾ ಅದಕ್ಕಿಂತ ಕಡಿಮೆ ಇರುವ ಅಸಂಘಟಿತ ವಲಯದ ಕಾರ್ಮಿಕರು ಈ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ 55 ರೂ.ಗಳಿಂದ 200ರೂ. ಗಳವರೆಗೆ ವಂತಿಗೆ ಪಾವತಿಸಬೇಕಾಗುತ್ತದೆ. ಕೇಂದ್ರ ಸರಕಾರವು ಚಂದಾದಾರರು ಪಾವತಿಸುವ ವಂತಿಗೆಗೆ ಸಮಾನಾಂತರವಾಗಿ ವಂತಿಕೆಯನ್ನು ಪಿಂಚಣಿ ಖಾತೆಗೆ ಪಾವತಿಸುತ್ತದೆ. ಅರ್ಹ ಅಸಂಘಟಿತ ಕಾರ್ಮಿಕರು ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ (ಸಿಎಸ್‌ಸಿ) ನೋಂದಣಿ ಮಾಡಿಕೊಳ್ಳಬಹುದಾಗಿದೆ. ಫಲಾನುಭವಿಗಳು 60 ವರ್ಷ ಪೂರ್ಣಗೊಂಡ ನಂತರ ತಿಂಗಳಿಗೆ 3 ಸಾವಿರ ರೂ.ಗಳ ಪಿಂಚಣಿ ಪಡೆಯಬಹುದಾಗಿದೆ. ಪಿಂಚಣಿ ಆರಂಭಗೊಂಡ ನಂತರ ಚಂದಾದಾರು ಮೃತಪಟ್ಟಲ್ಲಿ ಅವರ ಪತ್ನಿ, ಪತಿ ಮಾತ್ರ ಶೇ.50 ರಷ್ಟು ಪಿಂಚಣಿ ಪಡೆಯಬಹುದಾಗಿದೆ ಎಂದು ಸಂಗಪ್ಪ ಹೇಳಿದರು.


ಈ ಯೋಜನೆಯಡಿ ಗೃಹ ಆಧಾರಿತ ಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳು, ಬಿಸುಊಟ ಸಿದ್ದಪಡಿಸುವವರು, ಹಮಾಲಿಗಳು, ಇಟ್ಟಿಗೆಭಟ್ಟಿ ಕಾರ್ಮಿಕರು, ಚಮ್ಮಾರರು, ಚಿಂದಿ ಆಯುವವರು, ಮನೆ ಕೆಲಸದವರು, ಅಗಸರು, ರಿಕ್ಷಾ ಚಾಲಕರು, ಭೂರಹಿತ ಕಾರ್ಮಿಕರು, ಸ್ವಯಂ ಉದ್ಯೋಗಿಗಳು, ಕೃಷಿ ಮತ್ತು ಕಟ್ಟಡ ಕಾರ್ಮಿಕರು, ಬೀಡಿ ಕಾರ್ಮಿಕರು, ಕೈಮಗ್ಗ, ಚರ್ಮೋದ್ಯಮದ ಕಾರ್ಮಿಕರು, ಧ್ವನಿ ಮತ್ತು ದೃಶ್ಯ ಕಾರ್ಮಿಕರು ತಮ್ಮ ಆಧಾರ ಕಾರ್ಡ, ಬ್ಯಾಂಕ್ ಪಾಸ್‌ಬುಕ್ ಹಾಗೂ ಮೊದಲ ತಿಂಗಳ ವಂತಿಕೆಯೊಂದಿಗೆ ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ (ಸಿಎಸ್‌ಸಿ) ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಅಸಂಘಟಿತ ವಲಯದ ಕಾರ್ಮಿಕರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳುವ ನಿಟ್ಟಿನಲ್ಲಿ ವ್ಯಾಪಕ ಜಾಗೃತಿ ಮೂಡಿಸಿ, ಸೂಕ್ತಸ್ಥಳಗಳಲ್ಲಿ ಹಾಗೂ ಸಂತೆ ಮತ್ತು ಜಾತ್ರೆಗಳಲ್ಲಿ ಶಿಬಿರ ಆಯೋಜನೆಗೆ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ತಾಲೂಕಾ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನೋಂದಣಿಗೆ ವಿವಿಧ ಅಸಂಘಟಿತ ವಲಯಗಳ ಸಂಘಟನೆಗಳ ಪ್ರತಿನಿಧಿಗಳು ಜನರಲ್ಲಿ ಅರಿವು ಮೂಡಿಸುವ ಕೆಲಸ ಆಗಬೇಕು ಎಂದರು.

ಅಸಂಘಟಿತ ವಲಯದ ಕಾರ್ಮಿಕರಿಗೆ ನೀಡುವ ಸ್ಮಾರ್ಟ ಕಾರ್ಡ ಕಚೇರಿಗೆ ಬಂದು ಬಹಳ ದಿನವಾಗಿದ್ದು, ವಿತರಣೆಗೆ ವಿಳಂಭವಾಗುತ್ತಿದೆ ಎಂದು ವಿವಿಧ ವಲಯದ ಸಂಘಟನೆಗಳ ಪ್ರತಿನಿಧಿಗಳು ಸಭೆಗೆ ತಿಳಿಸಿದ ಕುರಿತು ಮಾತನಾಡಿದ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಒಂದು ವಾರದಲ್ಲಿ ಸ್ಮಾರ್ಟ ಕಾರ್ಡಗಳ ವಿತರಣೆಗೆ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ವಾಹನ ಚಾಲಕರ ಕಾರ್ಡಗಳನ್ನು ಸಾಂಕೇತಿಕವಾಗಿ ವಿತರಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ಕಾರ್ಮಿಕ ನಿರೀಕ್ಷಕರಾದ ರಾಜಶೇಖರ, ರಮೇಶ ಒಂಗಿ, ಅಶೋಕ ವಡ್ಡರ, ರಾಕೇಶ ಹಾಗೂ ಅಸಂಘಟಿತ ವಲಯದ ವಿವಿಧ ಸಂಘಟನೆಗಳ ಪ್ರತಿನಿಧಿಗಳಾದ ನೂರಂದ ತೋಟದ, ಪರಶುರಾಮ ಕಂಬಾರ, ಸುರೇಶ ಹಡಪದ, ಕಟ್ಟಡ ಕಾರ್ಮಿಕ ಸಂಘದ ರವಿಕುಮಾರ ನಾಗನಗೌಡ ಹಾಗೂ ಇತರರು ಉಪಸ್ಥಿತರಿದ್ದರು.

## ನಾಲಾಯಕ್ ಸಾಧನೆ: ವಿಜಯೇಂದ್ರ



**ಬೆಳಗಾವಿ:** 60 ವರ್ಷ ದೇಶವನ್ನಾಳಿದ ಕಾಂಗ್ರೆಸ್ ಪಕ್ಷವು ಈ ದೇಶದಲ್ಲಿ ಬಡತನ ನಿರ್ಮೂಲನೆ ಮಾಡುವುದಾಗಿ ಹೇಳಿತ್ತು. ಇಂಥ ಲಜ್ಜೆಗೆಟ್ಟ ಕಾಂಗ್ರೆಸ್ ಪಕ್ಷವು ಈ ದೇಶದಲ್ಲಿ ಬಡವರನ್ನು ನಿರ್ಮೂಲನೆ ಮಾಡಿದರೇ ಹೊರತು ಬಡವರ ಬಡತನ ನಿರ್ಮೂಲನೆ ಮಾಡಲು ಇವರಿಂದ ಆಗಿಲ್ಲ ಎಂದು ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ. ಇಂದು ವಿಬಿ ಜಿ ರಾಮ್ ಜಿ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಪುಡಾರಿಗಳು ಶ್ರೀಮಂತರಾದರು ಎಂದು ಟೀಕಿಸಿದ್ದಾರೆ.

## ಸಾರ್ವಜನಿಕರಲ್ಲಿ ಬ್ಯಾಂಕಿಂಗ್ ವ್ಯವಹಾರ ಹಾಗೂ ಆರ್ಥಿಕ ಶಿಸ್ತಿನ ಅರಿವು



**ಕೊಪ್ಪಳ:** ಸಾರ್ವಜನಿಕರಲ್ಲಿ ಬ್ಯಾಂಕಿಂಗ್ ವ್ಯವಹಾರ ಹಾಗೂ ಆರ್ಥಿಕ ಶಿಸ್ತಿನ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್ ವತಿಯಿಂದ ಫೆ. 9 ರಿಂದ 13 ರವರೆಗೆ ಕೊಪ್ಪಳ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾದ ಐದು ದಿನಗಳ ಆರ್ಥಿಕ ಸಾಕ್ಷರತಾ ಸಪ್ತಾಹದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.

ಹಣಕಾಸು ಸೇವೆಗಳ ಇಲಾಖೆ ಹಾಗೂ ಭಾರತೀಯ ರಿಸರ್ವ್ ಬ್ಯಾಂಕ್ (ಆರ್.ಬಿ.ಐ) ನಿರ್ದೇಶನದಂತೆ ಜಿಲ್ಲಾ ಮಾರ್ಗದರ್ಶಕ ಬ್ಯಾಂಕ್ ವತಿಯಿಂದ ಕುಣಕೇರಿ ಗ್ರಾಮದಲ್ಲಿ ಆಯೋಜಿಸಿಲಾದ ಈ ಕಾರ್ಯಕ್ರಮದ ಅಂಗವಾಗಿ ಉಪಸ್ಥಿತರಿದ್ದ ಜನರಿಗೆ ಸಪ್ತಾಹದ ಮುಖ್ಯ ಉದ್ದೇಶವಾಗಿ ನಿಮ್ಮ ಖಾತೆ, ನಿಮ್ಮ ಹಣ, ಎರಡನೆಯದಾಗಿ ಅಪರಿಚಿತ ಲಿಂಕ್‌ಗಳು, ಅಪರಿಚಿತ ಅಪಾಯಗಳು ಹಾಗೂ ನಿಮ್ಮ ಕೇವೈಸಿಯನ್ನು ನವೀಕರಿಸಲಾಗುವುದು ಮತ್ತು ಕೆವೈಸಿ ಐಡಿ ನಿಮ್ಮ ಎಲ್ಲಾ ಕೆವೈಸಿ ಅಗತ್ಯಗಳಿಗೆ ಒಂದು ಕೀಲಿಕೈ ಎಂಬ ನಾಲ್ಕು ಅಂಶಗಳ ಬಗ್ಗೆ ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಭಾರತೀಯ ರಿಜರ್ವ್ ಬ್ಯಾಂಕಿನ ವ್ಯವಸ್ಥಾಪಕ ಮೌನಿರಾಜ ಬ್ರಹ್ಮ, ಕೊಪ್ಪಳ ಲೀಡ್ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ಮಾರುತಿ ಕೆ. ಕರಪಾನಿ, ಕುಣಕೇರಿ ಕೆನರಾ ಬ್ಯಾಂಕ್ ವ್ಯವಸ್ಥಾಪಕ ಅಲ್ಲಾಬಕ್ಷಾ ನದಾಫ್, ಆರ್ಥಿಕ ಸಾಕ್ಷರತಾ ಕೇಂದ್ರದ ಸಲಹೆಗಾರ ಬಸವರಾಜ ವಡಗೇರಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಈ ಸಪ್ತಾಹ ಕಾರ್ಯಕ್ರಮ ಫೆ. 13 ರವರೆಗೆ ನಡೆಯಲಿದೆ ಎಂದು ಕೊಪ್ಪಳ ಲೀಡ್ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ಮಾರುತಿ ಕೆ. ಕರಪಾನಿ ಅವರು ತಿಳಿಸಿದ್ದಾರೆ.

## ರಾಷ್ಟ್ರಮಟ್ಟದ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿಗೆ ಸೋಮನಾಥ ದೋಟಿಹಾಳ ಆಯ್ಕೆ

**ಕೊಪ್ಪಳ:** ನಾಡಿನ ವಿವಿಧ ಕ್ಷೇತ್ರಗಳಲ್ಲಿ ಅನುಪಮ ಸೇವೆ ಸಲ್ಲಿಸುತ್ತಿರುವ ಸಾಧಕರಿಗೆ ಜಾನಪದ ಕಲಾವಿದರ ಒಕ್ಕೂಟ (ರಿ), ಮೈಸೂರು ವಿಭಾಗ ಇವರು ಕೊಡಮಾಡಲ್ಪಡುವ 2025–26ನೇ ಸಾಲಿನ ರಾಜ್ಯ ಮಟ್ಟದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿಗೆ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ದೋಟಿಹಾಳ ಗ್ರಾಮದ ಬರಹಗಾರ, ಸಾಹಿತಿ ಸೋಮನಾಥ ಸೋಮನಾಥ ಅವರು ಆಯ್ಕೆಯಾಗಿದ್ದಾರೆ.



ಸುಮಾರು 20 ವರ್ಷಗಳಿಂದ ಯಾವುದೇ ಪ್ರಚಾರ ಬಯಸದೇ ಸಾಹಿತ್ಯಕ ಬರವಣಿಗೆಯಲ್ಲಿ ತೊಡಗಿಸಿಕೊಂಡಿರುವ ದೋಟಿಹಾಳ ಸೋಮನಾಥ ಅವರು ಒಂದು ಕವಿತಾ ಸಂಕಲನ, ಸಂಪದನಾ ಕೃತಿ ಸೇರಿ, ಹಲವಾರು ಮೌಲಿಕ ಬರೆಹಗಳು ನಾಡಿನ ದಿನಪತ್ರಿಗಳಲ್ಲಿ ಪ್ರಕಟಿತಗೊಂಡಿವೆ. ಹಾಗೂ ಹೋಬಳಿ, ಜಿಲ್ಲೆ, ವಿಭಾಗ, ರಾಜ್ಯ ಮಟ್ಟದ ಕವಿಗೋಷ್ಠಿ, ಸಾಹಿತ್ಯಕ ಸಮೇಳನ, ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಕನ್ನಡ ಸಾಹಿತ್ಯಕ ಬರವಣಿಗೆಯಲ್ಲಿ ತೊಡಗಿಸಿಕೊಂಡಿರುವ ಸೋಮನಾಥರನ್ನು ಜಾನಪದ ಕಲಾವಿದರ ಒಕ್ಕೂಟ (ರಿ), ಮೈಸೂರು ಸಂಸ್ಥೆಯು ಸಾಹಿತ್ಯ ಕ್ಷೇತ್ರದಲ್ಲಿನ ಸೇವೆ ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು,ಮೈಸೂರ ನಗರದ ಕೃಷ್ಣಮೂರ್ತಿಪುರಂ ನಲ್ಲಿರುವ ನಮನ ಕಲಾ ಮಂಟಪದಲ್ಲಿ ಫೆಬ್ರವರಿ 21ನೇ ಶನಿವಾರದಂದು ಪ್ರಶಸ್ತಿ ಪ್ರಧಾನ ಮಾಡಲಾಗುವುದೆಂದು ಸಂಸ್ಥೆಯ ಅಧ್ಯಕ್ಷ ಆರ್. ಕೆ.ಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಹಿತಿ ದೋಟಿಹಾಳ ಸೋಮನಾಥ ಅವರು ರಾಜ್ಯ ಸ್ನೇಹ ಬಳಗ, ಸಹದ್ಯೋಗಿಗಳು ಸಂತಸ ವ್ಯಕ್ತಪಡಿಸಿ ಅಭಿನಂದನೆ ತಿಳಿಸಿದ್ದಾರೆ.

## ನಿರ್ದೇಶಕ ಜೋಸೈಮನ್ ಇನ್ನಿಲ್ಲ

**ಬೆಂಗಳೂರು:** ಸಾಹಸ ಸಿಂಹ ವಿಷ್ಣುವರ್ಧನ್ ನಟನೆಯ



ಸಾಹಸ ಸಿಂಹ ಮತ್ತು ಅಂಬರೀಶ್ ಅಭಿನಯದ ಏಜೆಂಟ್ ಅಮರ್ ಸೂಪರ್ ಹಿಟ್ ಗಳ ನಿರ್ದೇಶಕ ಜೋಸೈಮನ್ ಹೃದಯಾಘಾತದಿಂದ ನಿಧನರಾಗಿದ್ದಾರೆ. ಫಿಲ್ಮ್ ಚೇಂಬರ್ ಸಭೆಯಲ್ಲಿ ಭಾಗಿಯಾಗಿದ್ದ ನಿರ್ದೇಶಕ ಜೋ ಸೈಮನ್ ಅವರಿಗೆ ಸಭೆಯಲ್ಲಿದ್ದಾಗಲೇ ಹೃದಯಾಘಾತವಾಗಿದೆ. ತಕ್ಷಣ ಅವರನ್ನು ಬೆಂಗಳೂರಿನ ಮಲ್ಲಿಗೆ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಚಿಕಿತ್ಸೆ ಫಲಿಸದೇ ಕೊನೆಯುಸಿರೆಳೆದಿದ್ದಾರೆ.

# ಜನಪರ, ಜೀವಪರ ಕಾರ್ಯ ಮಾಡಿದವರ ಸ್ಮರಣೆ

• **ಪರಶುರಾಮ ಕರಣಂ, ಭಾಲ್ಕಿ**

ಪಟ್ಟಣದಲ್ಲಿ ಫೆ.16ರಂದು ಸೋಮವಾರ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ 24ನೇ ರಾಷ್ಟ್ರೀಯ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ತಿಳಿಸಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಅಂದು ಸಾಯಂಕಾಲ 5 ಗಂಟೆಗೆ ಚನ್ನಬಸವಾಶ್ರಮ ಪರಿಸರದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ದಿವ್ಯ ಸಾನ್ನಿಧ್ಯದಲ್ಲಿ ಅಭಿನಂದನಾ ಸಮಾರಂಭ ಜರುಗಲಿದೆ ಎಂದರು.

ಹಿರೇಮಠ ಸಂಸ್ಥಾನ ಸಮಾಜದಲ್ಲಿ ಜನಪರ ಜೀವಪರ ಕಾರ್ಯಗಳನ್ನು ಕೈಗೊಳ್ಳವರನ್ನು ಸದಾ ಗುರುತಿಸುವುದರ ಜತೆಗೆ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ಸಾಹಿತಿಕ ಕ್ಷೇತ್ರಗಳಲ್ಲಿ ಉತ್ತಮ ಸಾಧನೆಗೈದವರನ್ನು ಅಭಿನಂದಿಸಿ, ಪ್ರೋತ್ಸಾಹಿಸುವ ಕಾರ್ಯ ಮಾಡುತ್ತ ಬರುತ್ತಿದೆ.

ಅದರಂತೆ ನಮ್ಮ ಶ್ರೀಮಠದ ಪರಮ ಶಿಷ್ಯರು ಆಗಿರುವ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ 24ನೇ ರಾಷ್ಟ್ರೀಯ ಅಧ್ಯಕ್ಷರಾಗಿದ್ದು, ನಮ್ಮೆಲ್ಲರಿಗೂ ಅತೀವ ಸಂತಸವನ್ನುವುಂಟು ಮಾಡಿದೆ.

ಈ ಭಾಗದ ಅಭಿವೃದ್ಧಿ ಮತ್ತು ಸಮುದಾಯದ ಪ್ರಗತಿಯಲ್ಲಿ ಖಂಡ್ರೆ ಪರಿವಾರದ ಕೊಡುಗೆ ದೊಡ್ಡದಿದೆ. ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಕಟ್ಟಿಬೆಳೆಸಿದ ನೂತನ ಅನುಭವ ಮಂಟಪದ ಪೂರ್ನನಿರ್ಮಾಣದ ನೀಲನಕಾಶೆಯನ್ನು ಸಚಿವರಿದ್ದ ಸಂದರ್ಭದಲ್ಲಿ ಈಶ್ವರ ಖಂಡ್ರೆ ಅವರು ಸಿದ್ಧಪಡಿಸಿ ಪ್ರಸ್ತುತ ಜಿಲ್ಲಾ ಉಸ್ತುವಾರಿ ಸಚಿವರಾಗಿ ಅನುಭವ ಮಂಟಪದ ಕಾಮಗಾರಿಗೆ ಅನುದಾನದ ಕೊರತೆ ಆಗದಂತೆ ನೋಡಿಕೊಂಡಿದ್ದಾರೆ.

ಇಂತಹ ಅನೇಕ ವಿಧಾಯಕ ಕಾರ್ಯಗಳು ಅವರು ಮಾಡುತ್ತಿದ್ದಾರೆ. ಅವರು ಅಭಿವೃದ್ಧಿ ಕೆಲಸದ ಜತೆಗೆ ಧಾರ್ಮಿಕ, ಸಮುದಾಯದ ಬೆಳವಣಿಗೆಗೆ ಅವಿರತವಾಗಿ ಶ್ರಮಿಸುತ್ತಿದ್ದಾರೆ.

ಅಂತಹ ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಾರಂಭ ಹಿರೇಮಠ ಸಂಸ್ಥಾನದ ಸಹಯೋಗದಲ್ಲಿ ನಡೆಯಲಿದ್ದು ವಿವಿಧ ಸಂಘ ಸಂಸ್ಥೆಗಳು ಕೂಡ ಕೈಜೋಡಿಸಿವೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಅಭಿನಂದನಾ ಸಮಾರಂಭ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.



### ಸಮಿತಿ ಅಧ್ಯಕ್ಷರಾಗಿ ರಾಜಶೇಖರ ಅಷ್ಟೂರೆ ಆಯ್ಕೆ

**ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಿತಿ ಅಧ್ಯಕ್ಷರನ್ನಾಗಿ ಹಿರಿಯ ನ್ಯಾಯವಾದಿ ರಾಜಶೇಖರ ಅಷ್ಟೂರೆ ಅವರನ್ನು ಆಯ್ಕೆ ಮಾಡಲಾಗಿದೆ. ಸಮಿತಿ ಅಧ್ಯಕ್ಷ ಅಷ್ಟೂರೆ ಅವರನ್ನು ಪೂಜ್ಯರು ಸನ್ಮಾನಿಸಿ, ಆಶೀರ್ವದಿಸಿದರು. ಸುದ್ದಿಗೋಷ್ಠಿಯಲ್ಲಿ ಅಭಿನಂದನಾ ಸಮಿತಿ ಅಧ್ಯಕ್ಷ ರಾಜಶೇಖರ ಅಷ್ಟೂರೆ, ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಮಾಜಿ ಅಧ್ಯಕ್ಷ ಚಂದ್ರಕಾಂತ ಪಾಟೀಲ್, ಹಿರಿಯ ಮುಖಂಡ ಸುಭಾಷ ಕಾರಾಮುಂಗೆ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ, ತಾಲೂಕು ಜಾಗತಿಕ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಬಸವರಾಜ ಮರೆ, ತಾಲೂಕು ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ ಇದ್ದರು.**

**ವೀರಶೈವಲಿಂಗಾಯತಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಾರಂಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು, ಹಿತೈಷಿಗಳು ಖಂಡ್ರೆ ಅವರ ಅಭಿಮಾನಿಗಳು ಪಾಲ್ಗೊಂಡು ಯಶಸ್ಸುಗೊಳಿಸಬೇಕು. ಭಾಗವಹಿಸುವ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿದೆ.**

**–ಗುರುಬಸವ ಪಟ್ಟದ್ದೇವರು**
**ಹಿರೇಮಠ ಸಂಸ್ಥಾನ ಭಾಲ್ಕಿ**


## ಅಭಿಮಾನಿಗಳಿಂದ ಅದ್ದೂರಿ ಹುಟ್ಟುಹಬ್ಬ ಆಚರಣೆ

• **ಮಲ್ಲಮ್ಮ ನುಡಿ ವಾರ್ತೆ ಪೀಣ್ಯ, ದಾಸರಹಳ್ಳಿ**

ಸಮೀಪದಯಲಹಂಕಕ್ಷೇತ್ರದಹೆಸರಘಟ್ಟಮುಖ್ಯರಸ್ತೆಯ ಕೊಡಗಿ ತಿರುಮಳಾಪುರದಲ್ಲಿ ಆದಿ ಜಾಂಬವ ಯುವ ಬ್ರಿಗೇಡ್ ಸಂಸ್ಥಾಪಕ, ಕೆಪಿಸಿಸಿ ರಾಜ್ಯ ಸಂಚಾಲಕರಾದ ಡಾ.ಹೆಚ್.ವಿಶ್ವನಾಥ್ ಅವರಹುಟ್ಟುಹಬ್ಬವನ್ನುಹಿತೈಷಿಗಳು, ಸ್ನೇಹಿತರು ಹಾಗೂ ಅಭಿಮಾನಿಗಳು ಅದ್ದೂರಿಯಾಗಿ ಗೆಳೆಯೋತ್ಸವ ವಾಗಿ ಹುಟ್ಟು ಹಬ್ಬವನ್ನು ಆಚರಿಸಿದರು.

ಈ ಕಾರ್ಯಕ್ರಮಕ್ಕೆಮುಖ್ಯಅತಿಥಿಗಳಾಗಿ ಕರ್ನಾಟಕ ಪ್ರಥಮಮಹಿಳಾ ಅಘೋರಿ ಅಖಿಲ ಭಾರತೀಯ ಅಗೋರ್ ಭೈರವ್ ಮಹಾಸಭಾ ಮಹಿಳಾ ಅಧ್ಯಕ್ಷರಾದ ಡಾ.ಆಗರ್ಬನಾ ಗೋರ್ ಭೈರವಿ ಅವರು ಆಗಮಿಸಿ ಹುಟ್ಟುಹಬ್ಬಕ್ಕೆ ಶುಭ ಹಾರೈಸಿ ನಿಮ್ಮೆಲ್ಲರ ಆಶೀರ್ವಾದ ಹಾರೈಕೆ ಸದಾ ಇರಲಿ ಹಾಗೂ ಇವರು ಮುಂದಿನ ದಿನಗಳಲ್ಲಿ ರಾಜಕೀಯ ರಂಗದಲ್ಲಿ ಉನ್ನತ ಸ್ಥಾನ ಮಾನ ಗಳಿಸಲಿ ಎಂದು ಆಶೀರ್ವದಿಸಿದರು.

ಕುಟುಂಬಸ್ಥರಿಂದ ಪಾದ ಪೂಜೆಯನ್ನು ನೆರವೇರಿಸಲಾಯಿತು. ಈ ವೇಳೆ ಮಾತನಾಡಿದ ಡಾ.ಹೆಚ್.ವಿಶ್ವನಾಥ್, 'ನನ್ನ ಹುಟ್ಟುಹಬ್ಬಕ್ಕೆ ನೀವೆಲ್ಲರೂ ಬಂದು ನನಗೆ ಹಾರೈಸಿರುವುದು ನನ್ನ ಸಂತೋಷವನ್ನು ಇಮ್ಮಡಿಗೊಳಿಸಿದೆ. ನನ್ನ ಈ ಪಯಣದಲ್ಲಿ ಸದಾ ಬೆನ್ನೆಲುಬಾಗಿ ನಿಂತಿರುವ ನನ್ನ ಹಿತೈಷಿಗಳಿಗೆ ಮತ್ತು ಪ್ರತಿ ಹಂತದಲ್ಲೂ ಸಾಥ್ ನೀಡುವ ಗೆಳೆಯರಿಗೆ ನಾನು ಚಿರಋಣಿಯಾಗಿದ್ದೇನೆ. ನಿಮ್ಮ ಈ ಪ್ರೀತಿ ಮತ್ತು ಹಾರೈಕೆ ಸದಾ ನನ್ನ ಮೇಲಿರಲಿ', ಎಂದು ಹೇಳಿದರು.



ಈ ಸಂದರ್ಭದಲ್ಲಿ ಸಫಾಯಿ ಕರ್ಮಚಾರಿ ನಿಗಮದ ಅಧ್ಯಕ್ಷರಾದ ಅಶೋಕ್ ಸಾಲಪ್ಪ, ಕೋಗಿಲೆ ಎಂ.ವೆಂಕಟೇಶ್, ಸತೀಶ್, ಕನ್ನಡಿಗರ ಯುವ ಸೇನೆ ರಾಜ್ಯಾಧ್ಯಕ್ಷರಾದ ರಾಮ್ ಪ್ರಸಾದ್, ಹೆಸರಘಟ್ಟ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಲೇಖಕರಾದ ಮಂಜುನಾಥ್ ಅದ್ದೆ, ಗಿರೀಶ್ ಗೌಡ, ಸುನೀತಾಬಾಯಿ ಎಲ್,ಆರ್.ಪ್ರಮೀಳಾಭಾಸ್ಕರ್,ಭಜರಂಗಿ ಚೆಲುವರಾಜು, ನಟ ದೇವ, ಕೆಂಡ ಸಂಪಿಗೆ ನಾಯಕ ನಟ ವಿಕ್ಕಿ ವರುಣ್, ಶಿವರಾಜ್ ಕೆಆರ್ ಪೇಟೆ, ಡಾ.ರಾಮಯ್ಯ, ಪತ್ರಕರ್ತರಾದ ರ. ನರಸಿಂಹಮೂರ್ತಿ, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂತೋಷ್ ಕುಮಾರ್,ರುದ್ರೇಗೌಡರು,ತಮ್ಮೇನಹಳ್ಳಿ ಜಯರಾಮ್,ಗಿರೀಶ್ ಹಾಗೂ ಕುಟುಂಬಸ್ಥರುಮುಂತಾದವರುಸಾವಿರಾರುಸಂಖ್ಯೆಯಲ್ಲಿ ಭಾಗವಹಿಸಿ ಹುಟ್ಟುಹಬ್ಬಕ್ಕೆ ಶುಭ ಕೋರಿದರು.

## ಕರಿಬಸವೇಶ್ವರನ ಜಾತ್ರಾಮಹೋತ್ಸವ ರಥೋತ್ಸವ

• **ವರದಿ: ಶರಣಬಸಪ್ಪ ದಾನಕೈ, ಯಲಬುರ್ಗಾ**

ತಾಲೂಕಿನ ಸುಕ್ಷೇತ್ರ ಶಿರಗುಂಪಿ ಗ್ರಾಮದ ಶ್ರೀ ಕರಿಬಸವೇಶ್ವರ ಮಠದಲ್ಲಿ 11 ನೆಯ ವರ್ಷದ ಜಾತ್ರಾಮಹೋತ್ಸವ,ರಥೋತ್ಸವ ಹಾಗೂ ತುಲಾಭಾರ ಕಾರ್ಯಕ್ರಮ ಅದ್ದೂರಿಯಾಗಿ ಜರುಗುವದು. ಶ್ರೀ ಕರಿಬಸವೇಶ್ವರ ಸ್ವಾಮಿಯ ಮಹಿಮೆ ಅಪಾರವಾಗಿದೆ. ಪ್ರೇತ, ಪಿಶಾಚಿಗಳಿಂದ ಪೀಡಿತರಾದವರು ಮನೋರೋಗದಿಂದ ನರಳುತ್ತ ಇರುವಂತಹ ಹಾಗು ತಮ್ಮ ಬೇಕು ಬೇಡಿಕೆಗಳ ಇಡೇರಿ–ಕೆಗಾಗಿ ಈ ಮಹಾ ಮಹಿಮ ಶ್ರೀ ಕರಿಬಸವೇಶ್ವರನ ಗದ್ದುಗೆಗೆ ಭಕ್ತಿ ಭಾವದಿಂದ ದರ್ಶನ ಮಾಡಿದಾಗ ಸಕಲ ಕಷ್ಟಗಳು ದೂರ ಆಗುತ್ತವೆ ,ಅದರಂತೆ ನಂಬಿದವರ ಕೈ ಬಿಟ್ಟಿಲ್ಲ ಇದರಿಂದ ಭಕ್ತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಾ ಹೋಗುತ್ತದೆ ಇದು ಪವಾಡವಾಗಿದೆ. ಈ ಕಾರ್ಯಕ್ರಮದಲ್ಲಿ ಶಿರಗುಂಪಿಯ ಹಿರೇಮಠದ ಜಂಗಮ ಮೂರ್ತಿಗಳು ಸಾನಿಧ್ಯ ವಹಿಸುವರು. ಮಾತೋಶ್ರೀ ನೀಲಮ್ಮ ತಾಯಿ ಸಾನಿಧ್ಯವಹಿಸುವರು. ಅಮರಗೋಳದ ಮಾತೋಶ್ರೀ ಬಸಮ್ಮ ಹೂಗಾರ ನೇತೃತ್ವ ವಹಿಸುವರು, 11 ದಿನಗಳ ವರೆಗೆ ಶ್ರೀ ಶರಣಬಸವೇಶ್ವರ ಪುರಾಣವನ್ನು ಬಂಡಿಂ–ಮ ಶೇಖರಯ್ಯ ಶಾಸ್ತ್ರೀ, ಪ್ರವಚನ ನೀಡಿದರು. ಗದಗಿನ ಪಂಚಾಕ್ಷರಯ್ಯ ಇಟಗಿಮಠ, ಬಸವರಾಜ ಕುರಹಟ್ಟಿ ಸಂಗೀತ ಸೇವೆ ನೀಡುವರು. ಫೆ.14 ರಂದು ಬೆಳಿಗ್ಗೆ 9 ಗಂಟೆಗೆ ಶ್ರೀ ಕರಿಬಸವೇಶ್ವರ ಭಾವಚಿತ್ರ ಮೆರವಣಿಗೆಯು ಗ್ರಾಮದ ಪ್ರಮುಖ



ರಾಜ ಬೀದಿಗಳಲ್ಲಿ ಸುಮಂಗಳಿಯರ ಕಳಸ ಕನ್ನಡಿಯೊಂದಿಗೆ ಡೋಳ್ಳು, ಕರಡಿ ಮಜಲು ಸಕಲ ವಾದ್ಯ ವೈಭವಗಳೊಂದಿಗೆ ಮೆರವಣಿಗೆ ಸಾಗಿ ಬೆಳಗ್ಗೆ 11 ಕ್ಕೆ ಶ್ರೀಮಠಕ್ಕೆ ತಲುಪುವದು. ಫೆ.15 ರಂದು ಮಹಾಶಿವರಾತ್ರಿ ಪ್ರಯುಕ್ತ ಬೆಳಿಗ್ಗೆ 6 ಗಂಟೆಗೆ ರುದ್ರಾಭಿಷೇಕ ಪೂಜಾ ವಿಧಿ ವಿಧಾನಗಳು ಜರಗಿ ಮಧ್ಯಾಹ್ನ 12 ಗಂಟೆಗೆ ಮಾತೋಶ್ರೀ ನೀಲಮ್ಮ ತಾಯಿ ಹೂಗಾರ ಇವರ ತುಲಾಭಾರ ಕಾರ್ಯಕ್ರಮ ಮತ್ತು ಪುರಾಣ ಮಹಾಮಂಗಲ ಹಾಗೂ ಮಹಾಪ್ರಸಾದ ಜರುಗಿ ಸಂಜೆ 4.45 ಗಂಟೆಗೆ ಮಹಾ ರಥೋತ್ಸವ ಜರಗುವುದು, ಕೊಪ್ಪಳ ಗದಗ ಬಳ್ಳಾರಿ ಧಾರವಾಡ ಜಿಲ್ಲೆಯ ಸುತ್ತಮುತ್ತಲಿನ ಅಪಾರ ಭಕ್ತರು ಭಾಗವಹಿಸುವರು ಎಂದು ಶಿರಗುಂಪಿಯ ಶ್ರೀ ಕರಿಬಸವೇಶ್ವರ ಸೇವಾ ಸಮಿತಿಯವರು ಯಶಸ್ವಿ ಗೋಳಿಸಬೇಕೆಂದು ತಿಳಿಸಿದ್ದಾರೆ.

# 20ನೇ ವಾರ್ಷಿಕೋತ್ಸವ ಹಾಗೂ "ಸಂಗೀತ ಸೌರಭ"

• **ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ**

ಕಲ್ಯಾಣ ನಾಡಿನ ಸಾಂಸ್ಕೃತಿಕ ವೈಭವವನ್ನು ಮೆರೆದಾಡುತ್ತಿರುವ ಕಲ್ಯಾಣ ನಾಡು ಗ್ರಾಮೀಣ ಜನಪದ ಕಲಾವೃಂದ ಸಂಘ (ರಿ.), ಬಸವಕಲ್ಯಾಣ ಸಂಸ್ಥೆಯ 20ನೇ ವಾರ್ಷಿಕೋತ್ಸವ ಹಾಗೂ "ಸಂಗೀತ ಸೌರಭ" ಭವ್ಯ ಸಾಂಸ್ಕೃತಿಕ ಕಾರ್ಯಕ್ರಮವು ಫೆಬ್ರವರಿ 14, ಶನಿವಾರ ಮುಂಜಾನೆ 10:30 ಗಂಟೆಗೆ ತ್ರಿಪೂರಾಂತದ ಶ್ರೀ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯ ಗವಿ ಮಠ ನಲ್ಲಿ ವೈಭವದಿಂದ ಜರುಗಲಿದೆ.

ಪಾವನ ಸನ್ನಿಧಾನದಲ್ಲಿ ಪ.ಪೂ. ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಆಶೀರ್ವಚನ ನೀಡಲಿದ್ದಾರೆ. ಕಾರ್ಯಕ್ರಮವನ್ನು ಮಾನ್ಯ ಜಿಲ್ಲಾಧಿಕಾರಿಗಳಾದ ಶ್ರೀಮತಿ ಶೀಲ್ಪಾಶರ್ಮಾ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಜನಪದ ಅಕಾಡೆಮಿ ಅಧ್ಯಕ್ಷರಾದ ಶ್ರೀ ಶಿವಪ್ರಸಾದ ಗೋಲ್ಲಹಳ್ಳಿ ವಹಿಸಲಿದ್ದಾರೆ. ಕಾರ್ಯಾಧ್ಯಕ್ಷರಾಗಿ ಬಸವಕಲ್ಯಾಣ ಶಾಸಕರಾದ ಶ್ರೀ ಶರಣು ಸಲಗರ ಉಪಸ್ಥಿತರಿರುವರು.

ಈ ಸಮಾರಂಭದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯರು, ವಿವಿಧ ಇಲಾಖೆಗಳ ಗಣ್ಯರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು, ನಗರಸಭೆ ಹಾಗೂ ತಾಲೂಕು ಪಂಚಾಯತ್ ಪ್ರತಿನಿಧಿಗಳು ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

**ಸಾಂಸ್ಕೃತಿಕ ರಸದೌತಣ:** "ಸಂಗೀತ ಸೌರಭ" ಕಾರ್ಯಕ್ರಮದಲ್ಲಿ ಹಿಂದೂಸ್ತಾನಿ ಸಂಗೀತ, ಸುಗಮ ಸಂಗೀತ, ಕಥಾಕೀರ್ತನೆ, ಜಾನಪದ, ತತ್ವಪದ, ವಚನ ಸಂಗೀತ ಹಾಗೂ ಗೀಗಿ ಪದಗಳ ವೈವಿಧ್ಯಮಯ ಪ್ರದರ್ಶನಗಳು ಜರುಗಲಿವೆ. ಆಕಾಶವಾಣಿ ಖ್ಯಾತ ತಬಲಾವಾದಕರು ಹಾಗೂ ಪ್ರಾಂತ್ಯದ ಜನಪ್ರಿಯ ಕಲಾವಿದರು ತಮ್ಮ ಕಲಾತ್ಮಕತೆಯನ್ನು ಪ್ರದರ್ಶಿಸಲಿದ್ದಾರೆ.

ಜನಪದ ಕಲೆಯ ವೈಭವ, ಪರಂಪರೆಯ ಮೌಲ್ಯಗಳು ಹಾಗೂ ಭಕ್ತಿ–ಭಾವದ ಸಂಗೀತ ಮೇಳದ ಮೂಲಕ ಪ್ರೇಕ್ಷಕರಿಗೆ ಮನರಂಜನೆ ಹಾಗೂ ಮನೋಲ್ಲಾಸವನ್ನು ಉಣಬಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

**ಕಾರ್ಯಕ್ರಮದ ಮುಖ್ಯ ಅಂಶಗಳು**

- **20 ವರ್ಷಗಳ ಸಾಧನೆಯ ಸಂಭ್ರಮಾಚರಣೆ**
- **ಗಣ್ಯರ ಸನ್ಮಾನ**
- **ವಿವಿಧ ಪ್ರಕಾರಗಳ ಸಂಗೀತ ಹಾಗೂ ಜನಪದ ಕಲಾ ಪ್ರದರ್ಶನ**

**ಕಲಾವಿದರಿಗೆ ಗೌರವ ಸಮರ್ಪಣೆ**

ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಶ್ರೀ ವೀರಶೆಟ್ಟಿ ಮಲಶೆಟ್ಟಿ ಸ್ವಾಗತ ಹಾಗೂ ಪ್ರಾಸ್ತಾವಿಕ ನುಡಿಯನ್ನು ನೀಡಲಿದ್ದು, ಶ್ರೀ ರಮೇಶ ರಾಜೋಳೆ ನಿರೂಪಣೆ ಮಾಡಲಿದ್ದಾರೆ.

ಕಲ್ಯಾಣ ನಾಡಿನ ಎಲ್ಲಾ ಕಲಾಭಿಮಾನಿಗಳು, ಜನಪದ ಪ್ರೇಮಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

# ಅನ್ನದಾಸೋಹ ಭವನಕ್ಕೆ ಅಡಿಗಲ್ಲು: ರಾಮಲಿಂಗಾರೆಡ್ಡಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಶ್ರೀ ದತ್ತಾತ್ರೆಯನ ಸುಕ್ಷೇತ್ರವಾದ ದೇವಲ ಗಾಣಗಾಪೂರ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದ್ದು, ತಮ್ಮ ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡುವುದಾಗಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಶುಕ್ರವಾರ ಅಫಜಲಪೂರ ತಾಲೂಕಿನ ದೇವಲ ಗಾಣಗಾಪೂರದ ಶ್ರೀ ದತ್ತಾತ್ರೇಯನ ದರ್ಶನ ಪಡೆದು–ಕೊಂಡ ನಂತರ ದೇವಸ್ಥಾನದ ಅಡಿಯಲ್ಲಿ ಬರುವ ಶ್ರೀ ತಂತುಕೇಶ್ವರ ದೇವಸ್ಥಾನದ ಅನ್ನದಾಸೋಹ ಭವನಕ್ಕೆ ಅಡಿಗಲ್ಲು ನೆರವೇರಿಸಿ ಮಾತನಾಡಿದ ಅವರು, ದೇವಸ್ಥಾನದ ಭಕ್ತರುಗಳಾದ ವಿಜಯವಾಡ ಮೂಲದ ಶ್ರೀನಿವಾಸ ಮತ್ತು ಸುಕುಮಾರಿ ಕೊನೇರು ದಂಪತಿಗಳು ಅಂದಾಜು 2 ಕೋಟಿ ರೂ. ವೆಚ್ಚದಲ್ಲಿ ಅನ್ನದಾಸೋಹ ಭವನಕ್ಕೆ ನಿರ್ಮಿಸಲು ಮುಂದೆ ಬಂದಿರುವುದು ಸಂತೋಷದ ವಿಷಯ. ಹಣ ಎಲ್ಲರ ಬಳಿ ಇದೆ ಆದರೆ ದಾನ ಮಾಡುವ ಮನಸ್ಸು ಬೇಕಲ್ಲವೆ. ಇದಕ್ಕಾಗಿ ದಂಪತಿಗೆ ವಿಶೇಷ ಅಭಿನಂದನೆ ಸಲ್ಲಿಸುವೆ ಎಂದರು.

ಗಾಣಗಾಪೂರ ದೇವಸ್ಥಾನ ಕ್ಷೇತ್ರದ ಅಭಿವೃದ್ಧಿಗೆ ಈಗಾಗಲೆ ಕೇಂದ್ರ ಸರ್ಕಾರಕ್ಕೆ ಪ್ರಸಾದ ಯೋಜನೆಯಡಿ 83.52 ಕೋಟಿ ರೂ. ಮೊತ್ತದ ಕ್ರಿಯಾ ಯೋಜನೆಯ ಪ್ರಸ್ತಾವನೆ ಸಲ್ಲಿಸಲಾಗಿತ್ತಾದರು, ಕೇಂದ್ರ ಸರ್ಕಾರ ಅದನ್ನು ಪರಿಗಣಿಸಿಲ್ಲ. ಹೀಗಾಗಿ ಇಲ್ಲಿನ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲೆಯ ಶಾಸಕರೊಂದಿಗೆ ಚರ್ಚಿಸಿ ಲಕ್ಷಾಂತರ ಭಕ್ತರನ್ನು ಹೊಂದಿರುವ ಈ ದೇವಸ್ಥಾನದ ಅಭಿವೃದ್ಧಿಗೆ ತಾವು ಪ್ರಮಾಣಿಕ ಪ್ರಯತ್ನ ಮಾಡುವುದಾಗಿ ಅವರು ಭರವಸೆ ನೀಡಿದರು.

ಇದಕ್ಕು ಮುನ್ನ ಶಾಸಕ ಎಂ.ವೈ.ಪಾಟೀಲ್ ಮಾತನಾಡಿ, ದೇವಸ್ಥಾನಕ್ಕೆ ವರ್ಷಕ್ಕೆ ಒಂದು ಕೋಟಿಗೂ ಹೆಚ್ಚು ಭಕ್ತರು ದರ್ಶನಕ್ಕೆ ಬರುತ್ತಾರೆ. ಮೂಲಸೌಕರ್ಯ ಇಲ್ಲದಿರುವುದಕ್ಕೆ ಭಕ್ತರು ಶಾಪ ಹಾಕುತ್ತಿದ್ದಾರೆ. ಕೇಂದ್ರ ಸಚಿವ ನಿತಿನ್ ಗಡ್ಕರಿ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವಿಂದ್ರ ಫಡನವೀಸ್ ಸೇರಿದಂತೆ ಅನೇಕ ಗಣ್ಯರು ದೇವಸ್ಥಾನಕ್ಕೆ ಬಂದು ಹೋಗಿದ್ದಾರೆ. ಆದರೆ ದೇವಸ್ಥಾನ ಅಭಿವೃದ್ಧಿ ಕಂಡಿಲ್ಲ. ಸರ್ಕಾರ ವಿಶೇಷ ಕಾಳಜಿ ವಹಿಸಿ ಪ್ರಸಾದ್ ಯೋಜನೆ ಅಡಿಯಲ್ಲಿ ಹೆಚ್ಚಿನ ಅನುದಾನ ಒದಗಿಸಿ ದೇವಸ್ಥಾನ ಅಭಿವೃದ್ಧಿ ಮಾಡಬೇಕು ಎಂದು ಸಚಿವರಲ್ಲಿ ಮನವಿ ಮಾಡಿಕೊಂಡರು.

ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಕೆ.ಕೆ. ಆರ್.ಟಿ.ಸಿ ಅಧ್ಯಕ್ಷ ಅರುಣಕುಮಾರ ಪಾಟೀಲ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಕೆ.ಕೆ. ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕಿ ಡಾ.ಬಿ.ಸುಶೀಲಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ತಹಶೀಲ್ದಾರ ಸಂಜೀವಕುಮಾರ ದಾಸರ್, ಸಹಾಯಕ ಆಯುಕ್ತೆ ಸಾಹಿತ್ಯ, ಗಾಣಗಾಪೂರ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಶಿವಕಾಂತಮ್ಮ ಸೇರಿದಂತೆ ಅನೇಕ ಅಧಿಕಾರಿಗಳು ಇದ್ದರು.

ನಂತರ ಅತಿಥಿಗೃಹದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವ ರಾಮಲಿಂಗಾರೆಡ್ಡಿ ಅವರು 102 ಕೋಟಿ ರೂ. ಮೊತ್ತದಲ್ಲಿ ಗಾಣಗಾಪೂರ ಮತ್ತು 40 ಕೋಟಿ ರೂ. ಮೊತ್ತದಲ್ಲಿ ಘತ್ತರಗಾ ದೇವಸ್ಥಾನ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೂಲಂಕುಷವಾಗಿ ಚರ್ಚಿಸಿದರು. ಕಾಶಿ ಮಾದರಿಯಲ್ಲಿ ಗಾಣಗಾಪೂರ ಅಭಿವೃದ್ಧಿಗೆ ಜಮೀನು ಭೂಸ್ವಾಧೀನ ಅಗತ್ಯವಿದೆ ಮತ್ತು ಘತ್ತರಗಾ ಅಭಿವೃದ್ಧಿಗೆ ಅನುದಾನ ಲಭ್ಯವಿದ್ದು, ಸರ್ಕಾರ ಮಂಜೂರಾತಿ ನೀಡಬೇಕಿದೆ ಎಂಡು ಡಿ.ಸಿ. ಬಿ.ಫೌ–ಜಿಯಾ ತರನ್ನುಮ್ ನೀಲಿ ನಕ್ಷೆಯೊಂದಿಗೆ ಸಚಿವರ ಗಮನಕ್ಕೆತಂದಾಗ ಮುಂಬರುವ ಸೆಷನ್ ಸಂದರ್ಭದಲ್ಲಿ ಈ ಬಗ್ಗೆ ಬೆಂಗಳೂರಿನಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಭೂಸ್ವಾಧೀನ ಕುರಿತು ನಿರ್ಧಾರ ತೆಗದುಕೊಳ್ಳೋಣ ಎಂದರು.



### 3 ತಿಂಗಳಲ್ಲಿ ಘತ್ತರಗಾ ಅಭಿವೃದ್ಧಿ ಕಾರ್ಯಕ್ಕೆ ಚಾಲನೆ

**ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ ಅವರು, ಅಫಜಲಪೂರ ತಾಲೂಕಿನ ಘತ್ತರಗಾದ ಶ್ರೀ ಭಾಗ್ಯವಂತಿ ದೇವಸ್ಥಾನದ ಸಮಗ್ರ ಅಭಿವೃದ್ಧಿಗೆ 40 ಕೋಟಿ ರೂ. ಮೊತ್ತದ ಪ್ರಸ್ತಾವನೆ ಜಿಲ್ಲಾಡಳಿತದಿಂದ ಬಂದಿದ್ದು, ಕೂಡಲೆ ಅದಕ್ಕೆ ಅನುಮೋದನೆ ನೀಡಿ ಮುಂದಿನ 3–4 ತಿಂಗಳಿನಲ್ಲಿ ಭಕ್ತಾದಿಗಳ ಅನುಕೂಲಕ್ಕಾಗಿ ಮೂಲಸೌಕರ್ಯ ಕೆಲಸಗಳಿಗೆ ಚಾಲನೆ ನೀಡಲಾಗುವುದು ಎಂದರು.**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)